ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೨

**ಪಟ್ಟಿ – ೦೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೦೩ನೇ ಜುಲೈ ೨೦೧೫**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಶಿಥಿಲಗೊಂಡಿರುವ ಅಂಗನವಾಡಿ ಕೇಂದ್ರ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೪೭ (೧೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ದುಸ್ಥಿತಿಯಲ್ಲಿರುವ ಮತ್ತು ಶಿಥಿಲಗೊಂಡಿರುವ ಅಂಗನವಾಡಿ ಕೇಂದ್ರಗಳನ್ನು ಸರ್ಕಾರ ಗುರುತಿಸಿದೆಯೇ ; ಗುರುತಿಸಿದ್ದಲ್ಲಿ, ಜಿಲ್ಲಾವಾರು ವಿವರಗಳನ್ನು ನೀಡುವುದು ; ಇಲ್ಲದಿದ್ದಲ್ಲಿ, ಕಾರಣ ನೀಡುವುದು ;

(ಆ) ಪುಟ್ಟ ಮಕ್ಕಳ ರಕ್ಷಣೆಯ ಹಿತದೃಷ್ಟಿಯಿಂದ ಈ ಅಂಗನವಾಡಿಗಳ ಸ್ಥಳಾಂತರಕ್ಕೆ ಅಥವಾ ಕಟ್ಟಡಗಳ ದುರಸ್ಥಿಗೆ ಸರ್ಕಾರ ಯಾವಾಗ ಕ್ರಮಕೈಕೊಳ್ಳುವುದು ?

## ಕಂಪ್ಯೂಟರ್ ಶಿಕ್ಷಣಕ್ಕೆ ತಡೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೪೮ (೧೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರೌಢಶಾಲೆಗಳ ವಿದ್ಯಾರ್ಥಿಗಳಿಗೆ ಮಾಹಿತಿ ಸಿಂಧು ಉಚಿತ ಕಂಪ್ಯೂಟರ್ ಶಿಕ್ಷಣ ಹಾಗೂ ಕೇಂದ್ರ ಸರ್ಕಾರ ಸಹಯೋಗದ ಐಸಿಟಿ ಹಂತ–೧ ಮತ್ತು ೨ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ ಪ್ರಸ್ತುತ ಈ ಕಾರ್ಯಕ್ರಮ/ಯೋಜನೆಗಳು ಮುಂದುವರಿದಿವೆಯೇ ; ಅಥವಾ ಸ್ಥಗಿತಗೊಂಡಿವೆಯೇ ;

(ಆ) ಸ್ಥಗಿತಗೊಂಡಿದ್ದರೆ ಕಾರಣಗಳೇನು ;

(ಇ) ಸರ್ಕಾರಿ ಅನುದಾನಿತ ಪ್ರೌಢಶಾಲೆಗಳಿಗೆ ಸ್ಕ್ಯಾನರ್ ಜೆರಾಕ್ಸ್ ಯಂತ್ರ ಯುಪಿಎಸ್‌ಗಳನ್ನು ಪೂರೈಸಿ, ಕಂಪ್ಯೂಟರ್ ಪೂರೈಸಿಲ್ಲವೆಂಬ ದೂರುಗಳು ಬಂದಿರುವುದು ನಿಜವೇ ; ನಿಜವಿದ್ದಲ್ಲಿ ಕಾರಣಗಳೇನು ;

(ಈ) ಕಂಪ್ಯೂಟರ್ ಶಿಕ್ಷಣ ಅತ್ಯವಶ್ಯವಾಗಿದ್ದು ವಿದ್ಯಾರ್ಥಿಗಳ ಹಿತಾಸಕ್ತಿಯಿಂದ ಈ ಕಾರ್ಯಕ್ರಮ/ಯೋಜನೆಯನ್ನು ಪುನಃ ಪ್ರಾರಂಭಿಸಲು ಸರ್ಕಾರ ಚಿಂತಿಸುವುದೇ ?

## ರಾಜ್ಯದಲ್ಲಿ ಶಾಲಾ ಶಿಕ್ಷಕರ ಸುರಕ್ಷತಾ ಕ್ರಮಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೪೯ (೬೫೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಪ್ರೌಢ ಪ್ರಾಥಮಿಕ ಶಾಲಾ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು ; (ಪಟ್ಟಿ ನೀಡುವುದು)

(ಆ) ಇವುಗಳನ್ನು ಮಹಿಳೆಯರಿಗೆ ಪ್ರತ್ಯೇಕವಾಗಿ ಒದಗಿಸಿದ ಸೌಲಭ್ಯಗಳು ಯಾವುವು ;

(ಇ) ಎಷ್ಟು ಶಾಲಾ ಕಾಲೇಜುಗಳಲ್ಲಿ ಮಹಿಳಾ ಸಿಬ್ಬಂದಿಗೆ ಪ್ರತ್ಯೇಕ ವಿಶ್ರಾಂತಿ/ಸಿಬ್ಬಂದಿ ಕೊಠಡಿ ಶೌಚಾಲಯ ವ್ಯವಸ್ಥೆ ಮಾಡಲು ಕೈಗೊಳ್ಳುವ ಕ್ರಮಗಳೇನು ;

(ಈ) ಕಳೆದ ೦೨ ವರ್ಷಗಳಲ್ಲಿ ಮಹಿಳಾ ಸುರಕ್ಷತೆಗೆ ತೆಗೆದುಕೊಂಡ ಕ್ರಮಗಳೇನು ; ಒದಗಿಸಿದ ಅನುದಾನ ಎಷ್ಟು ?

## ಶೈಕ್ಷಣಿಕ ಸಂಸ್ಥೆಗಳಲ್ಲಿ ಮಹಿಳೆಯರ ಸುರಕ್ಷತೆಗೆ ತೆಗೆದುಕೊಂಡ ಕ್ರಮಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)** –

೩೫೦ (೬೫೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳೆಯರ ಸುರಕ್ಷತೆಗಾಗಿ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಕೆಗೆ ಹಣಕಾಸಿನ ಲಭ್ಯತೆ ಸಮಸ್ಯೆಯಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಆ ಶಾಲೆಗಳಲ್ಲಿ/ಕಾಲೇಜುಗಳಲ್ಲಿ ಇರುವ ಸಂಚಿತ ನಿಧಿ (R.R. Fund)ಯಿಂದ ಖರೀದಿಸಲು ಸರ್ಕಾರ ಅನುಮತಿಸುವುದೇ ?

## ಶಿಕ್ಷಣ ಇಲಾಖೆಯ ಕಛೇರಿಗಳಲ್ಲಿ ಮಹಿಳೆಯ ಸುರಕ್ಷತೆ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)** –

೩೫೧ (೬೫೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಿಕ್ಷಣ ಇಲಾಖೆಯ ಆಯುಕ್ತರು, ಉಪ ನಿರ್ದೇಶಕರು, ಬಿಇಓ ಕಛೇರಿಗಳು ಮತ್ತು ಶಿಕ್ಷಣ ಇಲಾಖೆಯ ಎಷ್ಟು ಕಛೇರಿಗಳು ಸ್ವಂತ ಕಟ್ಟಡಗಳನ್ನು ಹೊಂದಿದೆ ;

(ಆ) ಇವುಗಳಲ್ಲಿ ಎಷ್ಟು ಕಾರ್ಯಾಲಯಗಳಲ್ಲಿ ಮಹಿಳಾ ಕೊಠಡಿಯ ಸೌಲಭ್ಯವಿದೆ ; ಮಹಿಳೆಯರಿಗೆ ಒದಗಿಸಿರುವ ಸೌಲಭ್ಯಗಳಾವುವು ;

(ಇ) ಮಹಿಳೆಯರಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆ ಇದೆಯೇ ? (ಸಂಪೂರ್ಣ ವಿವರ ನೀಡುವುದು)

## ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೌಕರಿ ನೀಡುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫೨ (೨೦೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್:೧೦೦ಎಸ್‌ಸಿಎ:೧೯೯೫ ದಿನಾಂಕ: ೧೨–೦೯–೧೯೯೬, ಸಂಖ್ಯೆ : ಡಿಪಿಎಆರ್:೧೧:ಎಸ್.ಸಿ.ಎ:೧೯೯೭ ದಿ: ೩೧–೦೩–೧೯೯೯ ಹಾಗೂ ಸಂಖ್ಯೆ: ಡಿಪಿಎಆರ್:೧೧:ಎಸ್‌ಸಿಎ:೧೯೯೭ ದಿನಾಂಕ: ೧೧–೦೭–೨೦೧೨ರ ಆದೇಶಗಳ ಸೌಲಭ್ಯದಡಿಯಲ್ಲಿ ಸೇವೆಯಲ್ಲಿರುವಾಗಲೇ ನಿಧನ ಹೊಂದಿದ ಸರಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದಲ್ಲಿ ನೇಮಕಾತಿ ಹೊಂದುವ ಅವಕಾಶವನ್ನು ಕಲ್ಪಿಸಿರುವುದು ನಿಜವೇ ;

(ಆ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುವಾಗಲೇ ನಿಧನ ಹೊಂದಿದ ನೌಕರರುಗಳಿಗೆ ಸಂಬಂಧಿಸಿದ ಆಡಳಿತ ಮಂಡಳಿಯ ಸಂಸ್ಥೆಗಳ ಖಾಲಿ ಹುದ್ದೆಗೆ ಅಥವಾ ಆ ಸಂಸ್ಥೆಗಳಲ್ಲಿ ಹುದ್ದೆ ಖಾಲಿ ಇಲ್ಲದಿದ್ದಲ್ಲಿ ಬೇರೆ ಆಡಳಿತ ಮಂಡಳಿಯ ಶಿಕ್ಷಣ ಸಂಸ್ಥೆಗಳ ಖಾಲಿ ಇರುವ ಹುದ್ದೆಗಳಿಗೆ ಅನುಕಂಪದ ಆಧಾರದಲ್ಲಿ ನೇಮಕಾತಿ ನೀಡಲು ಅವಕಾಶ ಕಲ್ಪಿಸಿದ್ದು ನಿಜವೇ ;

(ಇ) ಆದರೆ ಉನ್ನತ ಶಿಕ್ಷಣ ಇಲಾಖೆಯ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆಯಲ್ಲಿರುವಾಗಲೇ ನಿಧನ ಹೊಂದಿದ ನೌಕರರುಗಳ ಅವಲಂಬಿತರಿಗೆ ಅನುಕಂಪದ ಆಧಾರದಲ್ಲಿ ನೇಮಕಾತಿ ನೀಡಲು ನಿಯಮಗಳಲ್ಲಿ ಅವಕಾಶವಿಲ್ಲವೆಂದು ಪ್ರಸ್ತಾವನೆಗಳನ್ನು ಇಲಾಖೆಯಿಂದ ತಿರಸ್ಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಡಿಯಲ್ಲಿನ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಅನುಕಂಪದ ಆಧಾರದಲ್ಲಿ ನೇಮಕಾತಿ ನೀಡುವ ಮಾದರಿಯಲ್ಲಿಯೇ ಉನ್ನತ ಶಿಕ್ಷಣ ಇಲಾಖೆಯ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವಾವಧಿಯಲ್ಲಿಯೇ ನಿಧನರಾದ ನೌಕರರುಗಳ ಅವಲಂಬಿತರಿಗೆ ಅನುಕಂಪದ ಆಧಾರದಲ್ಲಿ ನೇಮಕಾತಿ ಹೊಂದುವ ಕುರಿತು ಸರ್ಕಾರ ಅವಕಾಶ ಕಲ್ಪಿಸಲು ಕ್ರಮ ಕೈಗೊಳ್ಳುವುದೇ ?

## ಭಾಷಾ ಅಲ್ಪಸಂಖ್ಯಾತ ಶಾಲೆಗಳ ಮಾನ್ಯತೆ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫೩ (೨೦೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಭಾಷೆಗಳನ್ನು ಅಲ್ಪಸಂಖ್ಯಾತ ಭಾಷೆಗಳೆಂದು ಪರಿಗಣಿಸಿ ಸರ್ಕಾರ ಆದೇಶ ಹೊರಡಿಸಲಾಗಿದೆ;

(ಆ) ಹೊರಡಿಸಿದ್ದಲ್ಲಿ, ಆದೇಶದ ಪ್ರತಿ ಒದಗಿಸುವುದು;

(ಇ) ಭಾಷಾ ಅಲ್ಪಸಂಖ್ಯಾತ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳು ಯಾವುವು;

(ಈ) ಇತ್ತೀಚಿನ ಸರ್ಕಾರಿ ಆದೇಶದಂತೆ ಈ ಶಿಕ್ಷಣ ಸಂಸ್ಥೆಗಳು ಆಯಾ ಭಾಷೆಯ ಶೇಕಡಾ ೨೫ರ ಅನುಪಾತವನ್ನು ಪಾಲಿಸಿದೆಯೇ;

(ಉ) ಆಯಾ ಭಾಷಾ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಜಿ ಸಲ್ಲಿಸಿದರೆ ಸಂಬಂಧಿಸಿದ ಶಾಲೆಗಳ ಸ್ಥಿತಿಗತಿ ಏನು;

(ಊ) ಇಲ್ಲದ ವಿದ್ಯಾರ್ಥಿಗಳನ್ನು ಏಕಾಏಕಿ ಸೃಷ್ಟಿಸಲು ಸಾಧ್ಯವೇ;

(ಋ) ಶೇಕಡಾ ೨೫ ಅನುಪಾತ ಪಾಲಿಸಲು ಸಾಧ್ಯವೇ ಇಲ್ಲದ್ದರಿಂದ ಈ ಗಂಭೀರ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ೠ) ಆಯಾ ಪ್ರದೇಶದ ಜನಸಂಖ್ಯೆಗನುಗುಣವಾಗಿ ಅಥವಾ ಅರ್ಜಿ ಹಾಕಿದ ಎಲ್ಲ ಆಯಾ ಭಾಷಾ ಅಲ್ಪಸಂಖ್ಯಾತ ಮಕ್ಕಳಿಗೆ ಪ್ರವೇಶ ನೀಡುವ ಷರತ್ತನ್ನು ಅಳವಡಿಸಿ ನಿಯಮಾವಳಿಗೆ ತಿದ್ದುಪಡಿ ತರಲು ಇರುವ ಸಂವಿಧಾನಾತ್ಮಕ ಹಾಗೂ ಕಾನೂನಾತ್ಮಕ ತೊಡಕುಗಳೇನು;

(ಎ) ಈ ಗಂಭೀರ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

# ರಾಜ್ಯ ಸರ್ಕಾರಿ ನೌಕರರುಗಳಿಗೆ ಪರಿಷ್ಕೃತ ವೇತನ ಶ್ರೇಣಿಯಲ್ಲಿ ನೀಡಿದ ಸೌಲಭ್ಯಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರುಗಳಿಗೆ ವಿಸ್ತರಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫೪ (೫೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ, ರಾಜ್ಯ ಸರಕಾರಿ ಮಹಿಳಾ ನೌಕರರುಗಳಿಗೆ ಇರುವಂತೆ ಹೆರಿಗೆ ರಜೆಯನ್ನು ೧೩೫ರ ಬದಲು ೧೮೦ ದಿನಗಳಿಗೆ ವಿಸ್ತರಿಸದಿರಲು ಕಾರಣಗಳೇನು ;

(ಆ) ಸರಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಕರು ಶೈಕ್ಷಣಿಕ ವರ್ಷದ ಮಧ್ಯದಲ್ಲಿ ನಿವೃತ್ತರಾದರೆ ಅವರನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಪುನರ್‌ನೇಮಕ ಮಾಡಿಕೊಂಡು ಮುಂದುವರೆಸಲು ಅವಕಾಶವಿದ್ದು, ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರುಗಳಿಗೆ ಈ ಸೌಲಭ್ಯವನ್ನು ವಿಸ್ತರಿಸುವುದಾಗಿ ಹೇಳಿಕೆ ನೀಡಿ ಈವರೆಗೆ ವಿಸ್ತರಿಸದಿರಲು ಕಾರಣಗಳೇನು ;

(ಇ) ಅಂತರ್ ಜಿಲ್ಲೆಯ ಸೇವೆಯನ್ನು ಪರಿಗಣಿಸಿ ಸರಕಾರಿ ಶಾಲಾ ಶಿಕ್ಷಕರುಗಳಿಗೆ ೧೦, ೧೫, ೨೦, ೨೫ ಮತ್ತು ೩೦ ವರ್ಷಗಳ ವಿಶೇಷ ವೇತನ ಬಡ್ತಿಗಳನ್ನು ಮಂಜೂರು ಮಾಡಲು ಆದೇಶಿಸಿದ್ದು, ಅದರಂತೆ ಖಾಸಗಿ ಅನುದಾನಿತ ಶಾಲಾ ಶಿಕ್ಷಕರುಗಳಿಗೆ ಬೇರೆ ಆಡಳಿತ ಮಂಡಳಿಗಳಲ್ಲಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ೨೦, ೨೫ ಮತ್ತು ೩೦ ವರ್ಷಗಳ ವಿಶೇಷ ವೇತನ ಬಡ್ತಿ ಸೌಲಭ್ಯಗಳನ್ನು ನೀಡಲು ಆದೇಶ ಹೊರಡಿಸದಿರಲು ಕಾರಣಗಳೇನು ;

(ಈ) ದಿನಾಂಕ: ೦೧–೦೪–೨೦೧೨ ರಿಂದ ಅನ್ವಯವಾಗುವಂತೆ ರಾಜ್ಯ ಸರಕಾರಿ ನೌಕರರಿಗೆ ಸ್ಥಗಿತ ವೇತನ ಬಡ್ತಿಗಳನ್ನು ೫ ರಿಂದ ೮ಕ್ಕೆ ಹೆಚ್ಚಿಸಿದ್ದು, ಅನುದಾನಿತ ಸಂಸ್ಥೆಗಳ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸದಿರಲು ಕಾರಣಗಳೇನು ?

# ಜಿಲ್ಲಾ ಪಂಚಾಯತ್ ಮತ್ತು ಹಿಂದಿನ ಲೋಕಲ್ ಬೋರ್ಡ್‌ನಿಂದ ನೇಮಕಗೊಂಡ ನೌಕರರನ್ನು ಸರ್ಕಾರಿ ನೌಕರರುಗಳೆಂದು ಪರಿಗಣಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫೫ (೨೦೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಪರಿಷತ್‌ನಲ್ಲಿ ಹಿಂದಿನ ಲೋಕಲ್ ಬೋರ್ಡ್ ಹಾಗೂ ಡಿ.ಆರ್.ಡಿ.ಎಸ್.ಗಳಲ್ಲಿನ ನೌಕರರುಗಳನ್ನು ವಿಲೀನಗೊಳಿಸಿ ಯಾವ ದಿನಾಂಕದಿಂದ ಖಾಯಂಗೊಳಿಸಲಾಗಿದೆ;

(ಆ) ಇವರನ್ನು ಸರ್ಕಾರಿ ನೌಕರರುಗಳೆಂದು ಪರಿಗಣಿಸಿ ಅವರ ಹುದ್ದೆಯ ವೇತನ ಶ್ರೇಣಿಗನುಸಾರವಾಗಿ ಎಲ್ಲ ಸೇವಾ ಸೌಲಭ್ಯಗಳನ್ನು ನೀಡಿರುವುದು ನಿಜವೇ;

(ಇ) ಈ ರೀತಿಯಾಗಿ ನೇಮಕಾತಿ ಹಾಗೂ ಸೇವಾ ವಿಲೀನಗೊಂಡ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಆ ಪೈಕಿ ನಿವೃತ್ತಿಹೊಂದಿದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ನಿವೃತ್ತಿ ಹೊಂದಿದ ನೌಕರರುಗಳ ಪೈಕಿ ನಿವೃತ್ತಿ ವೇತನ ಸೌಲಭ್ಯ ಪಡೆದಿರುವವರ ಸಂಖ್ಯೆ ಎಷ್ಟು;

(ಉ) ಸರ್ಕಾರಿ ನೌಕರರಲ್ಲದವರು ಕೆ.ಜಿ.ಐ.ಡಿ ಹಾಗೂ ಜಿ.ಪಿ.ಎಫ್. ಖಾತೆಗಳನ್ನು ಹೊಂದಲು ಅವಕಾಶವಿದೆಯೇ;

(ಊ) ಜಿಲ್ಲಾ ಪರಿಷತ್‌ನಲ್ಲಿ ವಿಲೀನಗೊಂಡ ಸಿಬ್ಬಂದಿಗಳನ್ನು ಸರ್ಕಾರಿ ನೌಕರರುಗಳೆಂದು ಪರಿಗಣಿಸಲಾಗಿದೆಯೇ

(ಋ) ಈ ಸಿಬ್ಬಂದಿಗಳಿಗೆ ಸರ್ಕಾರಿ ನೌಕರರಿಗೆ ಸಿಗುವ ಎಲ್ಲಾ ಸೌಲಭ್ಯಗಳನ್ನು ವಿಸ್ತರಿಸಲು ಉದ್ದೇಶಿಸಲಾಗಿದೆಯೇ

(ಋ) ಉದ್ದೇಶಿಸಿದ್ದಲ್ಲಿ, ಯಾವ ದಿನಾಂಕದಂದು ಸರ್ಕಾರಿ ಆದೇಶ ಹೊರಡಿಸಲಾಗುವುದು?

## ಜಲಾಶಯಗಳ ಹಿನ್ನೀರಿನ ಗ್ರಾಮಗಳಿಗೆ ಕುಡಿಯುವ ನೀರು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ) –**

೩೫೬ (೫೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕರ್ನಾಟಕದಲ್ಲಿರುವ ಜಲಾಶಯಗಳ ಹಿನ್ನೀರಿನ ಸಮೀಪದ ಗ್ರಾಮಗಳು ಮತ್ತು ನದಿಗಳ ಸಮೀಪದ ಗ್ರಾಮಗಳಲ್ಲಿ 'ಶುದ್ಧ ಕುಡಿಯುವ ನೀರು ಘಟಕ'ಗಳು ಸ್ಥಾಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸ್ಥಳೀಯವಾಗಿ ನೀರು ಲಭ್ಯವಿರುವುದರಿಂದ ಈ ಗ್ರಾಮಗಳಲ್ಲಿ ಈ ಘಟಕಗಳನ್ನು ತೆರಯುವ ಅಗತ್ಯತೆ ಇಲ್ಲವೆಂದು ಸರ್ಕಾರ ತೀರ್ಮಾನಗಳನ್ನು ಏನಾದರೂ ತೆಗೆದುಕೊಂಡಿದೆಯೇ ;

(ಆ) ಜಲಾಶಯಗಳ ಹಿನ್ನೀರು ಮತ್ತು ನದಿಗಳ ದಂಡೆಯಲ್ಲಿ ಹರಿಯುವ ನೀರು ಕುಡಿಯಲು ಯೋಗ್ಯವಿಲ್ಲದೆ ಕಲುಷಿತ ಮತ್ತು ವಾಸನೆಯಿಂದ ಕೂಡಿದ್ದು, ಈ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರು ಘಟಕಗಳನ್ನು ಸ್ಥಾಪಿಸಲು ಸರ್ಕಾರ ಕ್ರಮ ಜರುಗಿಸುವುದೇ ?

## ಕ್ರಿಯಾಶೀಲವಿಲ್ಲದ ಬಾಲ ವಿಕಾಸ ಅಕಾಡೆಮಿ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ) –**

೩೫೭ (೫೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಧಾರವಾಡದಲ್ಲಿ "ಬಾಲ ವಿಕಾಸ ಅಕಾಡೆಮಿ" ಸ್ಥಾಪನೆಗೊಂಡಿದ್ದು ಯಾವಾಗ ; ಸದರಿ ಅಕಾಡೆಮಿಯ ಕಾರ್ಯಚಟುವಟಿಕೆಗಳೇನು ; (ವರ್ಷವಾರು ವಿವರಗಳನ್ನು ನೀಡುವುದು)

(ಆ) ಸರ್ಕಾರವು ಅಕಾಡೆಮಿಗೆ ಸಮರ್ಪಕವಾಗಿ ಅನುದಾನಗಳನ್ನು ನೀಡಿದ್ದರೂ, ಮಕ್ಕಳ ಕ್ರಿಯಾಶೀಲತೆಗಾಗಿ ಯಾವುದೇ ಕಾರ್ಯಚಟುವಟಿಕೆಗೆ ವಿನಿಯೋಗಿಸುತ್ತಿಲ್ಲವೆಂದು ಅಕಾಡೆಮಿಯ ಹಾಲಿ ಯೋಜನಾಧಿಕಾರಿ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿಲ್ಲವೆಂದು, ಮಕ್ಕಳ ಮತ್ತು ಪೋಷಕರಿಂದ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರದ ಹೊರೆಯನ್ನು ಕಡಿಮೆ ಮಾಡಲು, ಸಮಾನಂತರವಾದ ಕಾರ್ಯಚಟುವಟಿಕೆಗಳ ಕಾರಣದಿಂದ ಈ ಬಾಲ ವಿಕಾಸ ಅಕಾಡೆಮಿಯನ್ನು ಬಾಲಭವನದೊಳಗೆ ವಿಲೀನ ಮಾಡಲು ಸರ್ಕಾರ ಚಿಂತಿಸುವುದೇ ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮಂಜೂರಾದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಕುರಿತು.

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೫೮ (೬೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮಂಜೂರಾತಿಯಾದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳೆಷ್ಟು; ಅವು ಯಾವುವು; ಸದರಿ ಯೋಜನೆಗಳಿಗೆ ತಗಲುವ ಅಂದಾಜು ಮೊತ್ತವೆಷ್ಟು; ಈ ಯೋಜನೆಗಳು ಮುಕ್ತಾಯಗೊಳ್ಳುವುದು ಯಾವಾಗ ; (ತಾಲ್ಲೂಕುವಾರು, ಯೋಜನಾವಾರು ವಿವರ ನೀಡುವುದು)

ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಕೆಲವೊಂದು ಗ್ರಾಮ ಪಂಚಾಯತ್‌ಗಳು ಶುದ್ಧಗೊಳಿಸದ ಹೊಳೆಯ ನೀರನ್ನು ನೇರವಾಗಿ ಕುಡಿಯಲು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಗ್ರಾಮ ಪಂಚಾಯತುಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

## ತಾಲ್ಲೂಕು ಕೇಂದ್ರಗಳಲ್ಲಿ ಸರಕಾರಿ ಪದವಿ ಕಾಲೇಜುಗಳನ್ನು ತೆರೆಯುವ ಬಗ್ಗೆ

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೫೯ (೬೦) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಕಾಲೇಜುಗಳು ಇಲ್ಲದೆ ಇರುವ ತಾಲ್ಲೂಕು ಕೇಂದ್ರಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಖಾಸಗಿ ಪದವಿ ಕಾಲೇಜುಗಳಿಗೆ ಅನುವು ಮಾಡಿಕೊಡುವ ಉದ್ದೇಶದಿಂದ ಸರ್ಕಾರಿ ಪದವಿ ಕಾಲೇಜುಗಳನ್ನು ತಾಲ್ಲೂಕು ಕೇಂದ್ರಗಳಲ್ಲಿ ತೆರೆಯದಿರುವ ಔಚಿತ್ಯವೇನು ; ಇನ್ನಾದರೂ ತಾಲ್ಲೂಕು ಕೇಂದ್ರಗಳಲ್ಲಿ ಸರ್ಕಾರಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಉಡುಪಿ ಜಿಲ್ಲೆಯಲ್ಲಿ ಸರಕಾರಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಭಾಷೆ ಕಲಿಸುತ್ತಿರುವ ಕುರಿತು

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೬೦ (೬೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಹಿರಿಯ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಕಿರಿಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣವನ್ನು ನೀಡುತ್ತಿರುವ ಶಿಕ್ಷಣ ಸಂಸ್ಥೆಗಳು ಎಷ್ಟು ; ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಳಿದ ಸರಕಾರಿ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿಭಾಗೀಯ ಮಟ್ಟದಲ್ಲಾದರೂ ಆಂಗ್ಲ ಮಾಧ್ಯಮ ಶಿಕ್ಷಣವನ್ನು ನೀಡಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ?

## ರಾಜ್ಯದಲ್ಲಿನ ಅಂಗನವಾಡಿಗಳಲ್ಲಿ ಸಿ.ಸಿ. ಟಿ.ವಿ. ಅಳವಡಿಸುವ ಕುರಿತು

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೬೧ (೬೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಕ್ಷಣ ಸಂಸ್ಥೆಗಳಿಗೆ ಸಿ.ಸಿ. ಟಿ.ವಿ. ಅಳವಡಿಸಿದಂತೆ ಅಂಗನವಾಡಿ ಕೇಂದ್ರಗಳಿಗೆ ಸಿ.ಸಿ. ಟಿ.ವಿ. ಅಳವಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ;

(ಆ) ಮಕ್ಕಳ ರಕ್ಷಣೆಯ ಹಿತದೃಷ್ಟಿಯಿಂದ ಗ್ರಾಮ ಪಂಚಾಯತ್‌ಗಳಾಗಲಿ ಅಥವಾ ಸಾರ್ವಜನಿಕರಾಗಲಿ ಸಿ.ಸಿ. ಟಿ.ವಿ. ಅಳವಡಿಸಲು ಮುಂದೆ ಬಂದಲ್ಲಿ ಅನುಮತಿ ನೀಡಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ರಾಜ್ಯದ ಗ್ರಾ. ಪಂ. ಗಳಲ್ಲಿ ಘನತ್ಯಾಜ್ಯ ವಿಲೇವಾರಿಯಾಗುತ್ತಿರುವ ಸಮಸ್ಯೆಗಳ ಕುರಿತು

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೬೨ (೫೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳಿಗೆ ನೀಡಲಾಗುತ್ತಿರುವ ಶಾಸನ ಬದ್ಧ ಅನುದಾನ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಕನಿಷ್ಠ ಘನ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇಮಾಡಲು ಅಸಾಧ್ಯವಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಉಡುಪಿ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಜಿಲ್ಲಾ ರಸ್ತೆ ಮತ್ತು ಗ್ರಾಮೀಣ ರಸ್ತೆಗಳ ಇಕ್ಕೆಲಗಳಲ್ಲಿ ಎಲ್ಲೆಂದರಲ್ಲಿ ತ್ಯಾಜ್ಯಗಳನ್ನು ಎಸೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಾಚನಾಲಯಗಳಲ್ಲಿ ಮೇಲ್ವಿಚಾರಕರ ಸಂಬಳದ ವ್ಯತ್ಯಾಸದ ಕುರಿತು

ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೬೩ (೧೯೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಗ್ರಾಮಾಂತರ ಭಾಗದಲ್ಲಿ ಎಷ್ಟು ವಾಚನಾಲಯಗಳಿವೆ; ಅವುಗಳಲ್ಲಿ ಅಲೇಮಾರಿ ಜನಾಂಗಕ್ಕಾಗಿ ಮೀಸಲಟ್ಟ ವಾಚನಾಲಯಗಳೆಷ್ಟು;

ಆ) ಸದರಿ ವಾಚನಾಲಯಗಳ ಮೇಲ್ವಿಚಾರಕರ, ಅಂದರೆ ಅಲೇಮಾರಿ ಹಾಗೂ ಇತರರ ಸಂಬಳದಲ್ಲಿ ಏನಾದರೂ ವ್ಯತ್ಯಾಸವಿದೆಯೇ;

ಇ) ವ್ಯತ್ಯಾಸವಿದ್ದಲ್ಲಿ, ಅದನ್ನು ಸರಿಪಡಿಸಿ ಬರಬೇಕಾದ ಬಾಕಿಯನ್ನು ಸೇರಿಸಿ ಮೇಲ್ವಿಚಾರಕರಿಗೆ ನೀಡುವುದು ಯಾವಾಗ ?

## ಹೊಸ ಗ್ರಾಮ ಪಂಚಾಯತ್‌ಗಳಿಗೆ ಕಟ್ಟಡ ನಿರ್ಮಿಸುವ ಕುರಿತು

ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೬೪ (೬೬೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ–ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿ ಹೊಸದಾಗಿ ರಚನೆಯಾಗಿರುವ ಗ್ರಾಮ ಪಂಚಾಯತ್‌ಗಳು ಯಾವುವು ;

(ಆ) ಇದರಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳು ಸ್ವಂತ ಕಟ್ಟಡ ಹೊಂದಿವೆ ; ಸ್ವಂತ ಕಟ್ಟಡ ಹೊಂದಿಲ್ಲದೆ ಇರುವ ಪಂಚಾಯಿತಿಗಳಿಗೆ ಯಾವಾಗ ಕಟ್ಟಡ ನಿರ್ಮಿಸಲಾಗುವುದು ;

(ಇ) ಒಂದು ಗ್ರಾಮ ಪಂಚಾಯತ್ ಕಟ್ಟಡ ನಿರ್ಮಿಸಲು ತಗಲುವ ಅಂದಾಜು ಮೊತ್ತ ಎಷ್ಟು ; ಯಾವ ಮಾದರಿಯಲ್ಲಿ ನಿರ್ಮಿಸಲಾಗುವುದು ? (ವಿವರ ನೀಡುವುದು)

## ಪುನರ್‌ವಸತಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೫ (೬೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ಮುಳುಗಡೆಯಾದ ಗ್ರಾಮಗಳಿಗೆ ನಿರ್ಮಿಸಲಾದ ಪುನರ್‌ವಸತಿ ಕೇಂದ್ರಗಳನ್ನು ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಗೆ ನೀಡಲಾಗಿದೆಯೇ ; ಸದರಿ ಗ್ರಾಮಗಳು ಸಂಪೂರ್ಣವಾಗಿ ಪುನರ್‌ವಸತಿ ಕೇಂದ್ರಗಳಿಗೆ ಸ್ಥಳಾಂತರ ಆಗದೇ ಇರುವುದರಿಂದ ಗ್ರಾಮ ಪಂಚಾಯತಿಗೆ ಈಗಿರುವ ಅನುದಾನದಲ್ಲಿ ಈಗಿರುವ ಗ್ರಾಮ ಮತ್ತು ಪುನರ್‌ವಸತಿ ಕೇಂದ್ರ ಎರಡೂ ಕಡೆ ಮೂಲಭೂತ ಸೌಕರ್ಯ ಒದಗಿಸುವುದು ಸಾಧ್ಯವೇ ;

(ಆ) ಇಲ್ಲದಿದ್ದಲ್ಲಿ ಅಂತಹ ಗ್ರಾಮ ಪಂಚಾಯತಿಗಳಿಗೆ ಪುನರ್‌ವಸತಿ ಕೇಂದ್ರಗಳ ಅಭಿವೃದ್ಧಿಗಾಗಿ ಹೆಚ್ಚುವರಿ ಅನುದಾನ ನೀಡಲಾಗುವುದೇ ;

(ಇ) ಹೆಚ್ಚುವರಿ ಅನುದಾನ ನೀಡದಿದ್ದಲ್ಲಿ ಸದರಿ ಗ್ರಾಮ ಪಂಚಾಯತಿಗಳು ಮೂಲಭೂತ ಸೌಕರ್ಯದ ಕೊರತೆ ಅನುಭವಿಸುವುದಿಲ್ಲವೆ ?

## ಮುಳುಗಡೆ ಗ್ರಾಮಗಳಿಗೆ ಹೆಚ್ಚುವರಿ ಮನೆಗಳನ್ನು ಹಂಚಿಕೆ ಮಾಡುವ ಬಗ್ಗೆ.

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬ (೬೬೫) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ). ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ಮುಳುಗಡೆಯಾಗಿರುವ ಕಾರಣಕ್ಕೆ ಸರಕಾರದ ವಸತಿ ಯೋಜನೆಯಿಂದ ವಂಚಿತವಾದ ಗ್ರಾಮ ಪಂಚಾಯಿತಿಗಳು ಯಾವುವು;

ಆ) ಈ ಗ್ರಾಮಗಳ ಪುನರ್ ವಸತಿ ಕೇಂದ್ರಗಳನ್ನು ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಿಸಿರುವುದರಿಂದ ಸದರಿ ಪಂಚಾಯತಿಗಳಿಗೆ ಸರಕಾರದ ವಸತಿ ಯೋಜನೆಯಡಿಯಲ್ಲಿ ಹೆಚ್ಚುವರಿ ಮನೆಗಳನ್ನು ಹಂಚಿಕೆ ಮಾಡಲಾಗುವುದೇ;

ಇ) ಇಲ್ಲದೇ ಇದ್ದರೆ ಅಂತಹ ಗ್ರಾಮ ಪಂಚಾಯಿತಿಗಳಿಗೆ ಅನ್ಯಾಯವಾಗುವುದಿಲ್ಲವೆ?

## ಖಾಸಗಿ ಶಾಲೆಗಳಲ್ಲಿ ಡೊನೇಷನ್ ವಸೂಲಾತಿ

**ಶ್ರೀ ಟಿ.ಎ. ಶರವಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೩೬೭ (೨೦೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಾಸಗಿ ಶಾಲೆಗಳಲ್ಲಿ ಕಡ್ಡಾಯ ಶಿಕ್ಷಣ ಯೋಜನೆಯಡಿ ಆಯ್ಕೆಯಾದ ಮಕ್ಕಳ ಪೋಷಕರಿಂದ ವಂತಿಗೆ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಈ ಪಿಡುಗನ್ನು ಹೋಗಲಾಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಜಿಲ್ಲಾ ಕೇಂದ್ರಗಳಲ್ಲಿ ವೃದ್ಧಾಶ್ರಮಗಳನ್ನು ತೆರೆಯುವ ಬಗ್ಗೆ

ಶ್ರೀ ಟಿ.ಎ. ಶರವಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –

೩೬೮ (೫೯೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿರಿಯ ನಾಗರೀಕರ ಕಾಯ್ದೆಯಡಿ ಜಿಲ್ಲಾ ಕೇಂದ್ರಗಳಲ್ಲಿ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಆ) ಈಗಾಗಲೇ ಪ್ರಾರಂಭಿಸಲಾಗಿರುವ ವೃದ್ಧಾಶ್ರಮಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವೃದ್ಧಾಶ್ರಮಗಳನ್ನು ತೆರೆಯಲು ಕೇಂದ್ರ ಸರ್ಕಾರ ಅನುದಾನ ನೀಡುತ್ತಿದೆಯೇ; ಹಾಗಿದ್ದಲ್ಲಿ ಪ್ರತಿ ವರ್ಷ ನೀಡಲಾಗುವ ಅನುದಾನವೆಷ್ಟು; ಖರ್ಚಾಗುತ್ತಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಈ) ಖಾಸಗಿಯವರು ನಡೆಸುತ್ತಿರುವ ವೃದ್ಧಾಶ್ರಮಗಳೆಷ್ಟು; ಇವರಿಗೆ ಸರ್ಕಾರವು ನೀಡುತ್ತಿರುವ ಸೌಲಭ್ಯಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಮಕ್ಕಳಿಗೆ ಶೈಕ್ಷಣಿಕ ಪ್ರವಾಸದ ಅಂಗವಾಗಿ ಅರಣ್ಯ ಪ್ರವಾಸ ಕುರಿತು

ಶ್ರೀ ವಿ. ಸೋಮಣ್ಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –

೩೬೯ (೨೦೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಶಾಲಾ ಮಕ್ಕಳಿಗೆ ಶೈಕ್ಷಣಿಕ ಪ್ರವಾಸದ ಅಂಗವಾಗಿ ಅರಣ್ಯ ಪ್ರವಾಸ ಕೈಗೊಳ್ಳಲು (ರಾಜ್ಯ ಸರ್ಕಾರ) ನಿರ್ಧರಿಸಿದೆಯೇ ; ಇದಕ್ಕೆ ಕಾರಣಗಳೇನು ;

(ಆ) ಇದಕ್ಕಾಗಿ ಖರ್ಚಾಗುವ ಅನುದಾನ ಮೊತ್ತವೆಷ್ಟು ; ಈ ಮೂಲಕ ಅರಣ್ಯ ಪರಿಸರದ ಜಾಗೃತಿ ಮೂಡಿಸಲು ಸರ್ಕಾರ ಮುಂದಾಗಿದೆಯೇ ;

(ಇ) ಈ ಯೋಜನೆ ಜಾರಿಗೆ ಬಂದಿದ್ದು ಯಾವಾಗ ; ಈಗಾಗಲೇ ಎಷ್ಟು ಪ್ರವಾಸ ಕಾರ್ಯಕ್ರಮ ಯೋಜನೆಗಳನ್ನು ರೂಪಿಸಲಾಗಿದೆ ಪ್ರವಾಸದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ನೀಡಲಾಗುವ ಸೌಲಭ್ಯಗಳೇನು ;

(ಈ) ಇದರ ಪ್ರಯೋಜನ ಪಡೆದಂತಹ ಶಾಲಾ ಮಕ್ಕಳು ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಉ) ಸದರಿ ಯೋಜನೆಯನ್ನು ಶೈಕ್ಷಣಿಕ ಪ್ರವಾಸದ ಜೊತೆಗೆ ಹಮ್ಮಿಕೊಳ್ಳಲಾಗುವುದೇ ಅಥವಾ ಇದಕ್ಕೆ ಪ್ರತ್ಯೇಕ ಯೋಜನೆ ರೂಪಿಸಲಾಗಿದೆಯೇ ? (ಮಾಹಿತಿ ಒದಗಿಸುವುದು)

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆ ನೇಮಕ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೩೭೦ (೨೦೬) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನ ಇಲಾಖೆಯ ಸಬಲೀಕರಣ ಯೋಜನೆ ಅನುಷ್ಠಾನಕ್ಕಾಗಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳನ್ನು ಸೃಷ್ಟಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸೃಷ್ಟಿಸಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಇವರಿಗೆ ನೀಡುವ ಗೌರವ ಸಂಭಾವನೆ ಎಷ್ಟು;

(ಇ) ಈ ಹುದ್ದೆಗಳಲ್ಲಿ ಕಡಿಮೆ ಮೊತ್ತದ ಗೌರವಧನ ಪಡೆದು ಸೇವೆ ಸಲ್ಲಿಸಲು ಅಭ್ಯರ್ಥಿಗಳು ನಿರಾಸಕ್ತಿ ತೋರಿಸುತ್ತಿರುವುದು ನಿಜವೇ;

(ಈ) ಉತ್ತಮ ಉದ್ದೇಶ ಹೊಂದಿರುವ ಈ ಯೋಜನೆಯ ಅನುಷ್ಠಾನಕ್ಕೆ ಬೇಕಾದ ಪುನರ್ವಸತಿ ಕಾರ್ಯಕರ್ತರ ಹುದ್ದೆಯ ಭರ್ತಿಗೆ ಹಾಗೂ ಸಂಭಾವನೆಯನ್ನು ದ್ವಿಗುಣಗೊಳಿಸಲು ಸರ್ಕಾರ ಮುಂದಾಗುವುದೇ;

(ಉ) ಇಂತಹ ಪುನರ್ವಸತಿ ಕಾರ್ಯಕರ್ತರ ಕರ್ತವ್ಯ ಜವಾಬ್ದಾರಿಗಳೇನು; ಯಾವ ಕಾರ್ಯಕ್ರಮಗಳನ್ನು ಇವರ ಮೂಲಕ ಇಲಾಖೆ ಅನುಷ್ಠಾನಗೊಳಿಸುತ್ತದೆ; ಇದಕ್ಕೆ ಅಂಗವಿಕಲರನ್ನೇ ನೇಮಕ ಮಾಡಿಕೊಂಡಲ್ಲಿ ಆಗುವ ಪ್ರಯೋಜನಗಳೇನು?

## ಭಾಗ್ಯಲಕ್ಷ್ಮೀ ಯೋಜನೆಯ ಅರ್ಹ ಫಲಾನುಭವಿಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೧ (೩೩೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ೨ ವರ್ಷದ ಅವಧಿಯಲ್ಲಿ "ಭಾಗ್ಯಲಕ್ಷ್ಮೀ" ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ನೀಡಲಾದ ಬಾಂಡುಗಳೆಷ್ಟು ; (ವಿವರ ನೀಡುವುದು)

(ಆ) "ಭಾಗ್ಯಲಕ್ಷ್ಮೀ" ಯೋಜನೆಯಡಿ ಪ್ರತಿವರ್ಷ ಗುರುತಿಸಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಫಲಾನುಭವಿಗಳನ್ನು ಗುರುತಿಸಲು ಇರುವ ಸರ್ಕಾರದ ಮಾನದಂಡಗಳೇನು ? (ವಿವರ ನೀಡುವುದು)

## ಬಳ್ಳಾರಿ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳಿಸಲಾದ ಯೋಜನೆ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೨ (೩೩೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಗೆ ಕಳೆದ ಎರಡು ವರ್ಷಗಳ [illegible] ಮತ್ತು ಮಕ್ಕಳ [illegible]ವೃದ್ಧಿ ಇಲಾಖೆಯಿಂದ ಹಮ್ಮಿಕೊಳ್ಳಲಾದ [illegible] ತ್ತವು ;(ವಿವರ [illegible]ಸುವುದು)

(ಆ) ಇದರನ್ವಯ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಹಮ್ಮಿಕೊಳ್ಳಲಾದ ಯೋಜನೆಗಳನ್ನು ಸಂಪೂರ್ಣ ಅನುಷ್ಠಾನಗೊಳಿಸಲಾಗಿದೆಯೇ ?

## ಆರ್‌ಟಿಇ ಅಡಿಯಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೭೩ (೩೩೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರ್‌ಟಿಇ ಅಡಿಯಲ್ಲಿ ಅರ್ಜಿ ಸಲ್ಲಿಸಲು ಯಾವ ರೀತಿ ಅವಕಾಶ ಕಲ್ಪಿಸಲಾಗಿದೆ ;

(ಆ) ಆರ್‌ಟಿಇ ಅಡಿಯಲ್ಲಿ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಲು ಗ್ರಾಮಾಂತರ ಪ್ರದೇಶದ ಜನರಿಗೆ ತೊಂದರೆಯಾಗುತ್ತಿದ್ದು ಇದಕ್ಕಾಗಿ ಸರ್ಕಾರ ಪರ್ಯಾಯ ಕ್ರಮ ಕೈಗೊಳ್ಳುವುದೇ ;

(ಇ) ಆ ಪ್ರದೇಶಗಳ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಆನ್‌ಲೈನ್ ಮುಖಾಂತರ ಆರ್‌ಟಿಇ ಅಡಿಯಲ್ಲಿ ಅರ್ಜಿ ಸಲ್ಲಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಗುಡಿಸಲು ಮುಕ್ತವಾಗಿಸುವುದು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೩೭೪ (೩೩೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗುಡಿಸಲು ಮುಕ್ತವಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಇದಕ್ಕಾಗಿ ಕಳೆದ ೩ ವರ್ಷಗಳಿಂದ ಹಾಕಿಕೊಂಡ ಕಾರ್ಯಕ್ರಮಗಳಾವುವು ;

(ಇ) ಈ ಕಾರ್ಯಕ್ರಮಗಳಿಗೆ ರಾಜ್ಯದಿಂದ ಹಾಗೂ ಕೇಂದ್ರ ಸರ್ಕಾರದಿಂದ ನೀಡಲಾಗುತ್ತಿರುವ ಒಟ್ಟು ಅನುದಾನವೆಷ್ಟು ;

(ಈ) ಕಳೆದ ೩ ವರ್ಷಗಳಲ್ಲಿ ಎಷ್ಟು ಮನೆಗಳು ಮಂಜೂರಾಗಿವೆ ? (ತಾಲ್ಲೂಕುವಾರು ವಿವರ ನೀಡುವುದು)

## ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿ ಪಾಲಿಸದಿರುವುದು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೩೭೫ (೩೩೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೮೭ ರಿಂದ ೯೫ರ ಅವಧಿಯಲ್ಲಿ ಪ್ರಾರಂಭವಾದ ಖಾಸಗಿ ಶಿಕ್ಷಣ ಸಂಸ್ಥೆಗಳು ನಡೆಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಿಕ್ಷಕರು ಮತ್ತು ಸಿಬ್ಬಂದಿಗಳು ಮೀಸಲಾತಿ ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗಳಲ್ಲಿ ಶಿಕ್ಷಕರ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ನೇಮಿಸಿಕೊಂಡು ಉಳಿದ ಹುದ್ದೆಗಳಿಗೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ತುಂಬುತ್ತಿರುವುದರಿಂದ ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಸರಿಪಡಿಸಲು ಶಿಕ್ಷಣ ಇಲಾಖೆಯಿಂದ ಯಾವ ಯಾವ ತೀರ್ಮಾನ ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳದ ಶಿಕ್ಷಣ ಸಂಸ್ಥೆಗಳ ಶಾಲೆಗಳ ಅನುದಾನ ನಿಲ್ಲಿಸಲಾಗುವುದೇ ?

## ಬೀದರ್ ಜಿಲ್ಲೆಯ ತಾಲ್ಲೂಕುಗಳಲ್ಲಿ ಬಯಲು ರಂಗಮಂದಿರ ನಿರ್ಮಾಣ

ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –

೩೭೬ (೩೩೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಬಯಲು ರಂಗಮಂದಿರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ಬಯಲು ರಂಗಮಂದಿರ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಹೊಸ ಬಯಲು ರಂಗಮಂದಿರ ನಿರ್ಮಾಣಕ್ಕಾಗಿ ಸರ್ಕಾರ ಸ್ಥಳ ಗುರುತಿಸಿದೆಯೇ ;

(ಈ) ಹಾಗಿದ್ದಲ್ಲಿ ಪಟ್ಟಣದ ಯಾವ ಭಾಗದಲ್ಲಿ ಸ್ಥಳ ಗುರುತಿಸಲಾಗಿದೆ ಹಾಗೂ ನಿರ್ಮಾಣಕ್ಕಾಗಿ ನಿಗದಿಪಡಿಸಿರುವ ಅನುದಾನ ಮೊತ್ತವೆಷ್ಟು ? (ವಿವರ ನೀಡುವುದು)

## ಶೌಚಾಲಯಗಳ ನಿರ್ಮಾಣ

ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –

೩೭೭ (೩೩೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫ರ ಅಂತ್ಯದವರೆಗೆ ನಿರ್ಮಲ ಭಾರತ ಯೋಜನೆ ಅಡಿಯಲ್ಲಿ ಬೀದರ ಜಿಲ್ಲೆಯಲ್ಲಿ ನಿರ್ಮಿಸಿರುವ ಶೌಚಾಲಯಗಳೆಷ್ಟು ; (ಗ್ರಾಮ ಪಂಚಾಯತಿಗಳವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಶೌಚಾಲಯಗಳ ನಿರ್ಮಾಣಕ್ಕೆ ಸ್ವೀಕರಿಸಿದ ಅರ್ಜಿಗಳೆಷ್ಟು ; ಕಾರ್ಯಾದೇಶ ನೀಡದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಶೌಚಾಲಯ ನಿರ್ಮಾಣಕ್ಕೆ ಬಿಡುಗಡೆ ಆಗಿರುವ ಹಣ ಎಷ್ಟು ಶೌಚಾಲಯ ನಿರ್ಮಾಣದ ನಂತರ ಫಲಾನುಭವಿಗಳಿಗೆ ನೇರವಾಗಿ ಬಿಡುಗಡೆ ಮಾಡಿ ಪಾವತಿ ಮಾಡಿರುವ ಹಣ ಎಷ್ಟು ; ಕಾಮಗಾರಿಗಳಿಗಾಗಿ ನರೆಗಾದಿಂದ ಬಿಡುಗಡೆ ಆಗಿರುವ ಹಣ ಎಷ್ಟು ಇನ್ನು ಬಿಡುಗಡೆ ಆಗಿ ನೀಡಬೇಕಾಗಿರುವ ಬಾಕಿ ಹಣ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಸಾರ್ವಜನಿಕ ಗ್ರಂಥಾಲಯಗಳಿಗೆ ಪುಸ್ತಕ ಖರೀದಿಸಲು ಹಣದ ಕೊರತೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)–**

೩೭೮ (೩೪೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಬಿಎಂಪಿ ಮತ್ತು ರಾಜ್ಯದ ಸ್ಥಳೀಯ ಆಡಳಿತಗಳು ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಪಾವತಿಸಲು ಕಳೆದ ೫ ವರ್ಷಗಳಿಂದ ಬಾಕಿ ಉಳಿಸಿಕೊಂಡಿರುವ ಉಪಕರವೆಷ್ಟು ;

(ಆ) ಈ ಸಾಲಿನಲ್ಲಿ ಬಿಬಿಎಂಪಿ ಮತ್ತು ಇತರೆ ಸ್ಥಳೀಯ ಆಡಳಿತದಿಂದ ಸಂಗ್ರಹವಾದ ಗ್ರಂಥಾಲಯ ಉಪಕರವೆಷ್ಟು ;

(ಇ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆ ಎಷ್ಟು ಪುಸ್ತಕಗಳನ್ನು ಖರೀದಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ ;

(ಈ) ಆಸ್ತಿ ತೆರಿಗೆ ಪಾವತಿಯಾದ ಕೂಡಲೇ ನೇರವಾಗಿ ಗ್ರಂಥಾಲಯ ಇಲಾಖೆಗೆ ಉಪಕರದ ವರ್ಗಾವಣೆಯಾಗುವ ವ್ಯವಸ್ಥೆ ಜಾರಿಗೆ ತರಲು ಕೈಗೊಂಡಿರುವ ಕ್ರಮಗಳೇನು ;

(ಉ) ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಅಪೌಷ್ಟಿಕತೆ ನಿವಾರಣೆಗೆ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)–**

೩೭೯ (೩೪೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಅಪೌಷ್ಟಿಕತೆಯಿಂದ ನರಳುತ್ತಿರುವ ಮಕ್ಕಳ ಪ್ರಕರಣಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಪೌಷ್ಟಿಕತೆಯಿಂದ ಮೃತಪಟ್ಟಿರುವ ಪ್ರಕರಣಗಳೆಷ್ಟು ;

(ಇ) ಅಪೌಷ್ಟಿಕತೆಯ ನಿವಾರಣೆಗೆ ನ್ಯಾಯಮೂರ್ತಿ ಎನ್.ಕೆ. ಪಾಟೀಲ್ ನೇತೃತ್ವದ ವರದಿ ರೀತ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸೇನೆಗಳಿಗೆ ಆಹಾರ ಒದಗಿಸುವ ಮೈಸೂರಿನ ಡಿಎಫ್‌ಆರ್‌ಎಲ್‌ನಿಂದ ಕಡಿಮೆ ವೆಚ್ಚದಲ್ಲಿ ಉನ್ನತ ತಂತ್ರಜ್ಞಾನದ ಪೌಷ್ಟಿಕ ಆಹಾರ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪೌರ ಕಾರ್ಮಿಕರಿಗೆ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)–**

೩೮೦ (೫೯೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕಿನ ಪುರಾತನ ಪ್ರವಾಸಿ ತಾಣವಾಗಿರುವ ರಾಮನಾಥಪುರ ಗ್ರಾಮದಲ್ಲಿರುವ ಪೌರ ಕಾರ್ಮಿಕರೆಷ್ಟು ; ಇವರಿಗೆ ಮೂಲಭೂತ ಸೌಲಭ್ಯ ಮತ್ತು ಪಡಿತರ ಚೀಟಿಗಳನ್ನು ಒದಗಿಸಲಾಗಿದೆಯೇ ;

(ಆ) ಈ ಪೌರ ಕಾರ್ಮಿಕರು ವಾಸಿಸುವುದು ಸಂಪೂರ್ಣ ಶಿಥಿಲಗೊಂಡಿರುವ ಮನೆ, ರಸ್ತೆ ಇಲ್ಲದ ಬೀದಿ, ವಠಾರದ ತ್ಯಾಜ್ಯ ನೀರು ಮನೆಗೆ ನುಗ್ಗುತ್ತಿರುವುದು ಶೌಚಾಲಯಗಳಿಲ್ಲದೆ ದುರ್ವಾಸನೆಯಿಂದ ಕೂಡಿರುವ ವಠಾರ, ಅನಾರೋಗ್ಯದಿಂದ ಕಾಯಿಲೆಗಳಿಂದ ಬಳಲುತ್ತಿರುವ ಇವರಿಗೆ ಸಹಾಯ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಪೌರ ಕಾರ್ಮಿಕರಿಗೆ ವಾಸಿಸುವ ಮನೆಗಳಿಗೆ ಹಕ್ಕುಪತ್ರಗಳನ್ನು ನೀಡಲು ಮತ್ತು ಉದ್ಯೋಗ ಅರಸಿ ಗುಳೆ ಹೋಗುವುದನ್ನು ತಪ್ಪಿಸಲು ಉದ್ಯೋಗ ಖಾತ್ರಿ ಯೋಜನೆಯಡಿ ಉದ್ಯೋಗ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಾಸನ ಹೊಸ ಬಸ್ ನಿಲ್ದಾಣದ ರಸ್ತೆಯಲ್ಲಿ ರೈಲ್ವೇ ಮೇಲ್ಸೇತುವೆ ನಿರ್ಮಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩೮೧ (೫೯೧) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ನೂತನ ಬಸ್ ನಿಲ್ದಾಣದ ಹತ್ತಿರ ಹಾದು ಹೋಗಿರುವ ರೈಲ್ವೆ ಹಳಿಗೆ ಮೇಲ್ಸೇತುವೆ/ಅಂಡರ್ ಪಾಸ್ ನಿರ್ಮಿಸಲು ಸರ್ಕಾರದಿಂದ ರೈಲ್ವೇ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಆ) ಸದರಿ ಮೇಲ್ಸೇತುವೆಗೆ ತಗುಲಬಹುದಾದ ಅಂದಾಜು ಮೊತ್ತ ಎಷ್ಟು ; ರಾಜ್ಯ ಸರ್ಕಾರದಿಂದ ನೀಡಿರುವ ಮೊತ್ತ ಎಷ್ಟು ;

(ಇ) ಹಾಸನದ ಎನ್.ಆರ್. ಸರ್ಕಲ್‌ನಿಂದ ನೂತನ ಬಸ್ ನಿಲ್ದಾಣದವರೆಗೆ ಅಧಿಕ ವಾಹನ ದಟ್ಟಣೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ರಸ್ತೆಯನ್ನು ಅಗಲೀಕರಣ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಉಚಿತ ಪಠ್ಯಪುಸ್ತಕಗಳ ವಿತರಣೆ ಕುರಿತು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ)** –

೩೮೨ (೩೪೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢಶಾಲೆಗಳಿಗೆ ಸರ್ಕಾರವು ಪಠ್ಯಪುಸ್ತಕವನ್ನು ಉಚಿತವಾಗಿ ಸರಬರಾಜು ಮಾಡುತ್ತಿದೆಯೇ, ಇಲ್ಲದಿದ್ದಲ್ಲಿ ಯಾವ ದರದಲ್ಲಿ ಹಣ ಸಂಗ್ರಹಿಸಲಾಗುತ್ತಿದೆ, ವಿದ್ಯಾರ್ಥಿಗಳಿಂದ ಶಾಲೆಯ ಆಡಳಿತ ವರ್ಗವ್ಯಾವ ದರದಲ್ಲಿ ಹಣ ಸಂಗ್ರಹಿಸಲು ಆದೇಶಿಸಲಾಗಿದೆ ;

(ಆ) ಯಾವ ಯಾವ ಪಠ್ಯಪುಸ್ತಕಗಳಿಗೆ ಯಾವ ಯಾವ ದರ ನಿಗದಿಗೊಳಿಸಲಾಗಿದೆ ; (ವಿವರ ನೀಡುವುದು) ;

(ಇ) ಖಾಸಗಿ ಮತ್ತು ಅನುದಾನಿತ ಶಾಲೆಗಳ ಪ್ರವೇಶ ದಾಖಲಾತಿಯು ಪ್ರತೀ ವರ್ಷ ಕಡಿಮೆಯಾಗುತ್ತಿರುವ ಹಿನ್ನಲೆಯಲ್ಲಿ ಮತ್ತು ಸೆಕೆಂಡ್ ಹ್ಯಾಂಡ್ ಪಠ್ಯ ಪುಸ್ತಕಗಳನ್ನು ವಿದ್ಯಾರ್ಥಿಗಳು ತಾಮೇ ಖರೀದಿಸುತ್ತಿರುವ ಹಿನ್ನಲೆಯಲ್ಲಿ ಪಠ್ಯಪುಸ್ತಕಗಳ ಬೇಡಿಕೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ಕಡಿಮೆ ಬೇಡಿಕೆ ಸಲ್ಲಿಸಿದಾಗಲೂ ಅವರ ಮೇಲೆ ಹೆಚ್ಚಿನ ಪಠ್ಯಪುಸ್ತಕ ಖರೀದಿ ಮಾಡಲು ಒತ್ತಡ ಹೇರಲಾಗುತ್ತಿರುವುದು ನಿಜವೇ ?

## ಹಜ್ ಯಾತ್ರಿಗಳ ಸವಲತ್ತುಗಳ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೩೮೩ (೩೪೭) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಜ್ ಯಾತ್ರಿಗಳಿಗೆ ನೀಡುತ್ತಿರುವ ಸವಲತ್ತುಗಳು ಮತ್ತು ಸೌಲಭ್ಯಗಳಾವುವು ; (ವಿವರ ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ಈ ರೀತಿ ಹಜ್ ಯಾತ್ರೆ ಕೈಗೊಂಡ ಅಲ್ಪಸಂಖ್ಯಾತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಹಜ್ ಯಾತ್ರೆಗೆ ಮುಸ್ಲಿಮೇತರರಿಗೂ ತೆರಳುವ ಅವಕಾಶವಿದೆಯೇ ; ಅವರಿಗೂ ಹಜ್ ಯಾತ್ರೆಯ ಸೌಲಭ್ಯ ವಿಸ್ತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಬಿಡುಗಡೆಯಾಗುತ್ತಿರುವ ಅನುದಾನದ ಕುರಿತು

**ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೪ (೩೪೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಗೆ ಕಳೆದ ೩ ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; ಖರ್ಚು ಮಾಡಲಾದ ಮೊತ್ತವೆಷ್ಟು; ಖರ್ಚಾಗದೆ ಉಳಿದ ಮೊತ್ತವೆಷ್ಟು; (ವರ್ಷಾವಾರು, ಲೆಕ್ಕಶೀರ್ಷಿಕೆವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೊಳ್ಳಲಾಗಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ; (ಲೆಕ್ಕ ಶೀರ್ಷಿಕೆಗಳವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ನಡೆಸಲಾಗಿದೆಯೇ; ಟೆಂಡರ್ ಪ್ರಕ್ರಿಯೆ ನಡೆಸುವಾಗ ಅನುಸರಿಸಲಾಗಿರುವ ಮಾನದಂಡಗಳೇನು; (ವಿವರಗಳನ್ನು ನೀಡುವುದು)

(ಈ) ಈ ಕಾಮಗಾರಿಗಳನ್ನು ಯಾವ ಸಂಸ್ಥೆ / ಗುತ್ತಿಗೆದಾರರಿಗೆ ನೀಡಲಾಗಿದೆ; (ಸಂಸ್ಥೆ / ಗುತ್ತಿಗೆದಾರರ ಹೆಸರು ವಿಳಾಸ ಸಹಿತ ಕಾಮಗಾರಿಗಳ ಪ್ರತ್ಯೇಕವಾರು , ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಈ ಯೋಜನೆಗಳಡಿಯಲ್ಲಿ ಕೈಗೊಳ್ಳಲಾದ ಕಾಮಗಾರಿಗಳಿಗೆ ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ; ಹಾಗಿದ್ದಲ್ಲಿ ಎಷ್ಟು ಕಾಲಮಿತಿ ನೀಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

**ಬಾಲ ಸಂಜೀವಿನಿ ಯೋಜನೆ ಅನುಷ್ಠಾನ ಕುರಿತು.**

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೫ (೫೬೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಬಾಲ ಸಂಜೀವಿನಿ, ಯೋಜನೆಯಡಿಯಲ್ಲಿ ಗುರುತಿಸಿರುವ ಆಸ್ಪತ್ರೆಗಳು ಎಷ್ಟು; (ವಿವರ ನೀಡುವುದು)

ಆ) ೨೦೧೪–೧೫ನೇ ಸಾಲಿನಲ್ಲಿ ಈ ಯೋಜನೆಯಡಿಯಲ್ಲಿ ಈ ಆಸ್ಪತ್ರೆಗಳಿಗೆ ದಾಖಲಾದ ಮಕ್ಕಳ ಸಂಖ್ಯೆ ಎಷ್ಟು; ಖಾಯಿಲೆಗಳ ವಿವರ ಹಾಗೂ ಜಿಲ್ಲಾವಾರು ವೆಚ್ಚದ ವಿವರ ನೀಡುವುದು;

ಇ) ಈ ಯೋಜನೆಯನ್ನು ಆರೋಗ್ಯ ಇಲಾಖೆಗೆ ವರ್ಗಾಯಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ರಾಜ್ಯದ ಪದವಿ ಕಾಲೇಜುಗಳ ಉಪನ್ಯಾಸಕರಿಗೆ ಬೋಧನಾ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೬ (೫೬೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ಪದವಿ ಕಾಲೇಜುಗಳ ಉಪನ್ಯಾಸಕರಿಗೆ ವಾರಕ್ಕೆ ಎಷ್ಟು ಗಂಟೆಗಳ ಕಾಲ ಬೋಧನೆ ಮಾಡುವುದು ಕಡ್ಡಾಯವಾಗಿರುತ್ತದೆ;

ಆ) ಈ ಬೋಧನಾ ಅವಧಿಯನ್ನು ವಿಸ್ತರಿಸುವ ಪ್ರಸ್ತಾವ ಸರ್ಕಾರದ ಪರಿಶೀಲನೆಯಲ್ಲಿದೆಯೇ;

ಇ) ಇದ್ದಲ್ಲಿ, ಇದರಿಂದ ಬೋಧಕರ, ಬೋಧನೆಯ ಸಿದ್ದತೆ, ಮಾನಸಿಕ ಸ್ಥಿತಿ ಹಾಗೂ ಪಠ್ಯೇತರ ಚಟುವಟಿಕೆಗಳಿಗೆ ವ್ಯತಿರಿಕ್ತ ಪರಿಣಾಮ ಬೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದರೆ, ಇದರ ಬಗ್ಗೆ ತೆಗೆದುಕೊಂಡ ಕ್ರಮವೇನು?

## ರಾಜ್ಯದಲ್ಲಿ ೧೦ನೇ ತರಗತಿ ವಿದ್ಯಾರ್ಥಿಗಳನ್ನು ಖಾಸಗಿಯಾಗಿ ಪರೀಕ್ಷೆ ಬರೆಯುತ್ತಿರುವ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೭ (೫೬೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಕೋರ್ಸ್‌ಗೆ ಖಾಸಗಿಯಾಗಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

ಆ) ೨೦೧೪–೧೫ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಹಾಜರಾದ ಒಟ್ಟು ಸಂಖ್ಯೆ ಹಾಗೂ ೨೦೧೩–೧೪ನೇ ಸಾಲಿನ ೯ನೇ ತರಗತಿಯಲ್ಲಿಯ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

ಇ) ೧೦ನೇ ತರಗತಿಯಲ್ಲಿ ಪ್ರತಿಶತ ೧೦೦ ಫಲಿತಾಂಶ ಬರಬೇಕೆನ್ನುವ ಕಾರಣಕ್ಕಾಗಿ ೧೦ನೇ ತರಗತಿ ವಿದ್ಯಾರ್ಥಿಗಳನ್ನು ಖಾಸಗಿಯಾಗಿ ಪರೀಕ್ಷೆ ಬರೆಯುವಂತೆ ಕೆಲವು ಶಿಕ್ಷಣ ಸಂಸ್ಥೆಗಳು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಇನ್ನು ಮುಂದೆ ಈ ರೀತಿಯ ಘಟನೆಗಳು ನಡೆಯದಂತೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

## ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಉಂಟಾಗುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೮ (೫೭೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ವಾರ್ಷಿಕ ಸುಮಾರು ೧೮೦ ರಿಂದ ೨೦೦ ಸೆ.ಮೀ. ಮಳೆಯಾಗುತ್ತಿದ್ದರೂ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಎರಡೂ ಕರಾವಳಿ ಜಿಲ್ಲೆಗಳ ನೀರಿನ ಸಮಸ್ಯೆಯ ಪರಹಾರಕ್ಕಾಗಿ ಸರ್ಕಾರ ಯಾವ ಯೋಜನೆಯನ್ನು ಕೈಗೆತ್ತಿಕೊಂಡಿದೆ; ಈ ಕುರಿತಾಗಿರುವ ಪಶ್ಚಿಮವಾಹಿನಿ ಯೋಜನೆಯ ವಿವರ ನೀಡುವುದು ?

## ರಾಜ್ಯದ ಪಿ.ಯು ಕಾಲೇಜು ಉಪನ್ಯಾಸಕರಿಗೆ ಸ್ನಾತಕೋತ್ತರ ಪದವಿಯೊಂದಿಗೆ ಬಿ.ಎಡ್ ಶಿಕ್ಷಣ ಕಡ್ಡಾಯಗೊಳಿಸಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೮೯ (೫೬೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ಪಿ.ಯು ಕಾಲೇಜು ಉಪನ್ಯಾಸಕರಿಗೆ ಸ್ನಾತಕೋತ್ತರ ಪದವಿಯೊಂದಿಗೆ ಎಂದಿನಿಂದ ಬಿ.ಎಡ್ ಶಿಕ್ಷಣ ಕಡ್ಡಾಯವಾಗಿದೆ;

ಆ) ಈವರೆಗೆ ರಾಜ್ಯದಲ್ಲಿ ಬಿ.ಕಾಂ ಮತ್ತು ಎಂ.ಕಾಂ ಪದವೀಧರರಿಗೆ ಬಿ.ಎಡ್ ಮಾಡಲು ಅವಕಾಶವಿಲ್ಲದಿರುವುದು ಸರ್ಕಾರದ ಗಮನದಲ್ಲಿದೆಯೇ;

ಇ) ವಾಣಿಜ್ಯ ತರಗತಿ ಬೋಧಿಸಲು ಉಪನ್ಯಾಸಕರ ನೇಮಕಾತಿಗೆ ಅರ್ಜಿ ಸಲ್ಲಿಸಲು ಎಂ.ಕಾಂ. ಪದವೀಧರರಿಗೆ ಇದರಿಂದ ತೊಂದರೆಯಾಗಿರುವುದು ಸರ್ಕಾರದ ಗಮನದಲ್ಲಿದೆಯೇ;

ಈ) ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಸ್ವಚ್ಛ ಭಾರತ್ ಅಭಿಯಾನದ ಪ್ರಗತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦ (೫೭೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಸ್ವಚ್ಛ ಭಾರತ್ ಅಭಿಯಾನ" (SBM) ಯೋಜನೆಯಡಿ ೨೦೧೫–೧೬ನೇ ಸಾಲಿನ ವೈಯಕ್ತಿಕ ಶೌಚಾಲಯ ನಿರ್ಮಾಣದ ಗುರಿ ಎಷ್ಟು ; (ತಾಲ್ಲೂಕು, ಜಿಲ್ಲಾವಾರು ವಿವರ ನೀಡುವುದು)

(ಆ) ಹೊಸದಾಗಿ ನಿರ್ಮಾಣಗೊಂಡ ವೈಯಕ್ತಿಕ ಶೌಚಾಲಯಗಳಿಗೆ ಸದರಿ ಯೋಜನೆಯಡಿ ಸಹಾಯಧನ ಪಾವತಿಗೆ ಬಾಕಿ ಇರುವ ಪ್ರಕರಣ ಎಷ್ಟು ಮತ್ತು ಮೊತ್ತವೆಷ್ಟು ;

(ಇ) ನಿರ್ಮಲ್ ಭಾರತ್ ಅಭಿಯಾನ / ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ನಿರ್ಮಾಣಗೊಂಡ ಶೌಚಾಲಯಗಳಿಗೆ ಸಹಾಯಧನ ವಿತರಣೆಯಲ್ಲಿ ವಿಳಂಬವಾಗುತ್ತಿರಲು ಕಾರಣವೇನು ; ಈ ಬಗ್ಗೆ ಸರಕಾರ ಕೈಗೊಂಡ ಕ್ರಮಗಳೇನು ;

(ಈ) ಸಮೀಕ್ಷೆಯಲ್ಲಿ ಬಿಟ್ಟು ಹೋದ ಶೌಚಾಲಯ ರಹಿತ ಕುಟುಂಬಗಳನ್ನು ಗುರಿಯಲ್ಲಿ ಸೇರಿಸಿಕೊಂಡು, ಸಹಾಯಧನ ನೀಡಲು ಸರಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಉ) ಹೊಸದಾಗಿ ನಿರ್ಮಾಣವಾಗುವ ಮನೆಗಳಿಗೆ ಯೋಜನೆಯಡಿ ಶೌಚಾಲಯ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಪ್ರವಾಸೋದ್ಯಮ ಇಲಾಖೆಯ ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೧ (೫೭೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಪ್ರವಾಸೋದ್ಯಮ ಇಲಾಖೆಯ ವತಿಯಿಂದ 'ಪ್ರವಾಸೋದ್ಯಮ ನೀತಿ' ತಯಾರಿಸಲಾಗಿದೆಯೇ; ಅದರಲ್ಲಿನ ಪ್ರಮುಖ ಅಂಶಗಳೇನು; (ವಿವರ ನೀಡುವುದು)

ಆ) ಪ್ರವಾಸೋದ್ಯಮ ಇಲಾಖೆಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದ ನಿರುದ್ಯೋಗ ಯುವಕರಿಗೆ ಟ್ಯಾಕ್ಸಿ ಖರೀದಿಗೆ ಸಹಾಯ ಧನಕ್ಕೆ ನಿಗಧಿ ಪಡಿಸಿದ ಅನುದಾನ ಎಷ್ಟು; ಸೌಲಭ್ಯ ಪಡೆಯಲು ಇರುವ ಅರ್ಹತೆಯೇನು; (ಜಿಲ್ಲಾವಾರು ಆರ್ಥಿಕ, ಭೌತಿಕ ಗುರಿಯ ವಿವರ ನೀಡುವುದು)

ಇ) ಪ್ರವಾಸೋದ್ಯಮ ಇಲಾಖೆಯಿಂದ ಲಭ್ಯವಿರುವ ಸೌಲಭ್ಯಗಳೇನು; ಅರ್ಹತಾ ಮಾನದಂಡಗಳೇನು;

ಈ) ಕರಾವಳಿ ಪ್ರದೇಶದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಕರಾವಳಿಯ CRZ ಸಮಸ್ಯೆಯಿಂದ ಪ್ರವಾಸೋದ್ಯಮದ ಬೆಳವಣಿಗೆಗೆ ತೊಂದರೆ ನಿವಾರಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಯಾವ ಪ್ರಸ್ತಾವನೆ ಸಲ್ಲಿಸಿದೆ? (ವಿವರ ನೀಡುವುದು)

## ಅಕ್ರಮ ಠೇವಣಿ ಹಗರಣ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೩೯೨ (೫೭೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ "ಅಕ್ರಮ ಠೇವಣಿ" ಹಗರಣ ನಡೆದಿರುವುದು ನಿಜವೇ ;

(ಆ) ಅಕ್ರಮ ನಡೆದಿರುವ ಅನುದಾನದ ಮೊತ್ತ ಎಷ್ಟು ; ಅಕ್ರಮದಲ್ಲಿ ಭಾಗಿಯಾಗಿರುವ ಅಧಿಕಾರಿಗಳು ಯಾರ್‍ಯಾರು ; (ಹೆಸರು ಹಾಗೂ ಹುದ್ದೆಯ ಸಹಿತ ವಿವರ ನೀಡುವುದು)

(ಇ) "ಅಕ್ರಮ ಠೇವಣಿ" ಹಗರಣದ ಸಂಬಂಧ ಸರಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಸಾಕಷ್ಟು ಹಿಂದೆಯೇ ಅಕ್ರಮ ನಡೆದಿರುವುದು ಗಮನಕ್ಕೆ ಬಂದಿದ್ದರೂ, ಕ್ರಮ ಕೈಗೊಳ್ಳದಿರುವುದು ನಿಜವೇ ; ವಿಳಂಬಕ್ಕೆ ಕಾರಣರಾದ ಅಧಿಕಾರಿಗಳು ಯಾರು–ಯಾರು ; ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)

## ಘನ-ದ್ರವ ತ್ಯಾಜ್ಯ ವಿಲೇವಾರಿ ಘಟಕ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೩ (೫೬೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

ಅ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಘನ-ದ್ರವ ತ್ಯಾಜ್ಯ ವಿಲೇವಾರಿ ಘಟಕಗಳಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಒಟ್ಟು ಎಷ್ಟು ಗ್ರಾಮ ಪಂಚಾಯತ್‌ಗಳಲ್ಲಿ ವ್ಯವಸ್ಥಿತವಾದ ಘನ-ದ್ರವ ತ್ಯಾಜ್ಯ ವಿಲೇವಾರಿ ಘಟಕಗಳು ಕಾರ್ಯ ನಿರ್ವಹಿಸುತ್ತಿವೆ; (ತಾಲ್ಲೂಕು-ಜಿಲ್ಲಾವಾರು ವಿವರ ನೀಡುವುದು)

ಇ) ಗ್ರಾಮ ಪಂಚಾಯತ್‌ಗಳಲ್ಲಿ ಘನ-ದ್ರವ ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪನೆಗೆ ಇಲಾಖೆಯಿಂದ ಇರುವ ಕಾರ್ಯಕ್ರಮ – ಯೋಜನೆಗಳೇನು; (ಸಂಪೂರ್ಣ ವಿವರ ನೀಡುವುದು)

ಈ) ಗ್ರಾಮ ಪಂಚಾಯತ್‌ಗಳಲ್ಲಿ ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪನೆಗೆ ಅಗತ್ಯ ಭೂಮಿ ದೊರಕದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಉ) ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಘನ-ದ್ರವ ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪನೆ ಮಾಡಲು ಸರ್ಕಾರ ಯಾವಾಗ ಯಾವ ರೀತಿಯ ಯೋಜನೆ ಹಾಕಿಕೊಳ್ಳಲಿವೆ? (ಸಂಪೂರ್ಣ ವಿವರ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯಲ್ಲಿ ಅಕ್ಷರ ದಾಸೋಹ ಫೈಯರ್ ಪ್ರೂಫ್ ಏಪ್ರಾನ್ ಖರೀದಿ ಅವ್ಯವಹಾರ ಪ್ರಕರಣ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೯೪ (೫೭೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಅಕ್ಷರ ದಾಸೋಹ ಯೋಜನೆಯ ಅಗ್ನಿನಂದಕ (ಫೈಯರ್ ಪ್ರೂಫ್) ಏಪ್ರಾನ್ ಖರೀದಿಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಪ್ರಕರಣದಲ್ಲಿ ಕಾರಾಗೃಹ ಇಲಾಖೆಯ ಉನ್ನತ ಹುದ್ದೆ ಅಲಂಕರಿಸಿದ ಅಧಿಕಾರಿಯೊಬ್ಬರು ತಮ್ಮದೆ ಏಜನ್ಸಿಯೊಂದರ ಮೂಲಕ ಈ ಅವ್ಯವಹಾರ ನಡೆಸಿರುವ ಬಗ್ಗೆ ಕೈಗೊಂಡಿರುವ ಕ್ರಮವೇನು ಜಿಲ್ಲಾ ಅಕ್ಷರದಾಸೋಹ ಅಧಿಕಾರಿಯವರು ಈ ಬಗ್ಗೆ ನಿಷ್ಕಾಳಜಿ ಮಾಡಲು ಕಾರಣವೇನು ; (ವಿವರ ನೀಡುವುದು)

(ಆ) ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಉಪ ಬಂದೀಖಾನೆಯಲ್ಲಿ ಅಧೀಕ್ಷಕನಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಯವರು ಅಕ್ಷರ ದಾಸೋಹದ ಫೈಯರ್ ಪ್ರೂಫ್ ಖರೀದಿಯ ಅವ್ಯವಹಾರದಲ್ಲಿ ನೇರವಾಗಿ ಶಾಮೀಲಾಗಿರುವುದರಿಂದ ಅವರ ಮೇಲೆ ಇಲ್ಲಿಯವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಿಂದ ಅಕ್ಷರದಾಸೋಹ ಯೋಜನೆಯಲ್ಲಿ ಅಗ್ನಿನಂದಕ (ಫೈಯರ್ ಪ್ರೂಫ್) ಏಪ್ರಾನ್ ಯಾವ ಏಜೆನ್ಸಿಯಿಂದ ಖರೀದಿಸಿರುತ್ತಾರೆ ; ತಾಲ್ಲೂಕುವಾರು ಸಲಕರಣೆ ನೀಡಿರುವ ವಿವರದ ದಾಖಲೆ ಸಮೇತ (ವಿವರ ನೀಡುವುದು)

(ಈ) ಇದರಲ್ಲಿ ಜಿಲ್ಲಾ / ತಾಲ್ಲೂಕು ಅಕ್ಷರ ದಾಸೋಹ ಅಧಿಕಾರಿಗಳು ಶಾಮೀಲಾಗಿರುವುದು ನಿಜವೇ ಹಾಗಿದ್ದಲ್ಲಿ ಇಲ್ಲಿಯವರೆಗೆ ಅವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕಾರವಾರ ಜಿಲ್ಲೆ ಶಿಶು ಅಭಿವೃದ್ಧಿ ಇಲಾಖೆ ಅಧೀನದಲ್ಲಿರುವ ಎಮ್.ಎಸ್.ಪಿ.ಟಿ.ಸಿ. (ಸಂಸ್ಥೆ)ಯಲ್ಲಿ ಆಹಾರ ಪೂರೈಕೆಯಲ್ಲಿ ನಡೆಯುವ ಅವ್ಯವಹಾರ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೫ (೫೭೫) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಕಳೆದ ೨೦೧೪–೧೫ನೇ ಸಾಲಿನಿಂದ ಈವರೆವಿಗೂ ಶಿಶು ಅಭಿವೃದ್ಧಿ ಅಧಿಕಾರಿಗಳು ತಮ್ಮ ಅಧೀನದಲ್ಲಿರುವ ಎಮ್.ಎಸ್.ಪಿ.ಟಿ.ಸಿ. (ಸಂಸ್ಥೆ)ಗಳಿಗೆ ಮಾಡಲಾದ ಆಹಾರ ಪೂರೈಕೆಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ (ಪ್ರತಿ ತಾಲ್ಲೂಕಿನ ಅಂಗನವಾಡಿಗಳಿಗೆ ಪ್ರತಿ ಮಾಹೆಯಾನ ಆಹಾರ ಪೂರೈಕೆ ಮಾಡಲು ನೀಡಿದ ಬೇಡಿಕೆ ಪತ್ರ ಹಾಗೂ ಪೂರೈಕೆ ಮಾಡಿದ ವಿವರಗಳನ್ನು ಒಳಗೊಂಡಂತೆ ಮಾಹಿತಿ ನೀಡುವುದು)

(ಆ) ಜಿಲ್ಲೆಯ ಕೆಲವೊಂದು ಎಮ್.ಎಸ್.ಪಿ.ಟಿ.ಸಿ. (ಸಂಸ್ಥೆ)ಯಲ್ಲಿ ಯಾವುದೇ ತರಹದ ದಾಖಲೆಗಳನ್ನು ಇಟ್ಟಿರುವುದಿಲ್ಲವೆಂದು ತಿಳಿದು ಬಂದಿರುವುದು ನಿಜವೇ ; ಹಾಗಿದ್ದಲ್ಲಿ ಪ್ರತಿ ದಿವಸ ಆಹಾರ ಪೂರೈಕೆ ಮಾಡಿದ ಹಾಗೂ ಇತರೇ ಹಣಕಾಸಿನ ಚಟುವಟಿಕೆ ಮುಂತಾದವುಗಳ ಕುರಿತಾದ ಇಡಬೇಕಾದ ವಹಿ ಇಟ್ಟಿರುತ್ತಾರೆಯೇ ; (ಕ್ಯಾಶ್ ಬುಕ್, ಸ್ಟಾಕ್ ರಿಜಿಸ್ಟರ್, ಬ್ಯಾಂಕ್ ಬುಕ್, ಫುಡ್ ರಿಸ್ವೀಡ್ ರಿಸಿಪ್ಟನ ವಿವರ ತಿಂಗಳವಾರು ಅಧಿಕಾರಿಗಳ ಶರಾ ಸಮೇತ ವಿವರ ನೀಡುವುದು) ಈ ಹಿಂದೆ ಸದರಿ ವಿಷಯದಲ್ಲಿ, ಅನೇಕ ಬಾರಿ ಪ್ರಸ್ತಾಪ ಮಾಡಿದ್ದರೂ ಸ್ಪಷ್ಟ ಉತ್ತರ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸರಿಯಾದ ದಾಖಲಾತಿಗಳೊಂದಿಗೆ ಮಾಹಿತಿ ನೀಡುವರೆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ?

## ಬೋಳೂರು ಗ್ರಾಮಕ್ಕೆ ಪರ್ಯಾಯವಾಗಿ ಹೊಸ ಬಾವಿ ನಿರ್ಮಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೬ (೫೭೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಕಾರವಾರದಿಂದ ೨೫ ಕಿ.ಮೀ. ದೂರದಲ್ಲಿರುವ ಬೋಳೂರು ಗ್ರಾಮದಲ್ಲಿ ಜಿಲ್ಲಾ ಪಂಚಾಯತ್ ವನ ಪ್ರದೇಶದ ಗುಡ್ಡದ ಭಾಗದಲ್ಲಿ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ಬಾವಿಯೊಂದರಲ್ಲಿ ನೀರಿಲ್ಲದೆ ಜನ ಪರದಾಡುತ್ತಿರುವ ವಿಷಯ ಸರಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಬಾವಿ ನಿರ್ಮಿಸಿದ್ದರೂ ಅಲ್ಲಿಯ ಸಾರ್ವಜನಿಕರಿಗೆ ಉಪಯೋಗವಾಗದೇ ಈ ರೀತಿ ಕಳಪೆ ಕಾಮಗಾರಿ ಮಾಡಿರುವ ಗುತ್ತಿಗೆದಾರನ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ; ಕೈಗೊಳ್ಳಲಾಗದಿದ್ದಲ್ಲಿ ಸುಮ್ಮನಿರಲು ಕಾರಣವೇನು ; ಈ ಪ್ರಕರಣದಲ್ಲಿ ಅಧಿಕಾರಿಗಳು ಶಾಮೀಲಾಗಿದ್ದಾರೆಯೇ ; (ವಿವರ ನೀಡುವುದು)

(ಇ) ಸದರಿ ಗ್ರಾಮದ ಜನರಿಗೆ ಹೊಸದಾಗಿ ಬಾವಿ ನಿರ್ಮಿಸಿಕೊಡಲು ಉದ್ದೇಶಿಸಲಾಗಿದೆಯೇ ? (ಮಾಹಿತಿ ನೀಡುವುದು)

## ಮಹಿಳಾ ಪುನರ್ವಸತಿ ಕೇಂದ್ರಗಳಲ್ಲಿ ತರಬೇತಿ ಕಾರ್ಯಕ್ರಮ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೭ (೫೭೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿರುವ ಮಹಿಳಾ ಪುನರ್ವಸತಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಸದರಿ ಪುನರ್ವಸತಿ ಕೇಂದ್ರಗಳಲ್ಲಿರುವ ಸಂತ್ರಸ್ತ ಯುವತಿಯರ ಸಂಖ್ಯೆ ಎಷ್ಟು ; ಶಾಶ್ವತ ಸಂತ್ರಸ್ತೆಯರ ಸಂಖ್ಯೆ ಎಷ್ಟು ; ತಾತ್ಕಾಲಿಕ ಸಂತ್ರಸ್ತೆಯರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದ ಮಹಿಳಾ ಪುನರ್ವಸತಿ ಕೇಂದ್ರದಲ್ಲಿ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಯಾವ ದಿನಾಂಕದಿಂದ ಖಾಲಿ ಇದೆ ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ; ಎಷ್ಟು ಕಾಲವಕಾಶದಲ್ಲಿ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಉ) ಪುನರ್ವಸತಿ ಕೇಂದ್ರಗಳಲ್ಲಿ ಸಂತ್ರಸ್ತ ಮಹಿಳೆಯರಿಗೆ ಯಾವುದಾದರೂ ತರಬೇತಿಗಳನ್ನು ನೀಡಲಾಗುತ್ತಿದೆಯೇ ;

(ಊ) ಹಾಗಿದ್ದಲ್ಲಿ, ಯಾವ ಯಾವ ತರಬೇತಿಗಳನ್ನು ಸರಕಾರ ಹಮ್ಮಿಕೊಂಡಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಜನತಾ ಚಿತ್ರ ಮಂದಿರಗಳ ಸ್ಥಾಪನೆ ಬಗ್ಗೆ

ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೩೯೮ (೫೭೬) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜನತಾ ಚಿತ್ರಮಂದಿರಗಳನ್ನು ನಿರ್ಮಿಸಲು ಈ ಹಿಂದೆ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿದೆಯೇ ;

(ಆ) ಘೋಷಣೆ ಮಾಡಲಾಗಿದ್ದರೆ ಇದುವರೆಗೂ ಜನತಾ ಚಿತ್ರಮಂದಿರಗಳನ್ನು ನಿರ್ಮಿಸಲು ಸರ್ಕಾರ ಮೀಸಲ ಮೊತ್ತ ವಿನಿಯೋಗಿಸುತ್ತಿರುವುದೇ ;

(ಇ) ಹಾಗಿದ್ದಲ್ಲಿ, ಜನತಾ ಚಿತ್ರಮಂದಿರಗಳನ್ನು ನಿರ್ಮಿಸಲು ಸರಕಾರಕ್ಕೆ ಇರುವ ತೊಂದರೆಗಳೇನು ;

(ಈ) ಜನತಾ ಚಿತ್ರಮಂದಿರಗಳನ್ನು ಯಾವಾಗ ನಿರ್ಮಾಣ ಮಾಡಲಾಗುವುದು ;

(ಉ) ಜನತಾ ಚಿತ್ರಮಂದಿರಗಳನ್ನು ನಿರ್ಮಿಸುವುದಾದರೆ ಯಾವ ಯಾವ ಸ್ಥಳಗಳಲ್ಲಿ ನಿರ್ಮಿಸಲಾಗುವುದು ?

## ಮಂಡ್ಯ ಜಿಲ್ಲೆಯ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೯ (೫೫೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಎಷ್ಟು ಯೋಜನೆಗಳನ್ನು ಸರ್ಕಾರ ಪ್ರಾರಂಭಿಸಿದೆ; ಸದರಿ ಯೋಜನೆಗಳು ಪ್ರಾರಂಭಗೊಂಡಿದ್ದು ಯಾವಾಗ; ಪ್ರಸ್ತುತ ಕಾಮಗಾರಿಯು ಯಾವ ಯಾವ ಹಂತದಲ್ಲಿದೆ; (ಯೋಜನಾವಾರು ಕಾಮಗಾರಿವಾರು ವಿವರ ನೀಡುವುದು)

(ಆ) ಸ್ಥಳೀಯ ಅಧಿಕಾರಿಗಳ ನಿರ್ಲಕ್ಷದಿಂದ ಯಾವುದೇ ಯೋಜನೆಗಳು ಪೂರ್ಣಗೊಳ್ಳದೆ, ಸ್ಥಳೀಯ ನಾಗರೀಕರು ಕುಡಿಯುವ ನೀರಿಗಾಗಿ ಹಾಹಾಕಾರಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಯಾವ ಅವಧಿಯೊಳಗೆ ನೆನೆಗುದಿಗೆ ಬಿದ್ದಿರುವ ಈ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?

## ವಸತಿ ರಹಿತರಿಗೆ ವಸತಿ ಕಲ್ಪಿಸುವ ಬಗ್ಗೆ

**ಶ್ರೀ. ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೦೦ (೭೦೮) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ವಸತಿ ಸೌಲಭ್ಯವಿಲ್ಲದ ಫಲಾನುಭವಿಗಳನ್ನು ಗುರುತಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ವಸತಿ ರಹಿತ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

ಇ) ವಸತಿ ರಹಿತ ಫಲಾನುಭವಿಗಳಿಗೆ ವಸತಿಯನ್ನು ಕಲ್ಪಿಸಲು ಯೋಜನೆಯನ್ನು ರೂಪಿಸಲಾಗಿದೆಯೇ;

ಈ) ಈ ಯೋಜನೆಯನ್ನು ರೂಪಿಸಿದ್ದರೆ ಯಾವ ರೀತಿ ರೂಪಿಸಲಾಗಿದೆ? (ಯೋಜನೆಗಳ ಪೂರ್ಣ ಮಾಹಿತಿ ನೀಡುವುದು)

## ವಸತಿ ಇಲಾಖೆಯಿಂದ ಮಂಜೂರಾದ ಮನೆಗಳು

**ಶ್ರೀಮತಿ ಮೋಟಮ್ಮ** (ವಿಧಾನಸಭೆಯಿಂದ ಚುನಾಯಿತರಾದವರು) –

೪೦೧ (೫೭೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ೨೦೧೩–೧೪ ರಿಂದ ೨೦೧೫–೧೬ನೇ ಸಾಲಿನವರೆಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ಯೋಜನೆಗಳವಾರು ವಿವರ ನೀಡುವುದು)

(ಆ) ಸದರಿ ಮಂಜೂರಾದ ಮನೆಗಳ ಪೈಕಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ;

(ಇ) ಎಷ್ಟು ಮನೆಗಳನ್ನು ಹಂಚಿಕೆ ಮಾಡದೇ, ರದ್ದುಗೊಳಿಸಲಾಗಿದೆ ; ರದ್ದುಗೊಳ್ಳಲು ಕಾರಣವೇನು ;

(ಈ) ಮಂಜೂರಾದ ಮನೆಗಳಲ್ಲಿ ಎಷ್ಟು ಮನೆಗಳು ಪೂರ್ಣಗೊಂಡಿವೆ ; ಪೂರ್ಣಗೊಳ್ಳದ ಮನೆಗಳ ಸಂಖ್ಯೆ ಎಷ್ಟು ; ಪೂರ್ಣಗೊಳ್ಳದೆ ಇರುವುದಕ್ಕೆ ಕಾರಣಗಳೇನು ? (ಪೂರ್ಣ ವಿವರ ಒದಗಿಸುವುದು)

## ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿ ಇರುವ ಅಭಿಯಂತರರ ಹುದ್ದೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೦೨ (೫೭೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಪಂಚಾಯತ್ ರಾಜ್ ಇಲಾಖೆಯಲ್ಲಿ ಮಂಜೂರಾದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಅಭಿಯಂತರರು ಮತ್ತು ಕಿರಿಯ ಅಭಿಯಂತರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ ; ಎಷ್ಟು ಹುದ್ದೆಗಳು ಯಾವ ಅವಧಿಯಿಂದ ಖಾಲಿ ಇವೆ ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಇ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸರ್ಕಾರಿ ವೇತಾನಾನುದಾನಕ್ಕೆ ಒಳಪಡಿಸಿರುವ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೪೦೩ (೫೮೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫ ರಿಂದ ಪ್ರಾರಂಭವಾಗಿರುವ ಎಷ್ಟು ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳನ್ನು ಸರ್ಕಾರಿ ವೇತಾನಾನುದಾನಕ್ಕೆ ಒಳಪಡಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಲ್ಲದಿದ್ದಲ್ಲಿ, ಈ ವಿಳಂಬಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಗಣಕಯಂತ್ರ ಕಲಿಕೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೪೦೪ (೩೮೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಗಣಕ ಯಂತ್ರ ಇಲ್ಲದೇ ಇರುವ ಶಾಲೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗಣಕಯಂತ್ರ ಕಲಿಕೆ ಶಿಕ್ಷಕರನ್ನು ಖಾಯಂ ಆಗಿ ನೇಮಿಸಲಾಗುವುದೇ; (ವಿವರ ನೀಡುವುದು)

(ಇ) ಖಾಯಂ ಆಗಿ ಕೆಲಸ ನಿರ್ವಹಿಸುತ್ತಿರುವ ಗಣಕಯಂತ್ರ ಶಿಕ್ಷಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಶಾಲೆಗೊಬ್ಬ ಗಣಕಯಂತ್ರ ಶಿಕ್ಷಕರನ್ನು ಖಾಯಂ ಆಗಿ ನೇಮಿಸುವ ಕುರಿತು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿರುವ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೪೦೫ (೩೮೩) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡವಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಆ) ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಎಲ್ಲಾ ಕಾಲೇಜುಗಳಲ್ಲಿ ಗ್ರಂಥಾಲಯ ಪ್ರಯೋಗಾಲಯ ಕ್ರೀಡಾಂಗಣಗಳ ಸೌಲಭ್ಯಗಳಿವೆಯೇ ; (ಕಾಲೇಜುವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿಶ್ವವಿದ್ಯಾಲಯಕ್ಕೆ ಸೇರಿದ ಜಾಗದಲ್ಲಿ ಪೆಟ್ರೋಲ್ ಬಂಕ್

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೦೬. (೩೮೭) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸೇರಿದ ಬೆಂಗಳೂರು ಸೆಂಟ್ರಲ್ ಕಾಲೇಜ್ ಬಳಿಯ ಜಾಗವನ್ನು ಪೆಟ್ರೋಲ್ ಬಂಕ್ ನಡೆಸಲು ಖಾಸಗಿಯವರಿಗೆ ನೀಡಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಅದಕ್ಕೆ ಪ್ರತ್ಯೇಕ ಸರ್ವೆ ನಂಬರ್ ಇದೆಯೆ ; ನೀಡಿರುವ ಜಾಗದ ವಿಸ್ತೀರ್ಣವೇನು ; ಯಾರಿಗೆ, ಯಾವಾಗ ಮತ್ತು ಯಾವ ರೀತಿ ನೀಡಲಾಗಿದೆ ;

(ಇ) ಖಾಸಗಿಯವರಿಗೆ ಸದರಿ ಜಾಗವನ್ನು ಎಷ್ಟು ಕಾಲಾವಧಿವರೆಗೆ ನೀಡಲಾಗಿರುತ್ತದೆ ;

(ಈ) ಇದನ್ನು ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಮರಳಿ ಪಡೆಯಲು ಪ್ರಯತ್ನ ನಡೆದಿದೆಯೇ ? (ವಿವರ ನೀಡುವುದು)

## ಪ್ರಾಥಮಿಕ ಶಾಲಾ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿನ ಕೀ ಉತ್ತರಗಳು ತಪ್ಪಾಗಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೦೭ (೩೮೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪ರಲ್ಲಿ ನಡೆದ ಪ್ರಾಥಮಿಕ ಶಾಲಾ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಮತ್ತೊಮ್ಮೆ ೨೦೧೫ರಲ್ಲಿ ಕೇಂದ್ರೀಕೃತ ದಾಖಲಾತಿ ಘಟಕ (ಸಿಎಸಿ) ದಿಂದ ಪರೀಕ್ಷೆ ನಡೆಸಿರುವುದು ನಿಜವೇ ;

(ಆ) ಈ ರೀತಿ ಎರಡು ಬಾರಿ ಪರೀಕ್ಷೆ ನಡೆಸಲು ಪ್ರಮುಖ ಕಾರಣವೇನು ;

(ಇ) ಸಿಎಸಿ ಯಿಂದ ನಡೆದ ಸಿಇಟಿ ಪರೀಕ್ಷೆಯಲ್ಲಿ ಕೆಲವು ಕೀ ಉತ್ತರಗಳು ತಪ್ಪಾಗಿರುವುದು ನಿಜವೇ ; (ವಿವರ ನೀಡುವುದು)

(ಈ) ಈ ಸಂಬಂಧ ಈಗಾಗಲೇ ಪರೀಕ್ಷೆ ಬರೆದು ಅಭ್ಯರ್ಥಿಗಳಿಗೆ ಅನ್ಯಾಯವಾಗದ ಹಾಗೆ ಅಂಕ ನೀಡಲು ಯಾವ ರೀತಿ ಕ್ರಮ ವಹಿಸಲಾಗುವುದು ; (ವಿವರ ನೀಡುವುದು)

(ಉ) ಸದರಿ ಪರೀಕ್ಷೆಯಲ್ಲಿ ಕೆಲವು ಕೀ ಉತ್ತರಗಳು ತಪ್ಪಾಗಲು ಕಾರಣವೇನು ; ಈ ಸಂಬಂಧ ಏನು ಕ್ರಮ ಕೈಗೊಳ್ಳಲಾಗಿದೆ ?

## ಪದವಿ ಕಾಲೇಜುಗಳ ಉಪನ್ಯಾಸಕರಿಗೆ ಬೋಧನಾ ಅವಧಿಯನ್ನು ವಿಸ್ತರಿಸುವ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೦೮ (೫೮೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪದವಿ ಕಾಲೇಜುಗಳ ಉಪನ್ಯಾಸಕರು ಇದುವರೆವಿಗೆ ವಾರಕ್ಕೆ ಎಷ್ಟು ಗಂಟೆಗಳ ಕಾಲ ಬೋಧನೆ ಮಾಡುತ್ತಿದ್ದಾರೆ;

(ಆ) ಈ ಶೈಕ್ಷಣಿಕ ವರ್ಷದಿಂದ ಇವರುಗಳ ಬೋಧನಾ ಅವಧಿಯನ್ನು ೧೬ ರಿಂದ ೨೨ ಗಂಟೆಗೆ ವಿಸ್ತರಿಸಲು ಮುಂದಾಗಿರುವುದು ನಿಜವೇ;

(ಇ) ಮುಂದಾಗಿದ್ದಲ್ಲಿ, ಅದಕ್ಕೆ ಕಾರಣವೇನು; ಈ ರೀತಿ ಬದಲಾವಣೆ ಮಾಡಲು ಶಿಕ್ಷಣ ತಜ್ಞರಿಂದ ಸಲಹೆ ಪಡೆಯಲಾಗಿದೆಯೇ; (ವಿವರ ನೀಡುವುದು)

(ಈ) ಬೇರೆ ಯಾವ ರಾಜ್ಯಗಳಲ್ಲಿ ಪದವಿ ಕಾಲೇಜು ಉಪನ್ಯಾಸಕರ ಬೋಧನಾ ಅವಧಿಯು ೨೨ ಗಂಟೆಗೆ ನಿಗಧಿಯಾಗಿರುತ್ತದೆ ?

## ಗ್ರಾಮ ಪಂಚಾಯ್ತಿಗಳ ಕಟ್ಟಡಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೦೯ (೫೮೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈ ಬಾರಿ ರಚನೆಯಾಗಿರುವ ನೂತನ ಗ್ರಾಮ ಪಂಚಾಯ್ತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನೂತನವಾಗಿ ರಚಿಸಲ್ಪಟ್ಟಿರುವ ಎಷ್ಟು ಗ್ರಾಮ ಪಂಚಾಯ್ತಿಗಳಿಗೆ ಕಟ್ಟಡ ಶೌಚಾಲಯ ಸಿಬ್ಬಂದಿ ಮೊದಲಾದ ಮೂಲಭೂತ ಸೌಕರ್ಯಗಳ ಕೊರತೆ ಇದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಸಂಬಂಧ ಮೂಲಭೂತ ಸೌಕರ್ಯವನ್ನು ಒದಗಿಸಲು ವಿಶೇಷವಾಗಿ ಹಣ ಬಿಡುಗಡೆ ಮಾಡಲಾಗಿದೆಯೇ ? (ವಿವರ ನೀಡುವುದು)

## ತುಂಗಭದ್ರಾ ಹಿನ್ನೀರಿನಿಂದ ಕುಡಿಯುವ ನೀರು ಪೂರೈಕೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೦ (೫೯೦) ಗ್ರಾಮೀಣಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲ್ಲೂಕು ಮತ್ತು ಮೊಳಕಾಲ್ಮೂರು ತಾಲ್ಲೂಕುಗಳಿಗೆ ತುಂಗಭದ್ರ ಡ್ಯಾಂ ಹಿನ್ನೀರಿನಿಂದ ಕುಡಿಯುವ ನೀರಿನ ಯೋಜನೆ ಕೈಗೆತ್ತಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಇದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಇ) ಈ ಎರಡು ತಾಲ್ಲೂಕುಗಳ ಯಾವ ಯಾವ ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲು ಯೋಜಿಸಲಾಗಿದೆ ?

## ಅಂಗನವಾಡಿ ಕೇಂದ್ರಗಳ ಬಗ್ಗೆ ನಿರ್ಮಾಣ ಕಾರ್ಯ ಕಟ್ಟಡ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೧೧ (೩೮೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಅಂಗನವಾಡಿ ಕೇಂದ್ರಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಅಂಗನವಾಡಿ ಕೇಂದ್ರಗಳು ಎಷ್ಟು ;

(ಇ) ಯಾವ ಯೋಜನೆಯಡಿ ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುವುದು ;

(ಈ) ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ ಸ್ವಂತ ಕಟ್ಟಡ ಇಲ್ಲದೇ ಇರುವ ಅಂಗನವಾಡಿ ಸಂಖ್ಯೆ ಎಷ್ಟು ?

## ರಾಜ್ಯದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಬಂದ ಪ್ರಕರಣದ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೨ (೬೮೭) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಿಂದ ೨೦೧೫ರವರೆಗೆ ರಾಜ್ಯದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗಳೆದುರು ಬಂದ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ೨೦೧೩ ರಿಂದ ೨೦೧೫ರವರೆಗೆ ಇತ್ಯರ್ಥವಾದ ಮತ್ತು ಇತ್ಯರ್ಥವಾಗದೆ ಉಳಿದ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ೨೦೧೩ ರಿಂದ ೨೦೧೫ರವರೆಗೆ ಪುನರ್ವಸತಿಗೊಂಡ ಮಕ್ಕಳ ಸಂಖ್ಯೆ ಎಷ್ಟು;

(ಈ) ಮಕ್ಕಳ ಕಲ್ಯಾಣ ಸಮಿತಿಗಳು ಕೇಂದ್ರದ ಕಾಯಿದೆಯನ್ವಯ ನಿರ್ಮಾಣವಾಗಿರುವುದರಿಂದ ರಾಜ್ಯ ಸರ್ಕಾರವು ಈ ಸಮಿತಿಯ ಕಾರ್ಯ ನಿರ್ವಹಣೆಗೆ ಎಂತಹ ಸೌಲಭ್ಯಗಳನ್ನು ನೀಡುತ್ತಿದೆ?

## ರಾಜ್ಯದಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆಯನ್ನು ನಡೆಸುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೩ (೬೮೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆ ನಡೆಸಲಾಗುತ್ತಿದೆಯೇ; ಪಂಚಾಯತಿವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು;

(ಆ) ಈ ಮಕ್ಕಳ ಹಕ್ಕುಗಳ ಗ್ರಾಮಸಭೆ ನಡೆಯುವ ಪ್ರಕ್ರಿಯೆ ಏನು ; ( ವಿವರಿಸುವುದು)

(ಇ) ಸರ್ಕಾರದ ಸುತ್ತೋಲೆಯನ್ನು ಮೀರಿ ಮಕ್ಕಳ ಹಕ್ಕುಗಳ ಗ್ರಾಮಸಭೆ ನಡೆಸದೆ ಇರುವ ಪಂಚಾಯತಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಮಕ್ಕಳ ವಿಚಾರಗಳನ್ನು ಕಡ್ಡಾಯವಾಗಿ ಪಂಚಾಯತಿಯ ಸಾಮಾನ್ಯ ಸಭೆ ಮತ್ತು ಗ್ರಾಮಸಭೆಯಲ್ಲಿ ಎತ್ತಿಕೊಳ್ಳಲು ಕಾಯಿದೆಯಲ್ಲಿ ಹಕ್ಕುಗಳಿಗೆ ಸಂಬಂಧಿಸಿದ ಸೂಕ್ತ ಮಾರ್ಪಾಡು ಮಾಡುವ ಕುರಿತು ಸರ್ಕಾರ ಯೋಚಿಸುತ್ತಿದೆಯೇ?

## ರಾಜ್ಯದಲ್ಲಿರುವ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳ ಬಗ್ಗೆ

ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೪೧೪ (೬೮೫) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಪೌಷ್ಠಿಕ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಪೌಷ್ಠಿಕತೆ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಸರ್ಕಾರ ಮೀಸಲಿಟ್ಟ ಹಣವೆಷ್ಟು ಮತ್ತು ಅದರಲ್ಲಿ ಎಷ್ಟು ಪ್ರಮಾಣದ ಹಣವನ್ನು ಸಮರ್ಪಕವಾಗಿ ವ್ಯಯಿಸಲಾಗಿದೆ?

## ರಾಜ್ಯದಲ್ಲಿರುವ ಜೀತ ಪದ್ಧತಿಯ ನಿರ್ಮೂಲನೆಯ ಬಗ್ಗೆ

ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೪೧೫ (೫೯೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿ ಜೀತ ಪದ್ಧತಿ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ೦೩ ವರ್ಷದಿಂದ ಪತ್ತೆಯಾಗಿರುವ ಪ್ರಕರಣಗಳೆಷ್ಟು;

(ಇ) ಇದರ ಬಗ್ಗೆ ಸರ್ಕಾರದ ಕ್ರಮಗಳೇನು; ಸಂಪೂರ್ಣವಾಗಿ ಜೀತ ಪದ್ಧತಿಯ ನಿರ್ಮೂಲನೆಗೆ ಸರ್ಕಾರವು ಅನುಸರಿಸುತ್ತಿರುವ ಕಾರ್ಯಕ್ರಮಗಳೇನು?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಪಠ್ಯ ಪುಸ್ತಕಗಳಲ್ಲಿ ದೋಷಗಳು ಕಂಡು ಬರುತ್ತಿರುವ ಬಗ್ಗೆ.

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೬ (೬೭೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ವರ್ಷವೂ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಪಠ್ಯ ಪುಸ್ತಕಗಳಲ್ಲಿ ತಪ್ಪುಗಳು ಕಂಡುಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದಕ್ಕೆ ಕಾರಣಗಳೇನು: ಮತ್ತು ಸರಿಪಡಿಸಲು ಕೈಗೊಂಡ ಕ್ರಮಗಳೇನು;

(ಇ) ಪಠ್ಯ ಪುಸ್ತಕಗಳಲ್ಲಿ ದೋಷಯುಕ್ತ ಪಾಠಗಳನ್ನು ಬರೆಯುವುದು; ಅದನ್ನು ಸಮರ್ಪಕವಾಗಿ ಸಂಪಾದನೆ ಮಾಡದೆ ಪ್ರಕಟಣೆಗೆ ನೀಡುವವರ ವಿರುದ್ಧ ಸರ್ಕಾರ ಶಿಸ್ತು ಕ್ರಮ ಕೈಗೊಂಡಿದೆಯೇ?

## ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಜೆ.ಒ.ಸಿ. ಉಪನ್ಯಾಸಕರ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೧೭ (೫೯೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ J.O.C ಉಪನ್ಯಾಸಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಇವರುಗಳ ಸೇವೆಯನ್ನು ಖಾಯಂಗೊಳಿಸಲು ಹಾಗೂ ಕನಿಷ್ಠ ವೇತನ ನಿಗದಿಗೊಳಿಸುವಲ್ಲಿ ವಿಳಂಬಕ್ಕೆ ಕಾರಣಗಳೇನು;

(ಇ) ಕನಿಷ್ಠ ವೇತನ ನಿಗದಿ ಮತ್ತು ಸೇವೆ ಖಾಯಂಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಪಂಚಾಯತ್ ರಾಜ್ ಯೋಜನೆಗಳ ಬಗ್ಗೆ

ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೪೧೮ (೫೯೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಪ್ರಸ್ತುತ ಸರ್ಕಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನ ಮಾಡಿದ ಯೋಜನೆಗಳಾವುವು; (ವಿವರ ನೀಡುವುದು)

(ಆ) ಅನುಷ್ಠಾನ ಮಾಡಿದ ಯೋಜನೆಗಳಲ್ಲಿ ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರದ ಯೋಜನೆಗಳೆಷ್ಟು; ವೆಚ್ಚ ಮಾಡಿದ ಹಣವೆಷ್ಟು? (ಯೋಜನಾವಾರು, ತಾಲ್ಲೂಕುವಾರು ವಿವರ ನೀಡುವುದು).

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಜಿಲ್ಲಾ ಪಂಚಾಯತ್ ಕಛೇರಿಗಳಲ್ಲಿರುವ ಹುದ್ದೆಗಳ ಬಗ್ಗೆ

ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೪೧೯ (೫೯೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಜಿಲ್ಲಾ ಪಂಚಾಯತ್ ಕಛೇರಿ ಹಾಗೂ ಇದರ ಅಧೀನ ಇಲಾಖೆಗಳಲ್ಲಿ ಮಂಜೂರಾಗಿರುವ ವಿವಿಧ ವರ್ಗದ ಹುದ್ದೆಗಳೆಷ್ಟು ; ಇವುಗಳಲ್ಲಿ ಕೊರತೆ ಇರುವ ಹುದ್ದೆಗಳೆಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಸಿಬ್ಬಂದಿಗಳ ಕೊರತೆ ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೦ (೫೫೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಮಂಜೂರಾದ ಶಿಕ್ಷಕಿಯರ ಮತ್ತು ಸಹಾಯಕಿಯರ ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಅಂಗನವಾಡಿ ಶಿಕ್ಷಕಿಯರ ಮತ್ತು ಸಹಾಯಕಿಯರ ನೇಮಕಾತಿಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿ ಕಲ್ಪಿಸಲಾಗಿದೆಯೇ; ಈವರೆಗೆ ನೇಮಕ ಮಾಡಲಾದ ಹುದ್ದೆಗಳಲ್ಲಿ ಅಲ್ಪಸಂಖ್ಯಾತ ಮುಸ್ಲಿಂ ಶಿಕ್ಷಕಿಯರು ಮತ್ತು ಸಹಾಯಕಿಯರ ಸಂಖ್ಯೆ ಎಷ್ಟು;

(ಇ) ಭಾಷಾ ಅಲ್ಪಸಂಖ್ಯಾತರ ಜನವಸತಿ ಪ್ರದೇಶಗಳಲ್ಲಿ ಆ ಭಾಷೆ ಮಾತನಾಡಬಲ್ಲ ಶಿಕ್ಷಕಿಯರ ನೇಮಕ ಮಾಡಲಾಗುತ್ತಿದೆಯೇ; ಈ ಸಂಬಂಧ ಸರ್ಕಾರದಿಂದ ಯಾವುದಾದರೂ ಸ್ಪಷ್ಟ ನೀತಿ ಇದೆಯೇ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಗ್ರಂಥಾಲಯಗಳ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೧ (೬೦೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಒಟ್ಟು ಗ್ರಂಥಾಲಯಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎಲ್ಲಾ ಸಾರ್ವಜನಿಕ ಗ್ರಂಥಾಲಯಗಳಲ್ಲೂ ಗ್ರಂಥಪಾಲಕರು ಇದ್ದಾರೆಯೇ ; ಗ್ರಂಥಪಾಲಕರಿಗೆ ಪ್ರತಿ ತಿಂಗಳು ನೀಡುವ ಸಂಭಾವನೆ ಎಷ್ಟು ;

(ಇ) ಸುಸಜ್ಜಿತವಾಗಿರುವ ಗ್ರಂಥಾಲಯಗಳೆಷ್ಟು ; ಶೋಚನೀಯ ಸ್ಥಿತಿಯಲ್ಲಿರುವ ಗ್ರಂಥಾಲಯಗಳೆಷ್ಟು ?

## ಅದ್ಯ ವಚನಕಾರ ಶ್ರೀ ದೇವರ ದಾಸಿಮಯ್ಯ ಜಯಂತಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೪೨೨ (೬೨೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅದ್ಯವಚನಕಾರ, ನೇಕಾರ, ಸಂತ ಶ್ರೀ ದೇವರದಾಸಿಮಯ್ಯ ಜಯಂತಿಯನ್ನು ಸರ್ಕಾರ ಯಾವ ದಿನಾಂಕದಂದು ಆಚರಿಸಿರುತ್ತದೆ ;

(ಆ) ರಾಜ್ಯಾದ್ಯಂತ ಆಚರಿಸಲು ಜಿಲ್ಲಾಧಿಕಾರಿಗಳಿಗೆ ಹಾಗೂ ತಾಲ್ಲೂಕು ದಂಡಾಧಿಕಾರಿಗಳಿಗೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಯಿತು; ಯಾವಾಗ ಬಿಡುಗಡೆ ಮಾಡಲಾಗಿದೆ ;

(ಇ) ರಾಜ್ಯದ ಎಲ್ಲಾ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಆಚರಿಸಿದ ಕ್ರಮಗಳೇನು ; (ಜಿಲ್ಲಾವಾರು / ತಾಲ್ಲೂಕುವಾರು ವಿವರ ನೀಡುವುದು)

(ಈ) ಕೆಲವು ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಜಯಂತಿ ಆಚರಿಸದಿರಲು ಕಾರಣಗಳೇನು ;

(ಉ) ಸರ್ಕಾರದ ಆದೇಶವನ್ನು ನಿರ್ಲಕ್ಷ್ಯಮಾಡಿರುವವರ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು ?

## ಚೆನ್ನೈ ಕನ್ನಡ ಸಂಘಕ್ಕೆ ಹಣ ಮಂಜೂರು ಬಗ್ಗೆ

ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –

೪೨೩ (೬೮೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊರನಾಡ ಕನ್ನಡಿಗರಿಗೆ ರಾಜ್ಯೋತ್ಸವ ಹಾಗೂ ಕನ್ನಡ ಕಾರ್ಯಕ್ರಮಗಳನ್ನು ನಡೆಸಲು ಸರ್ಕಾರ ಯಾವ ರೀತಿ ಪ್ರೋತ್ಸಾಹ ನೀಡಲಾಗುತ್ತಿದೆ ;

(ಆ) ಕಳೆದ ೫೦ ವರ್ಷಗಳಿಂದ ಚೆನ್ನೈ ನಗರದ ಕನ್ನಡ ಸಂಘವು ಕನ್ನಡ ರಾಜ್ಯೋತ್ಸವ ಹಾಗೂ ಕನ್ನಡ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅದ್ದೂರಿಯಾಗಿ ನಡೆಸಿಕೊಂಡು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಂಬಂಧಪಟ್ಟ ದಾಖಲೆಗಳನ್ನು ನೀಡಿದ್ದರೂ ಸಹ ಅನುದಾನ ನೀಡದಿರಲು ಕಾರಣವೇನು; ಪುನ: ಅರ್ಜಿ ಸಲ್ಲಿಸುವ ಔಚಿತ್ಯವಿದೆಯೇ ;

(ಈ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಯಾವ ಕಾಲಮಿತಿಯೊಳಗೆ ಹಣ ಬಿಡುಗಡೆ ಮಾಡಲಾಗುವುದು ?

## ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ಅನುಮೋದನೆ ಪಡೆಯದೇ ಮಂಜೂರಾತಿ ನೀಡಿರುವ ಬಗ್ಗೆ

ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –

೪೨೪ (೬೯೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರದ ಕುಡಿಯುವ ನೀರಿನ ಬಗ್ಗೆ ಟಾಸ್ಕ್‌ಫೋರ್ಸ್ ಸಭೆ ಯಾವಾಗ ಕರೆಯಲಾಯಿತು ;

(ಆ) ಆ ಸಭೆಯಲ್ಲಿ ಕೈಗೊಂಡ ತೀರ್ಮಾನಗಳೇನು ; (ವಿವರ ನೀಡುವುದು)

(ಇ) ಸಭೆಯಲ್ಲಿ ಯಾವುದೇ ತೀರ್ಮಾನ ಆಗದಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಯಾವ ಯಾವ ಅಧಿಕಾರಿಗಳು ಷರಾ ಬರೆದು ಸಹಿ ಮಾಡಿರುತ್ತಾರೆ ;

(ಈ) ಟಾಸ್ಕ್‌ಫೋರ್ಸ್ ಸಭೆಯಲ್ಲಿ ಯಾವುದೇ ವಿಚಾರ ಮಂಡಿಸದೆ ಮುಖ್ಯ ಕಾರ್ಯನಿರ್ವಾಹಕರಿಗೆ ಕಳುಹಿಸಿದ ವರದಿಯೇನು ;

(ಉ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಗೆ ಅನುಮೋದನೆ ಕೊಡದೆ ಕೊಳವೆಬಾವಿ ಕೊರೆಯಲು ಯಾವ ಮಾನದಂಡದ ಮೇಲೆ ಮಂಜೂರಾತಿ ನೀಡಲಾಗಿದೆ ; ಸರ್ಕಾರದ ಆದೇಶ ಉಲ್ಲಂಘಿಸಿದ ಅಧಿಕಾರಿಗಳ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು ?

## ಸರ್ಕಾರಿ ಶಾಲೆಯ ಶಿಕ್ಷಕರ ವರ್ಗಾವಣೆ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

**೪೨೫ (೬೨೬)** ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳು ತಮ್ಮ ಸೇವಾ ಅವಧಿಯಲ್ಲಿ ಒಮ್ಮೆ ಬೇರೊಂದು ಘಟಕಕ್ಕೆ ವರ್ಗಾವಣೆಯಾದಲ್ಲಿ ಮತ್ತೆ ಬೇರೆ ಜಿಲ್ಲೆಗಳಿಗೆ ವರ್ಗಾವಣೆ ಪಡೆಯಲು ಸರ್ಕಾರದಿಂದ ಹೊಸ ನೀತಿ ಮಾಡಲಾಗಿದೆಯೆ;

(ಆ) ಪತಿ–ಪತ್ನಿ ಪ್ರಕರಣ ಮತ್ತು ವಯೋವೃದ್ಧ ಪೋಷಕರಿರುವ ಪ್ರಕರಣದ ಶಿಕ್ಷಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಏನು ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಇ) ಅಂಗವಿಕಲರಿಗೆ, ವಿಧವೆಯರಿಗೆ ವೈದ್ಯಕೀಯ ಕಾರಣದ ವರ್ಗಾವಣೆಗಳಿಗೆ ಹೇಗೆ ಘಟಕ ನಿಬಂಧನೆಗಳಿಲ್ಲವೋ ಹಾಗೆ ಪತಿ–ಪತ್ನಿ ಪ್ರಕರಣ, ವಯೋವೃದ್ಧ ಪೋಷಕರಿರುವ ಪ್ರಕರಣದ ವರ್ಗಾವಣೆಗೆ ವಿಶೇಷ ಪ್ರಕರಣದಡಿಯಲ್ಲಿ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ?

## ಪ್ರಾಥಮಿಕ / ಪ್ರೌಢಶಾಲೆ / ಪದವಿ ಪೂರ್ವ ಕಾಲೇಜುಗಳ ಅನುದಾನಕೊಳ್ಳಪಟ್ಟ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೪೨೬ (೬೩೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳು ಅನುದಾನಕ್ಕೊಳಪಟ್ಟು ೫ ವರ್ಷಗಳು ಪೂರೈಸಿ, ಯೋಜನೆ ಲೆಕ್ಕ ಶೀರ್ಷಿಕೆಯಲ್ಲಿ ವೇತನ ಪಡೆಯುತ್ತಿರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಸಂಸ್ಥೆಗಳು ಯಾವ ಯಾವ ದಿನಾಂಕದಂದು ವೇತನಾನುದಾನಕ್ಕೊಳಪಟ್ಟಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ವೇತನಾನುದಾನಕ್ಕೆ ಒಳಪಟ್ಟು ೫ ವರ್ಷ ಪೂರೈಸಿದರೂ ಯೋಜನೇತರ ಲೆಕ್ಕ ಶೀರ್ಷಿಕೆಯ ವ್ಯಾಪ್ತಿಗೆ ತರದೆ ಇರಲು ಕಾರಣಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಸದರಿ ಸಂಸ್ಥೆಗಳನ್ನು ಯೋಜನೇತರ ಲೆಕ್ಕ ಶೀರ್ಷಿಕೆಯ ವ್ಯಾಪ್ತಿಗೆ ತರಲಾಗುವುದು ?

## ಅನುದಾನಿತ ಸಂಸ್ಥೆಯ ನೇಕಾರರಿಗೆ ನ್ಯೂ ಪೆನ್‌ಷನ್ ಸ್ಕೀಂ ಜಾರಿಗೆ ತರುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೪೨೭ (೬೩೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಭೋಧಕ/ ಭೋದಕೇತರರಿಗೆ ನ್ಯೂ ಪೆನ್‌ಷನ್ ಸ್ಕೀಂ ಎಂದಿನಿಂದ ಜಾರಿಗೆ ತರಲಾಗಿದೆ ; ನ್ಯೂ ಪೆನ್‌ಷನ್ ಸ್ಕೀಂ ಮಾರ್ಗಸೂಚಿಗಳೇನು ; (ವಿವರ ನೀಡುವುದು)

(ಆ) ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನ್ಯೂ ಪೆನ್‌ಷನ್ ಸ್ಕೀಂ ವ್ಯಾಪ್ತಿಯಲ್ಲಿನ ಭೋಧಕ/ಬೋಧಕೇತರರ ಸಂಖ್ಯೆ ಎಷ್ಟು ; (ವರ್ಗವಾರು ವಿವರ ನೀಡುವುದು)

(ಇ) ಅನುದಾನಿತ ಶಾಲಾ / ಕಾಲೇಜುಗಳಲ್ಲಿ ಇದುವರೆವಿಗೂ ಆಡಳಿತ ಮಂಡಳಿಯವರು ಸದರಿ ಯೋಜನೆಯನ್ನು ಭೋಧಕ / ಬೋಧಕೇತರರಿಗೆ ಕಲ್ಪಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಯೋಜನೆಯಿಂದ ವಂಚಿತರಾಗಿರುವ ಬೋಧಕ / ಬೋಧಕೇತರರಿಗೆ ಪರಿಹಾರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರ ಹುದ್ದೆ ಭರ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೪೨೮ (೬೩೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೇ–೨೦೧೫ರವರೆಗೆ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು; ಯಾವ ಸಮಯದಿಂದ ಈ ಹುದ್ದೆಗಳು ಖಾಲಿ ಇವೆ ; (ವಿವರ ನೀಡುವುದು)

(ಆ) ಸದರಿ ಹುದ್ದೆಗಳು ದೀರ್ಘ ಕಾಲದಿಂದ ಖಾಲಿ ಇರುವುದರಿಂದ ಕಾಲೇಜಿನ ಆಡಳಿತ ಹಾಗೂ ಗುಣಾತ್ಮಕ ಶಿಕ್ಷಣಕ್ಕೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲು ವಿಳಂಬ ಉಂಟಾಗಲು ಕಾರಣಗಳೇನು ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಇದುವರೆವಿಗೂ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ಯಾವ ಕಾಲ ಮಿತಿಯಲ್ಲಿ ಬಡ್ತಿ ಮೂಲಕ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೪೨೮(ಎ) (೬೩೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮೇ–೨೦೧೫ರವರೆಗೆ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು ; ಯಾವ ಸಮಯದಿಂದ ಈ ಹುದ್ದೆಗಳು ಖಾಲಿ ಇವೆ ; (ವಿವರ ನೀಡುವುದು)

(ಆ) ಸದರಿ ಹುದ್ದೆಗಳು ದೀರ್ಘ ಕಾಲದಿಂದ ಖಾಲಿ ಇರುವುದರಿಂದ ಕಾಲೇಜಿನ ಆಡಳಿತ ಹಾಗೂ ಗುಣಾತ್ಮಕ ಶಿಕ್ಷಣಕ್ಕೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲು ವಿಳಂಬ ಉಂಟಾಗಲು ಕಾರಣವೇನು ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಇದುವರೆವಿಗೂ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ;

(ಉ) ಯಾವ ಕಾಲಮಿತಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೨೯ (೬೪೦) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಗೆ ಅಧಿಸೂಚನೆ ಹೊರಡಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಅರ್ಹತೆ, ಅರ್ಜಿ ಶುಲ್ಕ, ಹುದ್ದೆಗಳ ಸಂಖ್ಯೆ, ೩೭೧ (ಜೆ) ಮೀಸಲಾತಿ ವಿವರಗಳನ್ನು ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಈ ಹುದ್ದೆಗಳಿಗೆ ಸಲ್ಲಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; ಸಂಗ್ರಹವಾದ ಹಣವೆಷ್ಟು; ಈ ಹೆಚ್ಚಿನ ಶುಲ್ಕ ವಸೂಲಿಯಿಂದ ಪದವೀಧರರ ಮೇಲೆ ಹೊರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕಿದೆಯೇ; (ವಿವರ ನೀಡುವುದು)

(ಇ) ಈ ಶುಲ್ಕ ಕಡಿಮೆ ಮಾಡಿ ಅರ್ಜಿದಾರರ ಸಹಾಯಕ್ಕೆ ಬರಲು ಸರ್ಕಾರ ಮುಂದಾಗುವುದೇ; (ವಿವರ ನೀಡುವುದು)

(ಈ) ಸದರಿ ಹುದ್ದೆಗಳ ೩೭೧ (ಜೆ) ಅಡಿಯಲ್ಲಿ ಮೀಸಲಾತಿಯಲ್ಲಿ ವ್ಯತ್ಯಾಸವಾಗಿ ಕೈ–ಕ ಭಾಗದ ಪದವೀಧರರಿಗೆ ಅನ್ಯಾಯವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರಿಪಡಿಸಿ ೩೭೧ (ಜೆ) ಅಡಿಯಲ್ಲಿ ನ್ಯಾಯಯುತ ಮೀಸಲಾತಿ ಕಲ್ಪಿಸಿ ನೇಮಕಾತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು? (ವಿವರ ನೀಡುವುದು)

## ಕುಡಿಯುವ ನೀರಿನಲ್ಲಿ ರಾಸಾಯನಿಕಯುಕ್ತ (ಪ್ಲೋರೈಡ್) ಮೂಲದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೩೦ (೬೩೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಲವಾರು ಜಿಲ್ಲೆಯಲ್ಲಿ ಕುಡಿಯುವ ನೀರಿನಲ್ಲಿ ರಾಸಾಯನಿಕಯುಕ್ತ (ಪ್ಲೋರೈಡ್) ನೀರಿನ ಮೂಲಗಳ ಪ್ರಮಾಣ ಹೆಚ್ಚಾಗಿ ಕಲುಷಿತ ನೀರು ಜನರಿಗೆ ಸರಬರಾಜು ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ; ಇದಕ್ಕೆ ಕಾರಣವೇನು; (ಮಾಹಿತಿ ನೀಡುವುದು)

(ಆ) ಕಲುಷಿತ ನೀರಿನಿಂದ ಜನರ ಆರೋಗ್ಯದ ಮೇಲೆ ಪರಿಣಾಮ ಬೀರಿ ಹಲವಾರು ರೋಗಗಳಿಗೆ ಜನರು ಬಲಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಇದ್ದರೆ ಜನರಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮವೇನು; (ಮಾಹಿತಿ ನೀಡುವುದು)

(ಇ) ಸರ್ಕಾರವು ಜನರಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ? (ತಾಲ್ಲೂಕುವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

## ಕಲಬುರಗಿ ವಿಮಾನ ನಿಲ್ದಾಣದ ಉಳಿದಿರುವ ಕಾಮಗಾರಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೩೧ (೬೩೯) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ವಿಮಾನ ನಿಲ್ದಾಣದ ಬಾಕಿ ಉಳಿದಿರುವ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರವು ಲೋಕೋಪಯೋಗಿ ಇಲಾಖೆಗೆ ವಹಿಸಿರುವುದು ನಿಜವೇ; ಹಾಗಾದರೆ, ಈ ಕಾಮಗಾರಿ ಪೂರ್ಣಗೊಳಿಸಲು

ಬೇಕಾಗುವ ಒಟ್ಟು ಅನುದಾನ ಎಷ್ಟು; ಹೆಚ್ಚುವರಿ ಅನುದಾನ ಮಂಜೂರು ಮಾಡುವ ಅವಶ್ಯಕತೆ ಇದೆಯೇ; (ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗಾಗಿ ಅವಶ್ಯಕತೆ ಇದ್ದ ಅನುದಾನವು ಸರ್ಕಾರದಿಂದ ಭರಿಸಲಾಗಿದೆಯೇ; ಹಾಗಾದರೆ, ಯಾವ ಮೂಲದಿಂದ ಭರಿಸಲಾಗಿದೆ; (ಮಾಹಿತಿ ನೀಡುವುದು)

(ಇ) ಪ್ರಸ್ತುತ ಈ ಕಾಮಗಾರಿಯು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳುವುದು? (ಸಂಪೂರ್ಣ ಮಾಹಿತಿ ನೀಡುವುದು)

## ಪದವಿಪೂರ್ವ ಉಪನ್ಯಾಸಕರ ನೇಮಕಾತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೩೨ (೬೩೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಉಪನ್ಯಾಸಕರ ನೇಮಕಾತಿ ಅಧಿಸೂಚನೆ ಹೊರಡಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ಎಷ್ಟು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದೆ; (ಜಿಲ್ಲಾವಾರು, ವಿಷಯವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಂವಿದಾನದ ಕಲಂ ೩೭೧ (ಜೆ) ಅನ್ವಯ ಮೀಸಲಾತಿ ನಿಗದಿಪಡಿಸಿ ಅರ್ಜಿ ಅಹ್ವಾನಿಸಲಾಗಿದೆಯೇ; ಹಾಗಾದರೆ, ಹೈದರಾಬಾದ್–ಕರ್ನಾಟಕ ಭಾಗಕ್ಕೆ ಮೀಸಲಿಟ್ಟ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವಿಷಯವಾರು ಮಾಹಿತಿ ನೀಡುವುದು)

(ಇ) ಹೈದರಾಬಾದ್–ಕರ್ನಾಟಕ ಭಾಗಕ್ಕೆ ಹೆಚ್ಚುವರಿಯಾಗಿ ಪದವಿ ಪೂರ್ವ ಉಪನ್ಯಾಸಕರ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಮುಂದಾಗುವುದೇ?

## ಹೈದ್ರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಪದವಿಪೂರ್ವ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೩೩ (೬೩೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಶಾಲಾ-ಕಾಲೇಜುಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ೦೧-೦೫-೨೦೧೩ ರಿಂದ ೩೧-೦೧-೨೦೧೫ ರವರೆಗೆ ಈ ಉದ್ದೇಶಕ್ಕಾಗಿ ಮಂಜೂರು ಮಾಡಿದ ಬಿಡುಗಡೆ ಮಾಡಿದ ಹಾಗೂ ವೆಚ್ಚ ಮಾಡಿದ ಹಣವೆಷ್ಟು; (ವಿವರ ನೀಡುವುದು)

(ಇ) ಸಂವಿಧಾನದ ಕಲಂ ೩೭೧ (ಜೆ)ಗೆ ತಿದ್ದುಪಡಿಯ ನಂತರ ಇಲ್ಲಿಯವರೆಗೆ ಈ ಶಾಲಾ-ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಿಗೆ ಯಾವ್ಯಾವ ಯೋಜನೆಯಡಿ ಎಷ್ಟು ಹಣ ವೆಚ್ಚ ಮಾಡಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿರುವ ಭಾಷಾ ಅಲ್ಪ ಸಂಖ್ಯಾತ ಶಾಲೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೩೪ (೬೪೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಭಾಷಾ ಅಲ್ಪ ಸಂಖ್ಯಾತರ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳು ಎಷ್ಟು; (ವಿವರ ನೀಡುವುದು)

(ಆ) ಈ ಶಾಲೆಗಳ ಸಿಬ್ಬಂದಿ ನೇಮಕಾತಿಗೆ ರೋಸ್ಟರ್ ಪಾಲನೆ ಕುರಿತು ಇರುವ ನಿಯಮಾವಳಿಗಳು ಏನು;

(ಇ) ಭಾಷಾ ಅಲ್ಪ ಸಂಖ್ಯಾತರ ಪ್ರಾಥಮಿಕ, ಪ್ರೌಢ ಶಾಲೆಗಳಲ್ಲಿ ಇರಬೇಕಾದ ವಿದ್ಯಾರ್ಥಿಗಳ ಕನಿಷ್ಠ ಸಂಖ್ಯೆ ಎಷ್ಟು; ಈ ಶಾಲೆಗಳಿಗೆ ಒದಗಿಸಿರುವ ಸೌಲಭ್ಯಗಳನ್ನು ಅಲ್ಪ ಸಂಖ್ಯಾತರ ಇಲಾಖೆಯಿಂದ ಒದಗಿಸಲಾಗಿದೆಯೇ; ಒದಗಿಸಿದ್ದರೆ, ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಪದೋನ್ನತಿ ಹೊಂದಿರುವ ಶಿಕ್ಷಕರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೩೫ (೭೪೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕೋಡಿ, ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಪದೋನ್ನತಿ ಹೊಂದಿ ಈಗ ಪ್ರೌಢ ಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಯಾರು ಯಾರು ಯಾವ ಪ್ರೌಢ ಶಾಲೆಯಲ್ಲಿ ಯಾವ ವಿಷಯದ ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ; ಪ್ರತಿಯೊಬ್ಬರ ಪ್ರತಿ ಶಾಲಾವಾರು ವಿವರ ನೀಡುವುದು;

(ಆ) ಬಡ್ತಿ ಹೊಂದಿರುವ ಈ ಶಿಕ್ಷಕರಿಗೆ ವರ್ಗಾವಣೆ, ಸ್ವಯಂ ಚಾಲಿತ ಮುಂಬಡ್ತಿ, ೧೦, ೧೫, ೨೦ ವರ್ಷ ವೇತನ ಬಡ್ತಿ ಸಮಸ್ಯೆ, ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮವೇನು?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಶೇಕಡ ೦೩ರ ಅನುದಾನದಡಿಯಲ್ಲಿ ಅನುದಾನಕ್ಕೊಳಪಟ್ಟ ಶಿಕ್ಷಕರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೩೬ (೬೪೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಶೇ. ೦೩ರ ಅನುದಾನದಡಿಯಲ್ಲಿ ಅನುದಾನಕ್ಕೊಳಪಟ್ಟು ಕಾರ್ಯ ನಿರ್ವಹಿಸುತ್ತಿರುವ ಪದವಿ ಪೂರ್ವ ಕಾಲೇಜುಗಳು ಯಾವುವು; ಅವುಗಳಲ್ಲಿರುವ ಉಪನ್ಯಾಸಕರ ಹೆಸರು, ಬೋಧಿಸುತ್ತಿರುವ ವಿಷಯ, ಸೇವೆಗೆ ಸೇರಿದ ದಿನಾಂಕ, ಅನುದಾನಕ್ಕೆ ಒಳಪಟ್ಟ ವರ್ಷ ಹಾಗೂ ದಿನಾಂಕ ಇವುಗಳ ಸಂಪೂರ್ಣ ವಿವರ ನೀಡುವುದು?

## ಪದವಿ ಕಾಲೇಜುಗಳ/ಭೋದಕೇತರ ನಿಗದಿ ಪಡಿಸಿರುವ ಭೋದನಾ ಅವಧಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೩೭ (೬೫೦) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪದವಿ ಕಾಲೇಜುಗಳ ಭೋಧಕರಿಗೆ ನಿಗದಿ ಮಾಡಿರುವ ಭೋದನಾ ಅವಧಿಗಳು ಎಷ್ಟು; (ಅಸಿಸ್ಟಂಟ್ ಪ್ರೊಫೆಸರ್, ಅಸೋಸಿಯೇಟ್ ಪ್ರೋಫೆಸರ್, ಪ್ರೋಫೆಸರ್ ಇವರಿಗೆ ನೀಡಿರುವ ಕಾರ್ಯಭಾಗದ ಹಂಚಿಕೆಯ ಸಂಪೂರ್ಣ ವಿವರ ನೀಡುವುದು)

(ಆ) ಈ ಕಾರ್ಯಭಾರ ಹಂಚಿಕೆಯ ಕುರಿತು ಏನಾದರು ಬದಲಾವಣೆ ತರಲಾಗಿದೆಯೇ; ಅಥವಾ ತರುವ ಚಿಂತನೆ ಇದೆಯೇ; ಇದ್ದರೆ, ಯಾವ ರೀತಿಯ ಬದಲಾವಣೆ ತರಲಾಗುವುದು; ಇದಕ್ಕೆ ಕಾರಣಗಳೇನು?

## ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಿಕ್ಷಕರ, ಉಪನ್ಯಾಸಕರ ವೇತನ ತಾರತಮ್ಯ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –

೪೩೮ (೬೪೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಶಿಕ್ಷಕರ ವೇತನದಲ್ಲಿ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಹಿಂದೆ ನೀಡಿರುವ "ಕುಮಾರ್ ನಾಯಕ್" ಸಮಿತಿಯ ಶಿಫಾರಸ್ಸುಗಳೇನು; (ವಿವರ ನೀಡುವುದು)

(ಇ) ೬ನೇ ವೇತನ ಸಮಿತಿಯ ಶಿಫಾರಸ್ಸುಗಳೇನು; (ವಿವರ ನೀಡುವುದು)

(ಈ) "ಕುಮಾರ್ ನಾಯಕ್" ವರದಿ ಅನುಷ್ಠಾನಗೊಳಿಸಲು ಈಗ ತಗಲಬಹುದಾದ ವಾರ್ಷಿಕ ಅಂದಾಜು ವೆಚ್ಚ ಎಷ್ಟು;

(ಉ) ಸಮಿತಿಯ ವರದಿ ಬಂದು ಎಷ್ಟು ಸಮಯವಾಗಿದೆ;

(ಊ) ವೇತನ ತಾರತಮ್ಯ ಸರಿಪಡಿಸಲು ಸರ್ಕಾರದ ಕ್ರಮಗಳೇನು, ವರದಿಯ ಪ್ರತಿಯನ್ನು ಒದಗಿಸುವುದು?

## ಬೆಳಗಾವಿ ಜಿಲ್ಲೆಯ ಭಾಷಾ ಅಲ್ಪ ಸಂಖ್ಯಾತ ಶಾಲೆಗಳ ಕುರಿತು

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನ ಸಭೆಯಿಂದ ಚುನಾಯಿತರಾದವರು) –**

೪೩೯ (೬೫೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಭಾಷಾ ಅಲ್ಪ ಸಂಖ್ಯಾತರ ಪ್ರಾಥಮಿಕ ಹಾಗೂ ಪ್ರೌಢ ಅನುದಾನಿತ ಶಾಲೆಗಳು ಎಷ್ಟು; (ಪಟ್ಟಿ ನೀಡುವುದು)

(ಆ) ಈ ಶಾಲೆಗಳ ಸಿಬ್ಬಂದಿ ನೇಮಕಾತಿಗೆ ರೋಸ್ಟರ್ ಪಾಲನೆ ಕುರಿತು ಇರುವ ನಿಯಮಗಳೇನು;

(ಇ) ಭಾಷಾ ಅಲ್ಪಸಂಖ್ಯಾತರ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಇರಬೇಕಾಗಿದ್ದ ಕನಿಷ್ಠ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಈ ಶಾಲೆಗಳಿಗೆ ಒದಗಿಸಿರುವ ಸೌಲಭ್ಯಗಳನ್ನು ಅಲ್ಪ ಸಂಖ್ಯಾತರ ಇಲಾಖೆಯಿಂದ ಒದಗಿಸಲಾಗಿದೆಯೇ; ಒದಗಿಸಿದ್ದರೆ ಯಾವುವು;

(ಈ) ಮತೀಯ ಅಲ್ಪ ಸಂಖ್ಯಾತರ ವಿದ್ಯಾರ್ಥಿಗಳಿಗೆ ಒದಗಿಸಿರುವ ಎಲ್ಲಾ ಸೌಲಭ್ಯಗಳನ್ನು ಭಾಷಾ ಅಲ್ಪ ಸಂಖ್ಯಾತರ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆಯೇ;

(ಉ) ಭಾಷಾ ಅಲ್ಪ ಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಇಲಾಖೆಯಲ್ಲಿ ಕೊಡಮಾಡಲಾಗುತ್ತಿರುವ ವಿಶೇಷ ಸೌಲಭಗಳೇನು? (ವಿವರ ನೀಡುವುದು)

**೨೦೧೫–೧೬ನೇ ಸಾಲಿನ ಶಾಲಾ ಮಕ್ಕಳ ಶೂ ವಿತರಿಸುವ ಬಗ್ಗೆ**

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೪೪೦ (೬೬೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ೨೦೧೫–೧೬ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಶಾಲಾ ಮಕ್ಕಳಿಗೆ ಶೂ ಹಾಗೂ ಸಾಕ್ಸ್ ವಿತರಣೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ಕಾರದ ಗಮನಕ್ಕೆ ಬಂದಿದ್ದರೆ ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಶಾಲೆಯಲ್ಲಿ ಹೆಣ್ಣು ಮತ್ತು ಗಂಡು ಮಕ್ಕಳಿಗೆ ವಿತರಿಸಲಾಗಿದೆ;

(ಇ) ಈ ಕಾರ್ಯಕ್ರಮದಲ್ಲಿ ವಿಳಂಬವಾಗಿದೆಯೇ? (ವಿಳಂಬವಾಗಿದ್ದರೆ ಮಾಹಿತಿ ನೀಡುವುದು)

## ಪದವಿಪೂರ್ವ ಉಪನ್ಯಾಸಕರ ನೇಮಕಾತಿಯಲ್ಲಿ ಬಿ.ಇಡ್ ಮಾಡಿರುವ ಬಗ್ಗೆ

ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –

೪೪೧ (೬೬೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿಪೂರ್ವ ಉಪನ್ಯಾಸಕರ ನೇಮಕಾತಿಯಲ್ಲಿ ನೇಮಕವಾಗಿರುವ ಉಪನ್ಯಾಸಕರುಗಳು ಈಗಾಗಲೇ ಬಿ.ಇಡ್ ಮಾಡಿರುವ ವಿಷಯವಾರು ಸಂಖ್ಯೆಗಳೆಷ್ಟು; (ಮಾಹಿತಿ ನೀಡುವುದು)

(ಆ) ಪದವಿಪೂರ್ವ ಉಪನ್ಯಾಸಕರು ಬಿ.ಇಡ್ ಮಾಡಿಲ್ಲದೆ ಇರುವ ಉಪನ್ಯಾಸಕರುಗಳಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ B-Ed ನ್ನು ಕಡ್ಡಾಯಗೊಳಿಸಿರುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೪೪೨ (೬೫೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) M-Com ಮತ್ತು B-Com ಪದವೀದರರಿಗೆ ಬಿ.ಎಡ್‌ನ್ನು ವಿಧ್ಯಾಬ್ಯಾಸ ಮಾಡಲು ಯಾವ ವರ್ಷದಿಂದ ಅನುಮತಿ ನೀಡಲಾಯಿತು;

(ಆ) ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಾಣಿಜ್ಯ ವಿಭಾಗದಲ್ಲಿ ಒಟ್ಟು ಎಷ್ಟು ಹುದ್ದೆಗಳು ಖಾಲಿ ಇರುತ್ತವೆ ಹಾಗೂ ಈ ಖಾಲಿ ಇರುವ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಒಪ್ಪಿಗೆ ನೀಡಲಾಗಿದೆ;

(ಇ) ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರುಗಳ ಹುದ್ದೆಗೆ B-Edನ್ನು ಕಲಿತವರಿಗೆ ಮಾತ್ರ ಅರ್ಜಿಯನ್ನು ಸಲ್ಲಿಸಲು

ಅವಕಾಶವಿರುವುದರಿಂದ ಇನ್ನೂಳಿದ ಅನೇಕ ಪದವೀಧರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಾದರೆ, ಅಂತವರಿಗೆ ಯಾವ ರೀತಿಯ ಅನುಕೂಲತೆಯನ್ನು ಮಾಡಿಕೊಡಲಾಗುವುದು?

## ಕಾಲ್ಪನಿಕ ವೇತನದ ಕುರಿತಾಗಿ ನೀಡಲಾಗಿರುವ ವರದಿಯನ್ನು ಜಾರಿಗೆ ತರುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೪೪೩ (೬೫೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲ್ಪನಿಕ ವೇತನದ ಸಮಸ್ಯೆ ನಿವಾರಣೆಗಾಗಿ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸವರಾಜ್ ಹೊರಟ್ಟಿರವರ ನೇತೃತ್ವದಲ್ಲಿ ಯಾವಾಗ ಸಮಿತಿಯನ್ನು ರಚಿಸಲಾಯಿತು ಹಾಗೂ ಸಮಿತಿಯು ಯಾವಾಗ ವರದಿಯನ್ನು ಸಲ್ಲಿಸಿದೆ;

(ಆ) ಸದರಿ ಸಮಿತಿಯ ವರದಿಯು ಜಾರಿಯಾಗಬೇಕಾದರೆ ಎಷ್ಟು ಹಣ ಬೇಕಾಗುವುದು;

(ಇ) ಇದಕ್ಕಾಗಿ ಉನ್ನತ ಶಿಕ್ಷಣ ಸಚಿವರು ಸದನದಲ್ಲಿ ರೂ. ೩೦೦–೦೦ ಕೋಟಿ ಸರ್ಕಾರದಿಂದ ನೀಡುವುದಾಗಿ ಆಶ್ವಾಸನೆ ನೀಡಿದ್ದು ನಿಜವೇ;

(ಈ) ಹಾಗಿದ್ದರೆ, ಈ ಸಮಿತಿಯು ನೀಡಿರುವ ವರದಿಯನ್ನು ಯಾವಾಗ ಜಾರಿಗೆ ತರಲಾಗುವುದು?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೪೪೪ (೬೫೮). ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಎಷ್ಟು ದೈಹಿಕ ಶಿಕ್ಷಕರ ಹುದ್ದೆಗಳು ಇರುತ್ತವೆ; ಇದರಲ್ಲಿ ಎಷ್ಟು ಹುದ್ದೆಗಳು ಖಾಲಿಯಿರುತ್ತವೆ;

(ಆ) ಎಷ್ಟು ವಿದ್ಯಾರ್ಥಿಗಳಿಗೆ ಒಬ್ಬರು ದೈಹಿಕ ಶಿಕ್ಷಕರಿರಬೇಕೆಂಬ ನಿಯಮವಿದೆ;

(ಇ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಶಿಕ್ಷಕರ ವೇತನ ತಾರತಮ್ಯವನ್ನು ಸರಿಪಡಿಸುವ ಕುರಿತು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೪೪೫ (೬೫೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದಿನ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಕಾರ್ಯದರ್ಶಿಗಳಾದ ಶ್ರೀ ಕುಮಾರ್ ನಾಯಕರವರು ಶಿಕ್ಷಕರ ವೇತನ ತಾರತಮ್ಯದ ಬಗ್ಗೆ ವರದಿಯನ್ನು ಯಾವಾಗ ಸಲ್ಲಿಸಿರುವರು;

(ಆ) ವರದಿಯ ಪ್ರಕಾರ ಶಿಕ್ಷಕರ ವೇತನ ತಾರತಮ್ಯವನ್ನು ಸರಿಪಡಿಸಲು ಎಷ್ಟು ಹಣ ಬೇಕಾಗುವುದು;

(ಇ) ಹಾಗಾದರೆ, ಸದರಿ ವರದಿಯನ್ನು ಯಾವಾಗ ಜಾರಿಗೊಳಿಸಲಾಗುವುದು?

## ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿಯಿರುವ ಆಂಗ್ಲ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೪೪೬ (೬೫೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಪ್ರೌಢ ಶಾಲೆಗಳಿವೆ; ಈ ಶಾಲೆಗಳಿಗೆ ಮಂಜೂರಾದ ಆಂಗ್ಲ ಶಿಕ್ಷಕರ ಹುದ್ದೆಗಳೆಷ್ಟು;

(ಆ) ಅನೇಕ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಆಂಗ್ಲ ಶಿಕ್ಷಕರು ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅನೇಕ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಆಂಗ್ಲ ಶಿಕ್ಷಕರ ಹುದ್ದೆಗಳು ಮಂಜೂರಾಗದಿರುವುದು ಸರ್ಕಾರದ ಗಮನದಲ್ಲಿದೆಯೇ;

(ಈ) ಹಾಗಾದರೆ, ಈ ಶಾಲೆಗಳಲ್ಲಿ ಆಂಗ್ಲ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೆ?

## ವಿಕಲಚೇತನ ಮತ್ತು ಹಿರಿಯ ನಾಗರಿಕರ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೪೪೭ (೬೬೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಗೆ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣಕ್ಕೆ ಈ ಹಿಂದಿನ ಸರ್ಕಾರ ಕೈಗೊಂಡಿರುವ ಯೋಜನೆಗಳಾವುವು; ನೀಡಿರುವ ಸೌಲಭ್ಯಗಳೇನು;

(ಆ) ಹಾಲಿ ಸರ್ಕಾರ ಕೈಗೊಂಡಿರುವ ಹೊಸ ಯೋಜನೆಗಳು ಯಾವುವು; ನೀಡುತ್ತಿರುವ ಹೊಸ ಸೌಲಭ್ಯಗಳೇನು; ಇದರಿಂದ ಎಷ್ಟು ಜನರಿಗೆ ಪ್ರಯೋಜನವಾಗಿದೆ; ಎಷ್ಟು ಜನರು ಪ್ರಯೋಜನ ಪಡೆಯುತ್ತಿದ್ದಾರೆ? (ವಿವರ ಒದಗಿಸುವುದು)

## ಪ್ರಾಥಮಿಕ ಕನ್ನಡ ಮಾಧ್ಯಮಗಳಲ್ಲಿ ಮತ್ತು ಆಂಗ್ಲ ಮಾಧ್ಯಮಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೪೮ (೬೭೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಧ್ಯಾಹ್ನದ ಬಿಸಿ ಊಟ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಗಳನ್ನು ನಮೂದಿಸಲು ಬಳಸುತ್ತಿರುವ ನಮೂನೆಯಲ್ಲಿ ಹಿಂದು, ಮುಸ್ಲಿಂ, ಕ್ರೈಸ್ತ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳ ವಿದ್ಯಾರ್ಥಿಗಳ ಸಂಖ್ಯೆಯನ್ನು ನಮೂದಿಸಲು ತಿಳಿಸಲಾಗಿರುವುದು ಸರಿಯೇ; ಇದರ ಉದ್ದೇಶವೇನು; (ವಿವರ ನೀಡುವುದು)

(ಆ) ಈ ನಮೂನೆಯನ್ನು ಬದಲಾಯಿಸಿಬೇಕೆಂದು ಇಲಾಖೆಯ ಗಮನಕ್ಕೆ ತಂದಿದ್ದರೂ, ಬದಲಾಯಿಸದೇ ಇರಲು ಕಾರಣಗಳೇನು;

(ಇ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಕನ್ನಡ ಮಾಧ್ಯಮಗಳಲ್ಲಿ ಮತ್ತು ಆಂಗ್ಲ ಮಾಧ್ಯಮಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಈ) ರಾಜ್ಯದಲ್ಲಿರುವ ಪ್ರಾಥಮಿಕ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; ಹಾಗೂ ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಮಂಗಳೂರಿನಲ್ಲಿ ತುಳು ಸಾಹಿತ್ಯ ಅಕಾಡೆಮಿ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೪೯ (೬೭೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರಿನಲ್ಲಿ ತುಳು ಸಾಹಿತ್ಯ ಅಕಾಡೆಮಿಗೆ ನಿರ್ಮಾಣ ಹಂತದಲ್ಲಿರುವ ತುಳು ಭವನ ಕಾಮಗಾರಿ ಯಾವ ಹಂತದಲ್ಲಿದೆ; ಯಾವಾಗ ಪೂರ್ಣಗೊಳ್ಳುವುದು; ಮತ್ತು ಯಾವಾಗ ತುಳು ಅಕಾಡೆಮಿಗೆ ಬಿಟ್ಟು ಕೊಡಲಾಗುವುದು;

(ಆ) ತುಳು ಅಕಾಡೆಮಿ ಕಟ್ಟಡಕ್ಕೆ ಖರ್ಚು ಮಾಡಿದ ವೆಚ್ಚ ಎಷ್ಟು; ಕಾಮಗಾರಿ ಪೂರ್ಣಗೊಳಿಸಲು ಬೇಕಾದ ಮೊತ್ತ ಎಷ್ಟು; ಈ ವೆಚ್ಚವನ್ನು ಭರಿಸಲು ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು;

(ಇ) ತುಳು ಅಕಾಡೆಮಿಯಿಂದ ೨೦೧೪–೧೫ರಲ್ಲಿ ಕೈಗೊಂಡ ಕಾರ್ಯಕ್ರಮಗಳೇನು; ಮತ್ತು ಖರ್ಚು ಮಾಡಿದ ಅನುದಾನ ವೆಚ್ಚ ಎಷ್ಟು;

(ಈ) ತುಳು ಭಾಷೆಯ ಡಿಪ್ಲೋಮೋ ಕೋರ್ಸು ಯಾವಾಗ ಪ್ರಾರಂಭಗೊಳ್ಳುವುದು? (ಈ ಬಗ್ಗೆ ಕೈಗೊಂಡ ಕ್ರಮಗಳ ಮಾಹಿತಿ ನೀಡುವುದು)

## ಮಂಗಳೂರು ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೫೦ (೬೭೧) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು; ರನ್ ವೇ ವಿಸ್ತರಣೆ ವಿಳಂಬಗೊಳ್ಳುತ್ತಿರುವುದರಿಂದ ನೆರೆ ರಾಜ್ಯದಲ್ಲಿ ಅಭಿವೃದ್ಧಿ ಹೊಂದುತ್ತಿರುವ ವಿಮಾನ ನಿಲ್ದಾಣಗಳಿಂದಾಗಿ ಮಂಗಳೂರು ವಿಮಾನ ನಿಲ್ದಾಣದಿಂದ ಪ್ರಯಾಣಿಕರ ಸಂಖ್ಯೆ ಕಡಿಮೆಯಾಗುತ್ತಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಮಂಗಳೂರು ವಿಮಾನ ನಿಲ್ದಾಣದಲ್ಲಿ ಪ್ರಸ್ತುತ ೨೦೧೩–೧೪, ೨೦೧೪–೧೫ರಲ್ಲಿ ಪ್ರಯಾಣಿಸಿದ ಮತ್ತು ಆಗಮಿಸಿದ ಪ್ರಯಾಣಿಕರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ವಿಮಾನ ನಿಲ್ದಾಣದ ನಿರ್ಗಮನ ರಸ್ತೆಯ ಕಾಮಗಾರಿ ಎಂದು ಪೂರ್ಣಗೊಳ್ಳುವುದು; ವಿಳಂಬಗೊಳ್ಳಲು ಕಾರಣಗಳೇನು?

## ಕರಾವಳಿ ಕರ್ನಾಟಕದಲ್ಲಿ CRZ ನಿಯಮಗಳನ್ನು ಸಡಿಲುಗೊಳಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೪೫೧ (೬೬೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ರಲ್ಲಿ ಕರಾವಳಿ ಜಿಲ್ಲೆಗಳ ಬೀಚ್ ಅಭಿವೃದ್ಧಿಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು; ಯಾವ ಯಾವ ಬೀಚ್‌ಗಳಿಗೆ ಯಾವ ಯಾವ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಲಾಗಿದೆ;

(ಆ) ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಕರಾವಳಿ ಕರ್ನಾಟಕದಲ್ಲಿ ಸಿ.ಆರ್.ಝಡ್. (CRZ) ನಿಯಮಗಳನ್ನು ಸಡಿಲಗೊಳಿಸಲು ಇಲಾಖೆ ಕೇಂದ್ರ ಸರ್ಕಾರದ ಮುಂದೆ ಪ್ರಸ್ತಾವನೆ ಮಂಡಿಸಿದೆಯೇ;

(ಇ) ಸಿ.ಆರ್.ಝಡ್. ನಿಯಮದಿಂದ ಕರಾವಳಿ ಭಾಗಗಳ ಬೀಚ್‌ಗಳನ್ನು ಅಭಿವೃದ್ಧಿಪಡಿಸಲು ಸಾಧ್ಯವಾಗುತ್ತಿಲ್ಲವೆಂಬ ದೂರುಗಳಿದ್ದು, ಇಲಾಖೆ ಕೈಗೊಂಡ ಕ್ರಮಗಳೇನು; ಕೇರಳ ರಾಜ್ಯದಲ್ಲಿ ಸಿ.ಆರ್.ಝಡ್. ನಿಯಮ ಸಡಿಲಿಸಲಾಗಿದ್ದು ಕರ್ನಾಟಕದಲ್ಲಿ ಸಡಿಲಿಸದೇ ಇರಲು ಕಾರಣಗಳೇನು;

(ಈ) ನೂತನ ಪ್ರವಾಸೋದ್ಯಮ ನೀತಿಯನ್ನು ಜಾರಿಗೊಳಿಸಲಾಗಿದೆಯೇ; ಗೈಡ್ಸ್‌ಗಳನ್ನು ನೇಮಕ ಮಾಡಲು ಮತ್ತು ಅಮಾಯಕ ಪ್ರವಾಸಿಗರನ್ನು ವಂಚಿಸುತ್ತಿರುವವರ ವಿರುದ್ಧ ಇಲಾಖೆ ಕೈಗೊಂಡ ಕ್ರಮಗಳೇನು;

(ಉ) ಯಾವ ಯಾವ ಮೂಲಗಳಿಂದ ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯ ಸರ್ಕಾರಕ್ಕೆ ಬರುವ ಆದಾಯ ಎಷ್ಟು; (ವಿವರ ನೀಡುವುದು)

## ಬೆಂಗಳೂರು ವಿಶ್ವ ವಿದ್ಯಾಲಯದ ವಿಭಜನೆಯ ಕುರಿತು

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) –**

೪೫೨ (೭೦೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾನಿಲಯದ ವಿಶಾಲ ವ್ಯಾಪ್ತಿ ಮತ್ತು ಸಂಯೋಜಿತ ಕಾಲೇಜುಗಳ ವಿಫುಲ ಸಂಖ್ಯೆಯನ್ನು ಪರಿಗಣಿಸಿ ವಿ.ವಿ.ಯನ್ನು ೨ ಅಥವಾ ೩ ವಿಶ್ವವಿದ್ಯಾನಿಲಯಗಳಾಗಿ ವಿಭಜಿಸಬೇಕೆಂಬ ನಿರ್ಣಯ ಸರ್ಕಾರ ಕೈಗೊಂಡಿದೆಯೇ;

(ಆ) ಹೊಸ ವಿ.ವಿ. ಗಳನ್ನು ಸ್ಥಾಪಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದು; (ಈ ವಿ.ವಿ.ಗಳ ಕಾರ್ಯವ್ಯಾಪ್ತಿ, ಕೇಂದ್ರ, ಬೋಧಕ, ಭೋದಕೇತರ ಹಂಚಿಕೆ ಮತ್ತು ಮೂಲ ಸೌಕರ್ಯಗಳ ಹಂಚಿಕೆಯ ವಿವರ ನೀಡುವುದು)

(ಇ) ಪ್ರತಿ ವಿ.ವಿ. ಗಳಿಗೆ ಒದಗಿಸಲಾಗುವ ಅನುದಾನ, ಹೊಸ ಭೋದಕ, ಭೋದಕೇತರ ಹುದ್ದೆಗಳ ಸೃಷ್ಟಿ ಮತ್ತು ನೇಮಕಾತಿ ಪ್ರತಿ ವಿ.ವಿ. ಯಲ್ಲಿ ಆರಂಭಿಸಲಾಗುವ ವಿಷಯ, ವಿಭಾಗಳ ವಿವರ ನೀಡುವುದು?

## ಪ್ರಾಥಮಿಕ ಶಿಕ್ಷಣದಲ್ಲಿ ಯೋಗ ಅಳವಡಿಸುವ ಕುರಿತು

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) –**

೪೫೩ (೬೭೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಮಾಧ್ಯಮಿಕ ಶಿಕ್ಷಣದಲ್ಲಿ ಯೋಗ ಅಳವಡಿಸುವುದಾಗಿ ಮಾನ್ಯ ಮುಖ್ಯಮಂತ್ರಿಗಳು ಹೇಳಿಕೆ ನೀಡಿದ್ದು ಈ ಯೋಜನೆಯನ್ನು ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದು;

(ಆ) ಇದಕ್ಕೆ ಸಂಬಂಧಿಸಿದಂತೆ ಸರ್ಕಾರದ ಸಿದ್ಧತೆಗಳೇನು?

## ವಿದ್ಯಾರ್ಥಿನಿಯರ ಮೇಲಿನ ದೌರ್ಜನ್ಯ

**ಪ್ರೊ. ಪಿ.ವಿ. ಕೃಷ್ಣಭಟ್ಟ** (ನಾಮನಿರ್ದೇಶನ ಹೊಂದಿದವರು) –

೪೫೪ (೬೭೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ಶಾಲೆ ಹಾಗೂ ಕಾಲೇಜುಗಳಲ್ಲಿ ಮಕ್ಕಳು/ ವಿದ್ಯಾರ್ಥಿನಿಯರ ಮೇಲೆ ಲೈಂಗಿಕ ದೌರ್ಜನ್ಯದ ಪ್ರಕರಣಗಳು ಹೆಚ್ಚುತ್ತಿವೆ ಎನ್ನುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; (ಕಳೆದ ಮೂರು ವರ್ಷದಲ್ಲಿ ಶಾಲೆ ಹಾಗೂ ಕಾಲೇಜುಗಳೊಳಗೆ ಘಟಿಸಿರುವ ಘಟನೆಗಳ ವಿವರವನ್ನು ಪ್ರತ್ಯೇಕವಾಗಿ ನೀಡುವುದು)

(ಆ) ಇಂತಹ ಘಟನೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಎಷ್ಟು ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಲಾಗಿದೆ;

(ಈ) ಕಾಲೇಜು ಹಾಗೂ ವಿ.ವಿ.ಗಳಲ್ಲಿ ಲೈಂಗಿಕ ಅಪರಾಧಗಳನ್ನು ಕುರಿತು ತನಿಖೆ ಮಾಡಿ, ಶಿಕ್ಷೆ ವಿಧಿಸಲು ಪ್ರತ್ಯೇಕ ನ್ಯಾಯಾಲಯ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

## ಸಿಂಡಿಕೇಟ್ ಸದಸ್ಯರ ನೇಮಕದ ಮಾನದಂಡಗಳ ಕುರಿತು

**ಪ್ರೊ. ಪಿ.ವಿ. ಕೃಷ್ಣಭಟ್ಟ** (ನಾಮನಿರ್ದೇಶನ ಹೊಂದಿದವರು) –

೪೫೫ (೬೭೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಶ್ವ ವಿದ್ಯಾನಿಲಯಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡಲು ಇರುವ ಮಾನದಂಡಗಳೇನು;

(ಆ) ಸಿಂಡಿಕೇಟ್ ಸದಸ್ಯರ ನೇಮಕಾತಿ ಪ್ರಕ್ರಿಯೆ ಹೇಗೆ ನಡೆಯುತ್ತದೆ? (ಪ್ರಸ್ತುತ ರಾಜ್ಯದ ವಿವಿದ ವಿಶ್ವವಿದ್ಯಾನಿಲಯಗಳಲ್ಲಿರುವ ಸಿಂಡಿಕೇಟ್ ಸದಸ್ಯರ ಹೆಸರು ಮತ್ತು ಅವರ ಸ್ವ ವಿವರ ನೀಡುವುದು)

73

## ಖಾಸಗಿ ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳ ಕಾಲ್ಪನಿಕ ವೇತನ ಕುರಿತು

ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) –

೪೫೬ (೬೭೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ನಿಗದಿಪಡಿಸಲು ರಚಿಸಲಾದ ವಿಧಾನ ಪರಿಷತ್ ಸದಸ್ಯರುಗಳ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ;

(ಆ) ಪರಿಶೀಲನಾ ಸಮಿತಿಯು ವರದಿ ಸಲ್ಲಿಸಿದ್ದಲ್ಲಿ ಯಾವಾಗ ಸಲ್ಲಿಸಿದೆ; ಈ ವರದಿಯನ್ನು ಸರ್ಕಾರ ಪರಿಶೀಲಿಸಿ ಏನು ಕ್ರಮ ಕೈಗೊಂಡಿದೆ;

(ಇ) ಪರಿಶೀಲನಾ ಸಮಿತಿಯ ವರದಿ ಅನ್ವಯ/ಅನುದಾನ ರಹಿತ ಅವಧಿಯನ್ನು ಪರಿಗಣಿಸಿ ವಾರ್ಷಿಕ ಬಡ್ತಿ, ಪದೋನ್ನತಿ, ನಿವೃತ್ತಿ ಸೌಲಭ್ಯ ನೀಡಿದಲ್ಲಿ ಎಷ್ಟು ಆರ್ಥಿಕ ಹೊರೆಯಾಗುವುದೆಂದು ತಿಳಿಸಿದ್ದಾರೆ; ಈ ವರದಿಯಲ್ಲಿ ನಮೂದಿಸಿರುವ ಆರ್ಥಿಕ ಭಾರದ ಅಂಕಿ ಅಂಶವನ್ನು ಸರ್ಕಾರ ಒಪ್ಪಿದೆಯೇ;

(ಈ) ಕಾಲ್ಪನಿಕ ವೇತನ ಸೌಲಭ್ಯ ನೀಡುವ ಕುರಿತು ಸರ್ಕಾರ ಈಗಾಗಲೇ ಎಷ್ಟು ಹಣ ನೀಡುವುದೆಂದು ಭರವಸೆ ನೀಡಿದೆ; ಒಟ್ಟಾರೆ ಕಾಲ್ಪನಿಕ ವೇತನ ಸಮಸ್ಯೆಯನ್ನು ಸಂಪೂರ್ಣವಾಗಿ ಬಗೆ ಹರಿಸುವಲ್ಲಿ ಸರ್ಕಾರದ ಅಭಿಪ್ರಾಯ ಸ್ಪಷ್ಟಪಡಿಸುವುದು?

## ರಾಯಚೂರು ನಗರದಲ್ಲಿ (I.I.T) ಸ್ಥಾಪಿಸುವ ಕುರಿತು

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –

೪೫೭ (೬೮೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ (I.I.T) ಸ್ಥಾಪಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆಯೇ;

(ಆ) ಹಾಗಾದರೆ, ರಾಜ್ಯದಿಂದ ಯಾವ ಯಾವ ನಗರದಲ್ಲಿ (I.I.T) ಸ್ಥಾಪಿಸಲು ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಶಿಫಾರಸ್ಸು ಮಾಡಲಾಗಿದೆ;

(ಇ) ೨೦೧೨, ಅಕ್ಟೋಬರ್‌ನಲ್ಲಿ ನಡೆದ ಕಲಬುರಗಿ ಸಚಿವ ಸಂಪುಟ ಸಭೆಯಲ್ಲಿ ರಾಯಚೂರು ನರಗದಲ್ಲಿ (I.I.T) ಸ್ಥಾಪಿಸಲು ತೆಗೆದುಕೊಂಡ ನಿರ್ಣಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಡಾ|| ಡಿ.ಎಂ. ನಂಜುಂಡಪ್ಪ ವರದಿಯಲ್ಲಿ ರಾಯಚೂರಿನಲ್ಲಿ (I.I.T) ಸ್ಥಾಪಿಸಲು ಸೂಚಿಸಿರುವ ನಿರ್ಣಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ರಾಯಚೂರು ನಗರದಲ್ಲಿ (I.I.T) ಸ್ಥಾಪಿಸಲು ಬೇಕಾಗಿರುವ ಮೂಲಭೂತ ಸೌಲಭ್ಯಗಳಾದ ಸೂಕ್ತವಾದ ಸ್ಥಳ ಹಾಗೂ NH-167 ಯಿಂದ ಹೈದ್ರಾಬಾದ್ ಅಂತರಾಷ್ಟ್ರೀಯ ಏರ್‌ಪೋರ್ಟ್ ಮತ್ತು ರೈಲು ಸಂಪರ್ಕ, ದೆಹಲಿ, ಬಾಂಬೆ, ಚೆನ್ನೈ ಮತ್ತು ಬೆಂಗಳೂರು ನಗರಗಳಿಗೆ ಸಂಪರ್ಕ ಇರುವುದು ಮತ್ತು ನದಿಗಳಾದ ಕೃಷ್ಣ ಮತ್ತು ತುಂಗಭದ್ರ ನದಿಗಳು ರಾಯಚೂರು ಜಿಲ್ಲೆಯಲ್ಲಿ ಹರಿಯುತ್ತಿರುವ ವಿಷಯ ಸರ್ಕಾರದ ಗಮನದಲ್ಲಿದೆಯೇ?

## ರಾಯಚೂರಿನಲ್ಲಿ ವಿಮಾನ ನಿಲ್ದಾಣ ಸ್ಥಾಪಿಸುವ ಕುರಿತು

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –

೪೫೮ (೬೮೨) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿ ವಿಮಾನ ನಿಲ್ದಾಣ (Airport) ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ;

(ಆ) ಪರಿಶೀಲನೆಯಲ್ಲಿ ಇದ್ದರೆ ಸರ್ಕಾರ ತೆಗೆದುಕೊಂಡ ಕ್ರಮವೇನು?

## ೨೦೧೩ ರಲ್ಲಿ ಪತ್ರಿಕಾ ಜಾಹೀರಾತು ನೀತಿ ಜಾರಿಗೆ ತಂದಿದ್ದು, ಆ ನೀತಿ ಅನುಷ್ಠಾನಗೊಳಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೫೯ (೬೮೩) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಂದು ಪತ್ರಿಕಾ ಜಾಹೀರಾತು ನೀತಿ ಜಾರಿಗೆ ತಂದಿದ್ದು ಅನುಷ್ಠಾನಗೊಳಿಸಲಾಗಿದೆಯೇ ;

(ಆ) ಜಾಹೀರಾತು ನೀತಿಯಲ್ಲಿರುವ ಅಂಶದಂತೆ ಸರ್ಕಾರದ ಎಲ್ಲಾ ಜಾಹೀರಾತುಗಳು ವಾರ್ತಾ ಇಲಾಖೆ, ಮೂಲಕವೇ ನೀಡಬೇಕಾಗಿದ್ದು, ಇತ್ತೀಚೆಗೆ ಈ ನೀತಿಗೆ ಬದಲಾವಣೆ ತರಲು ಕಾರಣವೇನು ;

(ಇ) ಜಾಹೀರಾತು ನೀತಿ ಬದಲಾವಣೆ ಮಾಡುವುದರಿಂದ ಸಣ್ಣ ಪತ್ರಿಕೆಗಳಿಗೆ ಆಗುವ ತೊಂದರೆ ಸರ್ಕಾರದ ಗಮನದಲ್ಲಿದೆಯೇ ;

(ಈ) ಪತ್ರಕರ್ತರ ಆರೋಗ್ಯ ವಿಮಾ ಯೋಜನೆ ರಾಜ್ಯದಲ್ಲಿ ಜಾರಿಗೆ ತರಲಾಗಿದೆಯೇ ;

(ಉ) ಹೈದ್ರಾಬಾದ್–ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ಇರುವ ಉಪ–ನಿರ್ದೇಶಕರು, ಹಿರಿಯ ಸಹಾಯಕ ನಿರ್ದೇಶಕರು ಮತ್ತು ಸಹಾಯಕ ನಿರ್ದೇಶಕರುಗಳ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ?

## ರಾಯಚೂರು ಜಿಲ್ಲೆಯ ಪೂತನ್ಹಾಳ ಮತ್ತು ಬಲ್ಲಟಗಿ ಗ್ರಾಮಗಳಲ್ಲಿ ಪಿ.ಯು. ಕಾಲೇಜ್ ಪ್ರಾರಂಭಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೬೦ (೬೮೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ರಾಯಚೂರ ಜಿಲ್ಲೆಯ ಪೂತನ್ಹಾಳ ಮತ್ತು ಬಲ್ಲಟಗಿ ಗ್ರಾಮಗಳಲ್ಲಿ ಪದವಿ ಪೂರ್ವ ಕಾಲೇಜುಗಳ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ ;

(ಆ) ರಾಯಚೂರು ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕೊರತೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೪೬೧ (೬೯೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪುನರ್ ವಿನ್ಯಾಸಗೊಳಿಸಲಾಗಿರುವ (Restructure ICDS) ಅಂಗನವಾಡಿ ವ್ಯವಸ್ಥೆಯಂತೆ, ಮಕ್ಕಳಿಗೆ ನೀಡುವ ಸೌಲಭ್ಯಗಳಲ್ಲಿ ಎಂತಹ ಬದಲಾವಣೆಯನ್ನು ಜಾರಿಗೆ ತರಲಾಗಿದೆ ;

(ಆ) ರಾಜ್ಯದಲ್ಲಿ ಮತ್ತು ತಾಲ್ಲೂಕು/ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಅಂಗನವಾಡಿ ಕೇಂದ್ರಗಳಿಗೆ ಹಾಜರಾಗುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ;

(ಇ) ಅಂಗನವಾಡಿಗಳಿಗೆ ಕೇಂದ್ರ ಸರ್ಕಾರದಿಂದ ಸಿಗುತ್ತಿದ್ದ ಅನುದಾನದಲ್ಲಿ ಆದ ಬದಲಾವಣೆಯಿಂದ ರಾಜ್ಯದ ಕಾರ್ಯಕ್ರಮದ ಮೇಲೆ ಎಂತಹ ಪ್ರತಿಕೂಲ ಪರಿಣಾಮಗಳು ಆಗಿವೆ ಮತ್ತು ಅದನ್ನು ನಿವಾರಿಸಿಕೊಳ್ಳಲು ಸರ್ಕಾರ ಮಾಡಿರುವ ಪ್ರಯತ್ನಗಳೇನು ?

## ಮಕ್ಕಳ ಕ್ರಿಯಾ ಯೋಜನೆಯ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೨ (೬೮೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ೨೦೧೦ರ ನಂತರ ಕರ್ನಾಟಕ ರಾಜ್ಯ ಮಕ್ಕಳ ಕ್ರಿಯಾ ಯೋಜನೆಯನ್ನು ನಿರ್ಮಿಸಿದೆಯೇ ;

(ಆ) ಕಳೆದ ಸಾಲಿನಲ್ಲಿ ನಿರ್ಮಿಸಲಾಗದ (೨೦೦೩–೧೦) ಕರ್ನಾಟಕ ರಾಜ್ಯ ಮಕ್ಕಳ ಕ್ರಿಯಾ ಯೋಜನೆ ಕುರಿತು ಸಮಗ್ರವಾದ ವಿಶ್ಲೇಷಣೆ ಮತ್ತು ಮೌಲ್ಯಮಾಪನ ನಡೆಸಲಾಗಿದೆಯೇ ;

(ಇ) ರಾಷ್ಟ್ರೀಯ ಮಕ್ಕಳ ಕ್ರಿಯಾ ಯೋಜನೆಯ ಯಾವ ಯಾವ ಅಂಶಗಳನ್ನು ರಾಜ್ಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗಿದೆ ;

(ಈ) ಜಿಲ್ಲಾ ಮಟ್ಟದಲ್ಲಿ ಮಕ್ಕಳ ಕ್ರಿಯಾ ಯೋಜನೆಯನ್ನು ನಿರ್ಮಿಸಿ ಅದನ್ನು ಜಾರಿಗೆ ತರುವ ದಿಶೆಯಲ್ಲಿ ಏನು ಪ್ರಯತ್ನಗಳು ನಡೆದಿವೆ ?

## ರಾಜ್ಯದಲ್ಲಿ ಮಕ್ಕಳ ಮೇಲೆ ಆಗುತ್ತಿರುವ ಲೈಂಗಿಕ ದೌರ್ಜನ್ಯದ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೩ (೬೯೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದವರ ವಿರುದ್ಧ ಪಾಕ್ಸೋ ಕಾಯಿದೆಯಡಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿಶೇಷ ನ್ಯಾಯಾಲಯಗಳಲ್ಲಿ ದಾಖಲಾದ ಎಷ್ಟು ಪ್ರಕರಣಗಳಲ್ಲಿ ಆಪಾದಿತರ ಮೇಲೆ ಆರೋಪ ಪಟ್ಟಿ ಸಲ್ಲಿಸಲಾಗಿದೆ ;

(ಇ) ಈವರೆಗೂ ದಾಖಲಾದ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳ ತೀರ್ಪು ನೀಡಲಾಗಿದೆ ಹಾಗೂ ಆರೋಪಿಗಳಿಗೆ ಶಿಕ್ಷೆಯಾಗಿರುವ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಾಯಿದೆಯ ಸರಿಯಾದ ಪ್ರಚಾರ ನೀಡಲಾಗುತ್ತಿದೆಯೇ ; (ಹೌದಾದರೆ, ವಿವರ ನೀಡುವುದು)

(ಉ) ದೌರ್ಜನ್ಯಕ್ಕೊಳಗಾದ/ಅತ್ಯಾಚಾರಕ್ಕೊಳಗಾದ ಮಕ್ಕಳ ಪುನರ್ವಸತಿ ಮತ್ತು ಮುಂದಿನ ಭವಿಷ್ಯವೇನು ;

(ಊ) ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಮಾಡಿದ ಅಪರಾಧಿಗಳ ಪಟ್ಟಿಯನ್ನು ಸಿದ್ಧಪಡಿಸಿ, ಸರ್ಕಾರ ಅದಕ್ಕೆ ಪ್ರಚಾರ ನೀಡುವ ಕುರಿತು ಚಿಂತಿಸುತ್ತಿದೆಯೇ ?

## ಕಾನೂನು ಬಾಹಿರವಾಗಿದ್ದರೂ ಶಿಶು ಭ್ರೂಣ ಹತ್ಯೆ ನಡೆಸುತ್ತಿರುವರ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೪೬೪ (೬೮೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಶು ಭ್ರೂಣ ಹತ್ಯೆ ಮತ್ತು ಭ್ರೂಣ ಪತ್ತೆ ಮಾಡುವುದು ಕಾನೂನು ಬಾಹಿರವಾಗಿದ್ದರೂ, ನಿರಂತರವಾಗಿ ನಡೆಯುತ್ತಲೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಇತ್ತೀಚಿನ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಶಿಶು ಭ್ರೂಣ ಪತ್ತೆ ಮತ್ತು ಭ್ರೂಣ ಹತ್ಯೆಗೆ ಸಹಕರಿಸಿದ ಎಷ್ಟು ವೈದ್ಯರು ಮತ್ತು ಅವರ ಆಸ್ಪತ್ರೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಉ) ಶಿಶು ಭ್ರೂಣ ಪತ್ತೆ/ಹತ್ಯೆಯ ಕಡ್ಡಾಯ ನಿಷೇಧ ಹಾಗೂ ಅನುಷ್ಠಾನದ ಕುರಿತು ಚಿಂತಿಸಲಾಗಿದೆಯೇ ;

(ಊ) ಶಿಶು ಭ್ರೂಣ ಪತ್ತೆ ಮತ್ತು ಭ್ರೂಣ ಹತ್ಯೆ ತಡೆಗೆ ಸರ್ಕಾರದ ವತಿಯಿಂದ ಪ್ರಚಾರ/ಅರಿವು ನೀಡಲಾಗುತ್ತಿದೆಯೇ ?

## ಶಾಲೆಗಳಿಂದ ಹೊರಗೆ ಉಳಿದಿರುವ ಹೆಣ್ಣು ಮಕ್ಕಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೫ (೬೯೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಿಂದುಳಿದಿರುವ ತಾಲ್ಲೂಕುಗಳಲ್ಲಿ ಹೆಣ್ಣು ಮಕ್ಕಳು ಶಾಲೆಯಿಂದ ಅದರಲ್ಲೂ ಪ್ರೌಢ ಶಾಲೆಗಳಿಂದ ಹೊರಗುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಶಾಲೆಯಿಂದ ಹೊರಗುಳಿದ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು ; (Age wise/Class wise)

(ಇ) ಇಂತಹ ತಾಲ್ಲೂಕುಗಳಲ್ಲಿ ಯಾವ ಕಾರಣಕ್ಕೆ ಪ್ರೌಢ ಶಾಲಾ ವಯಸ್ಸಿನ ಹೆಣ್ಣು ಮಕ್ಕಳು ಶಾಲೆಗಳಿಂದ ಹೊರಗಿದ್ದಾರೆ ಎಂದು ಸರ್ಕಾರ ವಿಶ್ಲೇಷಣೆ ನಡೆಸಿದೆಯೇ ; (ವಿವರ ನೀಡುವುದು)

(ಈ) ಈ ಮಕ್ಕಳ ಶಿಕ್ಷಣ ಮುಂದುವರೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಪಂಚಾಯಿತಿ ಮಟ್ಟದಲ್ಲಿ ಪ್ರೌಢ ಶಾಲೆಗಳನ್ನು ನಿರ್ಮಿಸುವ ಯೋಜನೆ ಸರ್ಕಾರಕ್ಕೆ ಇದೆಯೇ ;

(ಊ) ಇದ್ದರೆ, ಯಾವ ವರ್ಷದಿಂದ ಪ್ರಾರಂಭಿಸಲಾಗುವುದು ?

## ರಾಯಭಾಗ ತಾಲ್ಲೂಕಿನಲ್ಲಿ ಅಶುದ್ಧ ನೀರನ್ನು ಬಳಸುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೬ (೭೯೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸೌಲಭ್ಯವಿದ್ದರೂ ಕೂಡಾ ಅಶುದ್ಧ ನೀರು ಕುಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮಗಳಲ್ಲಿ ಜಲ ಶುದ್ಧೀಕರಣ ಘಟಕಗಳು ಇದ್ದರೂ ಕೂಡ ಸಾರ್ವಜನಿಕರಿಗೆ ಶುದ್ಧ ನೀರು ಲಭ್ಯವಿಲ್ಲದೆ ಇರುವುದಕ್ಕೆ ಕಾರಣಗಳೇನು ;

(ಇ) ಜಲ ಶುದ್ಧೀಕರಣ ಘಟಕಗಳಲ್ಲಿ ತ್ಯಾಜ್ಯ ಗಿಡಗಂಟಿಗಳು ಹಾಗೂ ಪಾರ್ಥೇನಿಯಂ ಕಳೆ ಬೆಳೆದಿರುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಜಲ ಶುದ್ಧೀಕರಣ ಘಟಕಗಳ ಉಸ್ತುವಾರಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು ;

(ಉ) ಜಲ ಶುದ್ಧೀಕರಣ ಘಟಕಗಳನ್ನು ಯಾವ ಕಾಲ ಮಿತಿಯಲ್ಲಿ ಶುದ್ಧೀಕರಿಸಿ ಸಾರ್ವಜನಿಕರ ಉಪಯೋಗಕ್ಕೆ ಬಳಸಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ವಿದ್ಯಾರ್ಥಿಗಳಿಗೆ ಸಮವಸ್ತ್ರ ಮತ್ತು ಸೈಕಲ್ ವಿತರಿಸದೆ ಇರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೭ (೬೯೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿಯ ಸರ್ಕಾರಿ ಶಾಲೆಗಳು ಪ್ರಾರಂಭವಾಗಿದ್ದರೂ ಕೂಡಾ ಇನ್ನು ವಿದ್ಯಾರ್ಥಿಗಳಿಗೆ ಸಮವಸ್ತ್ರ ಹಾಗೂ ಸೈಕಲ್ ವಿತರಿಸದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿಯ ವಿದ್ಯಾರ್ಥಿಗಳಿಗೆ ಅವಶ್ಯವಿರುವ ಸಮವಸ್ತ್ರದ ಅವಶ್ಯಕತೆ ಇದೆಯೆ ;

(ಇ) ಈಗಾಗಲೇ ಸರ್ಕಾರವು ಖರೀದಿಸಿದ ಸಮವಸ್ತ್ರವೆಷ್ಟು ; ಇನ್ನು ಖರೀದಿಸಬೇಕಾದ ಸಮವಸ್ತ್ರವೆಷ್ಟು ;

(ಈ) ಸಮವಸ್ತ್ರವನ್ನು ಕರ್ನಾಟಕ ಖಾದಿ ಗ್ರಾಮೋದ್ಯೋಗ ಮಂಡಳಿಯಿಂದ ಖರೀದಿಸಿದೆಯೇ ಅಥವಾ ಬೇರೆ ಕಡೆಯಿಂದ ಖರೀದಿಸಿದೆಯೇ ;

(ಉ) ಶಾಲಾ ವಿದ್ಯಾರ್ಥಿಗಳಿಗೆ ಯಾವ ಕಾಲಮಿತಿಯಲ್ಲಿ ಸಮವಸ್ತ್ರ ಹಾಗೂ ಸೈಕಲ್ ವಿತರಿಸಲಾಗುವುದು ?

## ಪಿ.ಯು.ಸಿ ಫಲಿತಾಂಶದಿಂದ ಸಿಇಟಿ ಪರೀಕ್ಷೆ ಬರೆದ ವಿದ್ಯಾರ್ಥಿಗಳಿಗೆ ತೊಂದರೆಯಾದ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೮ (೬೯೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿಯ ಪಿಯುಸಿ ಪರೀಕ್ಷೆ ಫಲಿತಾಂಶ ಗೊಂದಲದಿಂದ ಸಿಇಟಿ ಪ್ರವೇಶ ಬಯಸಿ ಪರೀಕ್ಷೆ ಬರೆದ ವಿದ್ಯಾರ್ಥಿಗಳಿಗೆ ಫಲಿತಾಂಶಕ್ಕೆ ತೊಂದರೆ ಆಗಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸನ್ ೨೦೧೫ರ ಸಿಇಟಿ ಫಲಿತಾಂಶ ಪ್ರಕಟಣೆಯನ್ನು ಸರಕಾರ ನಿಗದಿತ ಅವಧಿಯಲ್ಲಿ ಪ್ರಕಟಿಸಿದೆಯೇ ;

(ಇ) ಸಿಇಟಿ ಫಲಿತಾಂಶದ ನಂತರ ದಾಖಲೆಗಳ ಪರಿಶೀಲನೆ ಮತ್ತು ಕೌನ್ಸಲಿಂಗ್‌ಗೆ ಸರಕಾರವು ವಿದ್ಯಾರ್ಥಿಗಳಿಗೆ ನಿಗದಿತ ಸಮಯವನ್ನು ನೀಡಿದೆಯೇ ;

(ಈ) ಪಿಯುಸಿ ಫಲಿತಾಂಶ ಗೊಂದಲದಿಂದ ಸಿಇಟಿ ವಿದ್ಯಾರ್ಥಿಗಳಿಗೆ ರ್‍ಯಾಕಿಂಗ್ ನೀಡುವಲ್ಲಿ ಗೊಂದಲ ಉಂಟಾಗಿದ್ದಕ್ಕೆ ಸರಕಾರ ಕೈಗೊಂಡ ಕ್ರಮಗಳೇನು ?

## ನಂಜಯ್ಯನಮಠ ಸಮಿತಿ ಶಿಫಾರಸ್ಸಿನಂತೆ ಹೊಸ ಗ್ರಾಮ ಪಂಚಾಯಿತಿಗಳನ್ನು ರಚಿಸಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೯ (೬೯೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಂಜಯ್ಯನಮಠ ಸಮಿತಿಯ ಶಿಫಾರಸ್ಸಿನ ಮೇರೆಗೆ ಹೊಸ ಗ್ರಾಮ ಪಂಚಾಯಿತಿಗಳನ್ನು ರಚಿಸಿ ಘೋಷಣೆ ಮಾಡಿರುವುದು ಸರಿ ಅಷ್ಟೆ ;

(ಆ) ರಾಜ್ಯದಲ್ಲಿ ಘೋಷಿಸಿರುವ ಹೊಸ ಗ್ರಾಮ ಪಂಚಾಯಿತಿಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲಾಗಿದೆಯೇ ;

(ಇ) ಒಟ್ಟು ಹೊಸ ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಕಟ್ಟಡ ಹೊಂದಿದ ಗ್ರಾಮ ಪಂಚಾಯಿತಿಗಳು ಎಷ್ಟು ; ಸ್ವಂತ ಕಟ್ಟಡ ಹೊಂದದೆ ಇರುವ ಗ್ರಾಮ ಪಂಚಾಯಿತಿಗಳು ಎಷ್ಟು ; ಅವು ಯಾವುವು ;

(ಈ) ಸ್ವಂತ ಕಟ್ಟಡ ಹೊಂದದೆ ಇರುವ ಗ್ರಾಮ ಪಂಚಾಯತಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ ಯಾವ ಸ್ಥಳಗಳಲ್ಲಿ ಸರಕಾರಿ ಕಟ್ಟಡದಲ್ಲಿದೆಯೋ ಅಥವಾ ಬಾಡಿಗೆ ಕಟ್ಟಡದಲ್ಲಿದೆಯೋ ? (ವಿವರಣೆ ಒದಗಿಸುವುದು)

## ಸರಕಾರಿ ಹುದ್ದೆಗಳಲ್ಲಿ ಅಂಗವಿಕಲರಿಗೆ ಮೀಸಲಾತಿ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೭೦ (೬೯೯) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರಕಾರಿ ಹುದ್ದೆಗಳಲ್ಲಿ ಅಂಗವಿಕಲರಿಗೆ ಶೇಕಡಾ ೫ ರಷ್ಟು ಮೀಸಲಾತಿ ಇದ್ದು, ಯಾವ ಯಾವ ಇಲಾಖೆಗಳು ಇದನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಿದೆ ;

(ಆ) ಅನುಷ್ಠಾನಗೊಳಿಸದ ಇಲಾಖೆಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ವಿವಿಧ ಇಲಾಖೆಗಳ ಹುದ್ದೆಗಳ ನೇಮಕಾತಿಗೆ ಅರ್ಜಿ ಸಲ್ಲಿಸುವ ಅಂಗವಿಕಲತೆಯ ಪ್ರಮಾಣ ನಿಖರವಾಗಿ ಎಷ್ಟಿರಬೇಕು ;

(ಈ) ಅಂಗವಿಕಲರ ಮಾಸಾಶನವನ್ನು ೫೦೦ ರಿಂದ ೧೫೦೦, ೧,೨೦೦ ರಿಂದ ೩,೦೦೦ ಕ್ಕೆ ಏರಿಕೆ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ ?

## ಜಿಲ್ಲಾ ಪಂಚಾಯತ್ ನೌಕರರನ್ನು ಸರಕಾರಿ ನೌಕರರೆಂದು ಪರಿಗಣಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೭೧ (೭೦೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಪಂಚಾಯತ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿಲೀನಗೊಂಡ ಹಾಗೂ ಹೊಸದಾಗಿ ನೇಮಕಗೊಂಡ ನೌಕರರ ಸಂಖ್ಯೆ ಎಷ್ಟು ;

(ಆ) ಇವರಲ್ಲಿ ಕೆಲವು ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಅವರಿಗೆ ಸರ್ಕಾರ ನೌಕರರಿಗೆ ಸಿಗುತ್ತಿರುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ;

(ಇ) ಕೆಲವು ನೌಕರರನ್ನು ಸರ್ಕಾರಿ ನೌಕರರಲ್ಲವೆಂದು ಪರಿಗಣಿಸಿ ಅವರಿಗೆ ಸರ್ಕಾರಿ ನೌಕರರಿಗೆ ಸಿಗುವ ಎಲ್ಲಾ ಸೌಲಭ್ಯಗಳಿಂದ ವಂಚಿತರಾಗಿ ಮಾಡಿರುವುದು ನಿಜವೇ ;

(ಈ) ಜಿಲ್ಲಾ ಪಂಚಾಯತ್ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸಚಿವ ಸಂಪುಟವು ಯಾವ ದಿನಾಂಕದಂದು ನಿರ್ಧರಿಸಿದೆ ;

(ಉ) ಸಚಿವ ಸಂಪುಟದ ನಿರ್ಣಯವನ್ನು ಅನುಷ್ಠಾನಗೊಳಿಸಲು ಇರುವ ತೊಂದರೆಗಳೇನು ;

(ಊ) ಈ ಕುರಿತು ವಿಳಂಬವಾಗಿ ಸರ್ಕಾರಿ ಆದೇಶ ಹೊರಡಿಸಿದಲ್ಲಿ ಹಲವಾರು ನೌಕರರು ಅವರಿಗೆ ಸಿಗಬೇಕಾದ ಸೌಲಭ್ಯಗಳಿಂದ ವಂಚಿತರಾಗುವುದಿಲ್ಲವೇ ?

(ಋ) ಈ ತಾರತಮ್ಯ ಪರಿಹರಿಸಿ ಸಚಿವ ಸಂಪುಟದ ನಿರ್ಣಯದಂತೆ ಜಿಲ್ಲಾ ಪಂಚಾಯತ್ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಯಾವಾಗ ಸರ್ಕಾರಿ ಆದೇಶ ಹೊರಡಿಸಲಾಗುವುದು ?

## ಕಾಲ್ಪನಿಕ ವೇತನ ಬಡ್ತಿ ಕುರಿತು ಸದನ ಸಮಿತಿ–ವರದಿ ಜಾರಿಗೊಳಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೭೨ (೬೯೮) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಅನುದಾನ ರಹಿತ ಅವಧಿಯನ್ನು ಕಾಲ್ಪನಿಕ ವೇತನ ನಿಗದಿಗೊಳಿಸಲು ಅಧ್ಯಯನ ನಡೆಸಿ ವರದಿ ಸಲ್ಲಿಸಲು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿಯವರ ನೇತೃತ್ವದಲ್ಲಿ ಸದನ ಸಮಿತಿಯನ್ನು ಯಾವಾಗ ರಚಿಸಲಾಯಿತು ;

(ಆ) ಈ ಸಮಿತಿಯು ತನ್ನ ಅಂತಿಮ ವರದಿಯನ್ನು ಸರ್ಕಾರಕ್ಕೆ ಯಾವ ದಿನಾಂಕದಂದು ಸಲ್ಲಿಸಿದೆ ;

(ಇ) ಈ ಸಮಿತಿಯ ವರದಿಯ ಪ್ರಮುಖ ಶಿಫಾರಸ್ಸುಗಳಾವುವು ;

(ಈ) ಸಮಿತಿಯ ಶಿಫಾರಸ್ಸುಗಳನ್ನು ಸರ್ಕಾರ ಒಪ್ಪಿದೆಯೇ ;

(ಉ) ಹಾಗಿದ್ದಲ್ಲಿ, ಈ ಶಿಫಾರಸ್ಸುಗಳನ್ನು ಯಥಾವತ್ತಾಗಿ ಜಾರಿಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಊ) ಹಾಗಿದ್ದಲ್ಲಿ, ಯಾವ ದಿನಾಂಕದಂದು ಸರ್ಕಾರ ಆದೇಶ ಹೊರಡಿಸಲಿದೆ ?

## ೧೯೯೫–೯೬ನೇ ಸಾಲಿನಿಂದ ಪ್ರಾರಂಭವಾದ ಶಿಕ್ಷಣ ಸಂಸ್ಥೆಗಳಿಗೆ ವೇತನಾನುದಾನ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೭೩ (೭೦೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೫–೯೬ನೇ ಶೈಕ್ಷಣಿಕ ವರ್ಷದಿಂದ ೨೦೧೪–೧೫ನೇ ಸಾಲಿನವರೆಗೆ ಪ್ರಾರಂಭಿಸಲಾದ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಈ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಉದ್ದೇಶಿಸಿದಲ್ಲಿ ಪ್ರತಿವರ್ಷ ಸರ್ಕಾರಕ್ಕೆ ಬೀಳಬಹುದಾದ ಆರ್ಥಿಕ ಹೊರೆ ಎಷ್ಟು ;

(ಇ) ಕಳೆದ ೨೦ ವರ್ಷಗಳಿಂದ ಈ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಯನ್ನು ಮಾನವೀಯ ನೆಲಗಟ್ಟಿನ ಮೇಲೆ ಹಂತ ಹಂತವಾಗಿ ವೇತನಾನುದಾನಕ್ಕೆ ಒಳಪಡಿಸಲು ಸಾಧ್ಯವಿಲ್ಲವೇ ;

(ಈ) ಪಕ್ಕದ ರಾಜ್ಯಗಳಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೊಳಪಡಿಸುವ ಪ್ರಕ್ರಿಯೆಯನ್ನು ಅಧ್ಯಯನ ಮಾಡಿ ಅವುಗಳಲ್ಲಿ ಸೂಕ್ತವಾದ ಪ್ರಕ್ರಿಯೆಯನ್ನು ನಮ್ಮ ರಾಜ್ಯದಲ್ಲಿ ಅಳವಡಿಸಿಕೊಳ್ಳಲು ಉದ್ದೇಶಿಸಲಾಗಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಕಂಪ್ಯೂಟರ್ ಶಿಕ್ಷಣವನ್ನು ಮುಂದುವರಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೭೪ (೭೦೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ನೀಡಲು ಈಗ ಯಾವ ಯೋಜನೆ ಜಾರಿಯಲ್ಲಿದೆ ; ವಿವರಿಸುವುದು ;

(ಆ) ಕಂಪ್ಯೂಟರ್ ಶಿಕ್ಷಣದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಸರ್ಕಾರ ವೆಚ್ಚ ಮಾಡಿದ ಅನುದಾನ ಎಷ್ಟು ;

(ಇ) ಸುಸಜ್ಜಿತ ಕಂಪ್ಯೂಟರ್ ಪ್ರಯೋಗಾಲಯ, ಯುಪಿಎಸ್ ಹಾಗೂ ಕಂಪ್ಯೂಟರ್‌ಗಳು ಇದ್ದರೂ ಕೂಡಾ ರಾಜ್ಯದಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ಪುನಃ ಪ್ರಾರಂಭಿಸಲು ಇರುವ ತೊಂದರೆಗಳೇನು ;

(ಈ) ರಾಜ್ಯದಲ್ಲಿ ಸರ್ಕಾರಿ ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣವನ್ನು ಯಾವ ದಿನಾಂಕದಿಂದ ಪುನರಾರಂಭಿಸಲಾಗುವುದು ;

(ಉ) ಈ ಯೋಜನೆ ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನವೆಷ್ಟು ;

(ಊ) ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನವೆಷ್ಟು ?

## ಮೌಲ್ಯ ಮಾಪನದಿಂದ ವಿದ್ಯಾರ್ಥಿಗಳಿಗಾದ ತೊಂದರೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭೫ (೭೦೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ ಮತ್ತು ಪದವಿ ಪೂರ್ವ ಶಿಕ್ಷಣ ಮಂಡಳಿಗಳು ೨೦೧೪–೧೫ನೇ ಸಾಲಿನಲ್ಲಿ ನಡೆಸಿದ ಪರೀಕ್ಷೆಗಳಲ್ಲಿ ಮೌಲ್ಯ ಮಾಪನ ದೋಷದಿಂದಾಗಿ ಹಾಗೂ ಮಂಡಳಿಗಳ ಬೇಜವಾಬ್ದಾರಿತನದಿಂದಾಗಿ ವಿದ್ಯಾರ್ಥಿಗಳ ಮುಂದಿನ ಭವಿಷ್ಯದ ಮೇಲೆ ಅಡ್ಡ ಪರಿಣಾಮ ಬೀರಿರುವುದಲ್ಲದೆ, ಪೋಷಕರು ಆತಂಕಕ್ಕೆ ಈಡಾಗಿರುವುದಲ್ಲದೆ, ಮುಂದಿನ ಭವಿಷ್ಯ ರೂಪಿಸಿಕೊಳ್ಳಲು ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮೌಲ್ಯ ಮಾಪಕರ ಹಾಗೂ ಸದರಿ ಮಂಡಳಿಗಳ ಅಚಾತುರ್ಯದಿಂದ ಎಷ್ಟು ವಿದ್ಯಾರ್ಥಿಗಳು ತೊಂದರೆಗೆ ಈಡಾಗಿದ್ದಾರೆ ;

(ಇ) ಮೌಲ್ಯ ಮಾಪನದಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿಗಳಿಗೆ ಸಿಇಟಿನಲ್ಲಿ ರ್‍ಯಾಂಕ್ ನೀಡಿ ಅವರುಗಳ ವಿದ್ಯಾಭ್ಯಾಸಕ್ಕೆ ತೊಂದರೆ ಆಗದಂತೆ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಈ) ತಪ್ಪಾಗಿ ಮೌಲ್ಯ ಮಾಪನ ಮಾಡಿದ ಶಿಕ್ಷಕರು ಮತ್ತು ಉಪನ್ಯಾಸಕರ ಹಾಗೂ ಮಂಡಳಿಗಳ ನಿರ್ದೇಶಕರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ?

## ಗ್ರಾಮಾಂತರ ಪ್ರದೇಶಗಳಲ್ಲಿನ ಕೆರೆಗಳ ಒತ್ತುವರಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭೬ (೭೦೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಸಣ್ಣ ಕೆರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕೆರೆಗಳಲ್ಲಿ ಎಷ್ಟು ಕೆರೆಗಳು ಅತಿಕ್ರಮಣಕ್ಕೆ ಒಳಗಾಗಿವೆ ; ಕೆರೆಗಳ ಅತಿಕ್ರಮಣದ ಬಗ್ಗೆ ಸರ್ವೆ ಕಾರ್ಯನಡೆಸಿ ಅತಿಕ್ರಮಣವನ್ನು ಗುರುತಿಸಿ ಅದನ್ನು ತೆರವು ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಇ) ಈ ಕೆರೆಗಳ ಹೂಳು ತೆಗೆಯಲು ಏರಿ ಕೋಡಿ ಮೊದಲಾದವುಗಳ ದುರಸ್ಥಿ ಕೈಗೊಳ್ಳಲು ಪ್ರಸಕ್ತ ಸಾಲಿನಲ್ಲಿ ಮೀಸಲಾಗಿಟ್ಟಿರುವ ಹಣ ಎಷ್ಟು ;

(ಈ) ಇದರಲ್ಲಿ, ಇದುವರೆವಿಗೂ ಮಂಜೂರಾದ ಮೊತ್ತ ಎಷ್ಟು; ವೆಚ್ಚ ಮಾಡಿರುವ ಅನುದಾನವೆಷ್ಟು ? (ವಿವರ ನೀಡುವುದು)

## ವಸತಿ ಯೋಜನೆಗಳ ಅನುಷ್ಠಾನ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭೭ (೭೦೬) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ವಸತಿ ಯೋಜನೆಗಳಿಗೆ ಬಿಡುಗಡೆ ಮಾಡಿರುವ ಮೊತ್ತವೆಷ್ಟು ;

(ಆ) ಇದರಲ್ಲಿ ವೆಚ್ಚ ಮಾಡಿರುವ ಅನುದಾನವೆಷ್ಟು ;

(ಇ) ವಿವಿಧ ವಸತಿ ಯೋಜನೆಗಳಡಿಯಲ್ಲಿ ರಾಜ್ಯದಾದ್ಯಂತ ಎಷ್ಟು ಮನೆಗಳನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಹೊಸದಾಗಿ ಇಲಾಖಾ ವತಿಯಿಂದ ಬಡಾವಣೆ ನಿರ್ಮಾಣ ಮಾಡಲು ಯಾವುದಾದರೂ ಯೋಜನೆಯನ್ನು ರೂಪಿಸಿದೆಯೇ ;

(ಉ) ಹಾಗಿದ್ದಲ್ಲಿ, ಅದು ಎಲ್ಲಿ, ಎಷ್ಟು ದಿನಗಳ ಒಳಗಾಗಿ ಇಲ್ಲಿ ಸಾರ್ವಜನಿಕರಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು ?

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಣೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭೮ (೭೦೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳ ಮಕ್ಕಳಿಗೆ ಪಠ್ಯ ಪುಸ್ತಕ ಮತ್ತು ಸಮವಸ್ತ್ರವನ್ನು ವಿತರಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಇದುವರೆವಿಗೂ ಎಷ್ಟು ಶಾಲೆಗಳಿಗೆ ಎಷ್ಟು ಮಕ್ಕಳಿಗೆ ಪಠ್ಯ ಪುಸ್ತಕ ಮತ್ತು ಸಮವಸ್ತ್ರಗಳನ್ನು ವಿತರಣೆ ಮಾಡಲಾಗಿದೆ ;

(ಇ) ಪ್ರತಿಯೊಬ್ಬ ವಿದ್ಯಾರ್ಥಿ/ವಿದ್ಯಾರ್ಥಿನಿಗೆ ಎಷ್ಟು ಜೊತೆ ಸಮವಸ್ತ್ರವನ್ನು ವಿತರಿಸಲಾಗುತ್ತಿದೆ ; ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ಶೂ ನೀಡಲು ತೀರ್ಮಾನಿಸಿದೆಯೇ ? (ವಿವರ ನೀಡುವುದು)

## ಅಂಗನವಾಡಿ ಕಾರ್ಯಕರ್ತರುಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭೯ (೭೦೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತರುಗಳ ಮತ್ತು ಸಹಾಯಕಿಯರ ಸಂಖ್ಯೆ ಎಷ್ಟು ;

(ಆ) ಇವರುಗಳಿಗೆ ಕೊಡುತ್ತಿರುವ ಗೌರವಧನ ಎಷ್ಟು ಮತ್ತು ಇವರುಗಳನ್ನು ಖಾಯಂ ನೌಕರರೆಂದು ಪರಿಗಣಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಇ) ಇತ್ತೀಚೆಗೆ ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕಿಯರು ರಾಜ್ಯದ ಮೂಲೆ ಮೂಲೆಗಳಿಂದ ಬೆಂಗಳೂರಿಗೆ ಬಂದು ಧರಣಿ ಮಾಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದರೆ, ಅವರು ಸರ್ಕಾರಕ್ಕೆ ಸಲ್ಲಿಸಿರುವ ಬೇಡಿಕೆಗಳೇನು ; ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ?

## ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮ ನಿರ್ದೇಶನ ಹೊಂದಿದವರು)** –

೪೮೦ (೬೪೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩–೧೪ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಗೆ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸರ್ಕಾರ ತೀರ್ಮಾನಿಸಿರುತ್ತದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಈಗಾಗಲೇ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವ ಸಲುವಾಗಿ ಕಟ್ಟಡಗಳನ್ನು ನಿರ್ಮಿಸಲಾಗಿದೆ ;

(ಇ) ಕಟ್ಟಡಗಳು ಸಿದ್ಧವಾಗಿರುವ ಗ್ರಾಮಗಳಿಗೆ ಸದರಿ ಯೋಜನೆಯನ್ನು ೨೦೧೪–೧೫ನೇ ಸಾಲಿನಲ್ಲಿ ಪ್ರಾರಂಭ ಮಾಡಲಾಗುವುದೇ ?

## ಕಲಬುರಗಿ ಜಿಲ್ಲೆಯ ವಸತಿ ಹಂಚಿಕೆ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮ ನಿರ್ದೇಶನ ಹೊಂದಿದವರು) –**

೫೮೧ (೬೫೫) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ನಿವೇಶನ ರಹಿತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕಳೆದ ೨ ವರ್ಷಗಳಲ್ಲಿ ಈ ವರೆವಿಗೆ ನಿವೇಶನ ರಹಿತರಿಗೆ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ನಗರ ಮತ್ತು ಗ್ರಾಮಾಂತರವಾರು ವಿವರ ಒದಗಿಸುವುದು)

(ಇ) ನಗರ ಪ್ರದೇಶದ ವಸತಿ ರಹಿತ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸುವಾಗ ಪಡಿತರ ಚೀಟಿ ದಾಖಲಾತಿ ಕೋರಲಾಗುತ್ತಿದ್ದು, ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಪಡಿತರ ಚೀಟಿಯು ಕಡ್ಡಾಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕದ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) –**

೫೮೨ (೬೫೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ೨೦೧೩–೧೪ರಿಂದ ಪ್ರಸಕ್ತ ಸಾಲಿನವರಿಗೂ ಅಳವಡಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಾಮಗಾರಿಗಳನ್ನು ಯಾವ ಏಜೆನ್ಸಿಗೆ ನೀಡಲಾಗಿದೆ ; ಗುತ್ತಿಗೆ ಕರಾರಿನ ಅಂಶಗಳೇನು ;

(ಇ) ಇವುಗಳಲ್ಲಿ ಲೋಕಾರ್ಪಣೆಗೊಂಡಂತಹ ಘಟಕಗಳ ಸಂಖ್ಯೆ ಎಷ್ಟು ; ಬಾಕಿ ಉಳಿದಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿಯಲು ಕಾರಣಗಳೇನು ; (ತಾಲ್ಲೂಕುವಾರು ಮತ್ತು ಕಾಮಗಾರಿವಾರು ವಿವರ ನೀಡುವುದು)

(ಈ) ಲೋಕಾರ್ಪಣೆಗೊಂಡು ಸ್ಥಗಿತಗೊಂಡ ಘಟಕಗಳ ಸಂಖ್ಯೆ ಎಷ್ಟು ; ಇದಕ್ಕೆ ಕಾರಣಗಳೇನು ;

(ಉ) ದುರಸ್ಥಿಗೊಳಗಾದ ಘಟಕಗಳನ್ನು ದುರಸ್ಥಿಗೊಳಿಸುವಲ್ಲಿ ಸಂಬಂಧಪಟ್ಟ ಏಜೆನ್ಸಿ ಮತ್ತು ಇಲಾಖೆಯವರು ವಿಳಂಬ ನೀತಿ ಅನುಸರಿಸುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರಕಾರ ಕೈಗೊಂಡ ಕ್ರಮಗಳೇನು ?

## ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** –

೪೮೩ (೬೪೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಮತ್ತು ಸ್ವಂತ ಕಟ್ಟಡ ಹೊಂದಿರದ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಇ) ಅಂಗನವಾಡಿಗಳ ದುರಸ್ಥಿಗಾಗಿ ೨೦೧೩–೧೪ ರಿಂದ ಪ್ರಸ್ತುತ ಸಾಲಿನವರೆಗೂ ಸ್ವೀಕೃತವಾದ ಅನುದಾನ ಎಷ್ಟು ;

(ಈ) ಸದರಿ ಅನುದಾನವನ್ನು ಯಾವ ಯಾವ ಅಂಗನವಾಡಿ ಕೇಂದ್ರಗಳ ದುರಸ್ಥಿಗೆ ವಿನಿಯೋಗಿಸಲಾಗಿದೆ ; ದುರಸ್ಥಿ ಕಾರ್ಯ ಕೈಗೊಂಡ ಸಂಸ್ಥೆ ಯಾವುದು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ದುರಸ್ಥಿಗೊಳಪಡಿಸಬೇಕಾದ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಪ್ರವಾಸಿ ಟ್ಯಾಕ್ಸಿ ವಿತರಣೆ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** –

೪೮೪ (೬೪೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ೨೦೧೪–೧೫ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಪ್ರವಾಸಿ ಟ್ಯಾಕ್ಸಿ ವಿತರಿಸುವ ಕಾರ್ಯ ಯಾವ ಹಂತದಲ್ಲಿದೆ ;

(ಆ) ಇದುವರೆಗೂ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು ;

(ಇ) ಫಲಾನುಭವಿಗಳ ಆಯ್ಕೆಪಟ್ಟಿಯನ್ನು ತಯಾರಿಸಲಾಗಿದೆಯೇ ; (ತಯಾರಿಸಿದ್ದಲ್ಲಿ ಪಟ್ಟಿಯನ್ನು ನೀಡುವುದು)

(ಈ) ಆಯ್ಕೆ ಪ್ರಕ್ರಿಯೆಗೆ ಇರುವ ಮಾನದಂಡಗಳೇನು ; (ಆಯ್ಕೆ ಸಮಿತಿ ಸದಸ್ಯರ ವಿವರಗಳನ್ನು ನೀಡುವುದು)

(ಉ) ಸಮಿತಿಯಲ್ಲಿ ಕೈಗೊಂಡ ನಿರ್ಣಯಗಳೇನು ? (ನಡವಳಿಗಳ ಪ್ರತಿಯನ್ನು ನೀಡುವುದು)

## ಕಾವೇರಿ ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರ

**ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೪೮೫ (೨೦೭) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾವೇರಿ ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರವನ್ನು ಸ್ಥಾಪಿಸಲಾಗಿದೆಯೇ ; ಇದರ ರೂಪುರೇಷೆ ಹಾಗೂ ಕಾರ್ಯನೀತಿಗಳೇನು ; ಈ ಪ್ರಾಧಿಕಾರಕ್ಕೆ ವಿಶೇಷ ಅಧಿಕಾರ ನೀಡಲಾಗಿದೆಯೇ ; ಈ ಪ್ರಾಧಿಕಾರಕ್ಕೆ ವಿಶೇಷ ಅನುದಾನವನ್ನೇನಾದರು ಒದಗಿಸಲಾಗಿದೆಯೇ ; ಹಾಗಿದ್ದಲ್ಲಿ, ಒದಗಿಸಿರುವ ಅನುದಾನ ಎಷ್ಟು ? (ವಿವರ ಒದಗಿಸುವುದು)

(ಆ) ಈ ಪ್ರಾಧಿಕಾರದ ಅಡಿಯಲ್ಲಿ ಬರುವ ಪ್ರವಾಸೋದ್ಯಮ ಸ್ಥಳಗಳು ಯಾವುದು ; ಈ ಸ್ಥಳಗಳಲ್ಲಿ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ ; ಇದಕ್ಕೆ ಒದಗಿಸಿರುವ ಅನುದಾನ ಎಷ್ಟು ? (ಪ್ರತಿಯೊಂದು ಪ್ರವಾಸಿ ಸ್ಥಳದ ವಿವರ ಒದಗಿಸುವುದು)

## ಮೈಸೂರಿಗೆ ವಿಮಾನಯಾನ ಸೌಲಭ್ಯ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೮೬ (೨೦೮) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿಗೆ ವಿಮಾನಯಾನ ಸೌಲಭ್ಯ ಕಲ್ಪಿಸಲು ಏರ್ ಇಂಡಿಯಾ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆಯೇ ; ಯಾವಾಗಿನಿಂದ ಮೈಸೂರಿಗೆ ವಿಮಾನಯಾನ ಸೌಲಭ್ಯ ಕಲ್ಪಿಸಲಾಗುವುದು ;

(ಆ) ಮೈಸೂರು ವಿಮಾನ ನಿಲ್ದಾಣದ ವಿಸ್ತರಣಾ ಕಾರ್ಯ ನಡೆಯುತ್ತಿದೆಯೇ ; ಇದು ಯಾವ ಹಂತದಲ್ಲಿದೆ ; ವಿಮಾನ ನಿಲ್ದಾಣದ ವಿಸ್ತರಣೆಗೆ ಅಗತ್ಯವಾದ ಭೂಮಿಯನ್ನು ರಾಜ್ಯ ಸರ್ಕಾರ ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ ಹಸ್ತಾಂತರಿಸಿದೆಯೇ ?

## ೨೦೧೫–೨೦೧೬ನೇ ಸಾಲಿನಲ್ಲಿ ಶಾಲಾ ಮಕ್ಕಳಿಗೆ ಶೂ ನೀಡಿರುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮ ನಿರ್ದೇಶನ ಹೊಂದಿದವರು) –**

೪೮೭ (೬೬೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೨೦೧೬ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಶಾಲಾ ಮಕ್ಕಳಿಗೆ ಶೂ ಹಾಗೂ ಸಾಕ್ಸ್ ವಿತರಣೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಉರ್ದು ಶಾಲೆಯಲ್ಲಿ ಎಷ್ಟು ಹೆಣ್ಣು ಮತ್ತು ಗಂಡು ಮಕ್ಕಳಿಗೆ ವಿತರಿಸಲಾಗಿದೆ ;

(ಇ) ಈ ಕಾರ್ಯಕ್ರಮದಲ್ಲಿ ವಿಳಂಬವಾಗಿದೆಯೇ ? (ವಿಳಂಬವಾಗಿದ್ದರೆ ಮಾಹಿತಿ ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು